ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 10 2013

# ಕನ್ನಡ ಭಾರತಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ನೊಂದವರ ನೈಜ ಕನ್ನಡಿ

ಸಂಪುಟ : 12 ಸಂಚಿಕೆ : 218

21–2–2025 ಶುಕ್ರವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 218

## ಕರ್ನಾಟಕ ಅರಣ್ಯ ಪಡೆಗಳ ಮೊದಲ ಮಹಿಳಾ ಮುಖ್ಯಸ್ಥೆಯಾಗಿ ಮೀನಾಕ್ಷಿ ನೇಗಿ ನೇಮಕ

**ಬೆಂಗಳೂರು:** ಕರ್ನಾಟಕ ಅರಣ್ಯ ಪಡೆಗಳ ಮೊದಲ ಮಹಿಳಾ ಮುಖ್ಯಸ್ಥೆಯಾಗಿ ಹಿರಿಯ ಐಎಫ್‌ಎಸ್ ಅಧಿಕಾರಿ ಮೀನಾಕ್ಷಿ ನೇಗಿ ಅವರನ್ನು ನೇಮಕ ಮಾಡಿ ರಾಜ್ಯ ಸರ್ಕಾರ ಗುರುವಾರ ಆದೇಶ ಹೊರಡಿಸಿದೆ.



1989ರ ಬ್ಯಾಚ್‌ನ ಕರ್ನಾಟಕ ಕೇಡರ್ ನ ಐಎಫ್‌ಎಸ್ ಅಧಿಕಾರಿಯಾಗಿರುವ ಮೀನಾಕ್ಷಿ ನೇಗಿ ಅವರನ್ನು ಅರಣ್ಯ ಪಡೆಗಳ ಮುಖ್ಯಸ್ಥರಾಗಿ ನೇಮಕ ಮಾಡಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಇಂದು ಆದೇಶ ಹೊರಡಿಸಿದೆ.

ಮೀನಾಕ್ಷಿ ನೇಗಿ ಅವರು ಮೂಲತಃ ಉತ್ತರಾಖಂಡದವರಾಗಿದ್ದು, ರಾಷ್ಟ್ರೀಯ ಮಹಿಳಾ ಆಯೋಗದ ಸದಸ್ಯ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸುತ್ತಿದ್ದರು. ಈಗ ಆ ಸೇವೆಯಿಂದ ಕೇಂದ್ರ ಸರ್ಕಾರ ಬಿಡುಗಡೆ ಮಾಡಿದ್ದು, ಇದೀಗ ಕರ್ನಾಟಕದ ಅರಣ್ಯ ಪಡೆಗಳ ಮುಖ್ಯಸ್ಥರಾಗಿ ನೇಮಕ ಮಾಡಲಾಗಿದೆ.

ಕರ್ನಾಟಕ ಕೇಡರ್‌ನ ಅಧಿಕಾರಿಯಾಗಿ 35 ವರ್ಷಗಳಿಂದ ಅವರು ಸೇವೆ ಸಲ್ಲಿಸುತ್ತಿದ್ದಾರೆ. ದಕ್ಷ ಅಧಿಕಾರಿಯೆಂದು ಹೆಸರು ಮಾಡಿರುವ ಮೀನಾಕ್ಷಿ ನೇಗಿ ಬಳ್ಳಾರಿ, ಚಿಕ್ಕಮಗಳೂರು, ಮಂಡ್ಯದಲ್ಲಿ ಡಿಸಿಎಫ್ ಆಗಿ ಕೆಲಸ ಮಾಡಿದ್ದಾರೆ. ಬಳಿಕ ಕೇಂದ್ರ ಸರ್ಕಾರದ ಸೇವೆಗೆ ನಿಯೋಜನೆಗೊಂಡ ಅವರು ಆಯುಷ್ ಇಲಾಖೆಯ ಜಂಟಿ ಕಾರ್ಯದರ್ಶಿಯಾಗಿದ್ದರು.

ಕಳೆದ 2 ವರ್ಷಗಳಿಂದ ಅವರು ಕೇಂದ್ರ ಮಹಿಳಾ ಆಯೋಗದ ಸದಸ್ಯ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸುತ್ತಿದ್ದರು.

ಮೀನಾಕ್ಷಿ ನೇಗಿ ಅವರ ಪತಿ ವಿಜಯ ಶರ್ಮಾ ಕೂಡ ಕರ್ನಾಟಕ ಕೇಡರ್‌ನ ಐಎಫ್‌ಎಸ್ ಅಧಿಕಾರಿಯಾಗಿದ್ದರು ಮತ್ತು ಕಳೆದ ಜನವರಿಯಲ್ಲಿ ಸೇವೆಯಿಂದ ನಿವೃತ್ತರಾಗಿದ್ದಾರೆ.

## ಪ್ರೇಯಸಿ ಕೊಂದು ಆತ್ಮಹತ್ಯೆಗೆ ಶರಣಾದ ಯುವಕ



**ಚಿಕ್ಕಮಗಳೂರು:** ಯುವಕನೋರ್ವ ಮಹಿಳೆಯನ್ನು ಕತ್ತು ಸೀಳಿ ಕೊಲೆಮಾಡಿ ತಾನು ಆತ್ಮಹತ್ಯೆಗೆ ಶರಣಾಗಿರುವ ಘಟನೆ ಚಿಕ್ಕಮಗಳೂರು ತಾಲೂಕಿನ ದಾಸರಹಳ್ಳಿ ಗ್ರಾಮದ ಬಳಿ ಘಟನೆ ನಡೆದಿದೆ.

ನೇಣು ಬಿಗಿದ ಸ್ಥಿತಿಯಲ್ಲಿ ಯುವಕನ ಶವ ಪತ್ತೆಯಾಗಿದ್ದರೆ, ಕಾರಿನಲ್ಲಿ ಕತ್ತು ಸೀಳಿದ ಸ್ಥಿತಿಯಲ್ಲಿ ಮಹಿಳೆ ಶವ ಪತ್ತೆಯಾಗಿದೆ. ಇಬ್ಬರು ಪ್ರೇಮಿಗಳಾಗಿರಬಹುದು ಎಂದು ಶಂಕಿಸಲಾಗಿದೆ. ಶಿವಮೊಗ್ಗ ಜಿಲ್ಲೆ ಭದ್ರಾವತಿ ಮೂಲದ ಮಧು, ರಾಮನಗರ ಜಿಲ್ಲೆ ಮೂಲದ ಮಹಿಳೆ ಎಂದು ಗುರುತಿಸಲಾಗಿದೆ. ಮಧು ರಾಮನಗರ ಜಿಲ್ಲೆಯಲ್ಲಿ ಡ್ರೈವರ್ ವೃತ್ತಿ ಮಾಡಿಕೊಂಡಿದ್ದ ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದ್ದು, ಕೆ.ಎ.3 ಸಿಜೆ4628 ಕಾರಿನಲ್ಲಿ ಬಂದಿರುವ ಇವರು ಕೈಮರ ಸಮೀಪದ ದಾಸರಹಳ್ಳಿ ಹೋಗುವ ರಸ್ತೆಯಲ್ಲಿ ಮಹಿಳೆಯ ಕತ್ತುಸೀಳಿ ಕೊಲೆ ಮಾಡಿ ತಾನು ಅಲ್ಲೇ ಸಮೀಪದಲ್ಲಿನ ಮರಕ್ಕೆ ವೇಲ್‌ನಿಂದ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾರೆ.

ಈ ಸಂಬಂಧ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಕೈಗೊಳ್ಳಲಾಗಿದೆ. ತನಿಖೆ ಬಳಿಕ ಕೊಲೆ ಮತ್ತು ಆತ್ಮಹತ್ಯೆಗೆ ನಿಖರ ಕಾರಣ ತಿಳಿದು ಬರಲಿದೆ.

### ಉದಯಗಿರಿ ಠಾಣೆ ಮೇಲೆ ಕಲ್ಲು ತೂರಾಟ ಪ್ರಕರಣ:

## ಗಲಭೆಗೆ ಪ್ರಚೋದನೆ ನೀಡಿದ್ದ ಮೌಲ್ವಿ ಬಂಧನ

**ಮೈಸೂರು:** ಉದಯಗಿರಿ ಪೊಲೀಸ್ ಠಾಣೆ ಮೇಲೆ ನಡೆದ ಕಲ್ಲು ತೂರಾಟ ನಡೆದಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಚೋದನಕಾರಿ ಭಾಷಣ ಮಾಡಿದ್ದ ಮೌಲ್ವಿಯನ್ನು ಸಿಸಿಬಿ ಪೊಲೀಸರು ಗುರುವಾರ ಬಂಧನಕ್ಕೊಳಪಡಿಸಿದ್ದಾರೆ.



ಮುಫ್ತಿ ಮುಸ್ತಾಕ್ ಬಂಧಿತ ಆರೋಪಿ. ಘಟನೆ ನಡೆದು 11ದಿನಗಳಬಳಿಕಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ. ಘಟನೆ ಬಳಿಕ ಮೌಲ್ವಿಯ ವಿಡಿಯೋವೊಂದು ವೈರಲ್ ಆಗಿತ್ತು.ಗಲಭೆಗೆ ಈ ಪ್ರಚೋದನಾಕಾರಿ ಭಾಷಣವೇ ಕಾರಣ ಎಂದು ಹೇಳಲಾಗುತ್ತಿತ್ತು. ಹೀಗಾಗಿ, ಆರೋಪಿಯ ಬಂಧನಕ್ಕೆ ಸರ್ಕಾರದ ಮೇಲೆ ಒತ್ತಡ ಹೆಚ್ಚಾಗಿತ್ತು.

ಸೋಷಿಯಲ್ ಮಿಡೀಯಾದಲ್ಲಿ ವ್ಯಕ್ತಿಯೊಬ್ಬ ಮಾಡಿದ್ದ ಪೋಸ್ಟ್‌ವೊಂದು ಒಂದು ಸಮುದಾಯವನ್ನು ಕೆರಳಿಸಿತ್ತು. ದೆಹಲಿಯಲ್ಲಿ ಬಿಜೆಪಿ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಯುವಕನೋರ್ವ ಸಂಸದ ರಾಹುಲ್ ಗಾಂಧಿ, ಉತತರಪ್ರದೇಶದ ಮಾಜಿ ಮುಖ್ಯಮಂತ್ರಿ ಅಖಿಲೇಶ್ ಯಾದವ್ ಹಾಗೂ ದೆಹಲಿ ಮಾಜಿ ಮುಖ್ಯಮಂತ್ರಿ ಅರವಿಂದ ಕೇಜ್ರಿವಾಲ್ ವಿವಸ್ತ್ರಗೊಳಿಸಿ, ಭಾವಚಿತ್ರಕ್ಕೆ ತಲೆ ಮೇಲೆ ಮುಸ್ಲಿಮರು ಬಳಸುವ ಟೋಪ್ಪಿ ಇಟ್ಟು, ದೇಹದ ಮೇಲೆಲ್ಲಾ ಉರ್ದು ಭಾಷೆಯ ಕೆಲ ಪದ ಬರೆದು ಪೋಸ್ಟ್ ಮಾಡಿದ್ದ. ಇದು ಮುಸ್ಲಿಂ ಸಮುದಾಯದವರು ಕೆರಳುವಂತೆ ಮಾಡಿತ್ತು.

# ಮುಡಾ ಕೇಸ್‌ನಲ್ಲಿ ಸಿಎಂ ಸಿದ್ದರಾಮಯ್ಯ ಕುಟುಂಬಕ್ಕೆ ಕ್ಲೀನ್ ಚಿಟ್

# ಲೋಕಾಯುಕ್ತ ಪೊಲೀಸರಿಂದ ಕೋರ್ಟ್‌ಗೆ ವರದಿ ಸಲ್ಲಿಕೆ

**ಬೆಂಗಳೂರು:** ಮುಡಾ ಪ್ರಕರಣದಲ್ಲಿ ಲೋಕಾಯುಕ್ತ ಪೊಲೀಸರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕ್ಲೀನ್ ಚಿಟ್ ನೀಡಿದ್ದು, ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ತನಿಖಾ ವರದಿಯನ್ನು ಸಲ್ಲಿಕೆ ಮಾಡಿದ್ದಾರೆ.

ತನಿಖಾಧಿಕಾರಿ ಎಸ್‌ಪಿ ಉದೇಶ್ ಅವರು, ಇಂದು ಬೆಳಗ್ಗೆ ಅಂತಿಮ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಕೆ ಮಾಡಿದ್ದಾರೆ.

82ನೇ ಸಿಟಿ ಸಿವಿಲ್ ಕೋರ್ಟ್‌ನ ನ್ಯಾ.ಸಂತೋಷ್ ಗಜಾನನ ಭಟ್ ಅವರ ಮುಂದೆ 11, 000 ಸಾವಿರ ಪುಟಗಳ ವರದಿಯನ್ನು ಸಲ್ಲಿಸಿದ್ದಾರೆ.

50 ಜನರ ಹೇಳಿಕೆಗಳನ್ನು ದಾಖಲು ಮಾಡಿದ ಪೊಲೀಸರು, 27 ಸಂಪುಟ, 11,000 ಪುಟಗಳ ತನಿಖಾ ವರದಿಯನ್ನು ಬಿ ರಿಪೋರ್ಟ್ ಎಂದೇ ಉಲ್ಲೇಖಿಸಿದ್ದಾರೆ.

ಸಾಕ್ಷ್ಯಾಧಾರಗಳ ಕೊರತೆಯಿಂದಾಗಿ ಲೋಕಾಯುಕ್ತ ಪೊಲೀಸರು ಬಿ ರಿಪೋರ್ಟ್ ಸಲ್ಲಿಸಿದ್ದಾರೆ. ಪೊಲೀಸರು 50ಕ್ಕೂ ಹೆಚ್ಚು ಜನರ ಹೇಳಿಕೆಗಳನ್ನು ದಾಖಲಿಸಿಕೊಂಡಿದ್ದಾರೆ. ಪ್ರಕರಣದಲ್ಲಿ ಯಾವುದೇ ಸಾಕ್ಷ್ಯಾಧಾರಗಳು ದೊರೆತಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ. ಇದರಿಂದಾಗಿ ಮುಖ್ಯಮಂತ್ರಿ




ಸಿದ್ದರಾಮಯ್ಯ, ಅವರ ಪತ್ನಿ ಪಾರ್ವತಿ, ಮಲ್ಲಿಕಾರ್ಜುನ ಸ್ವಾಮಿ ಮತ್ತು ದೇವರಾಜ್ ಅವರಿಗೆ ಕ್ಲೀನ್ ಚಿಟ್ ನೀಡಲಾಗಿದೆ.

ಸದ್ಯ ಅಂತಿಮ ವರದಿ ಸಲ್ಲಿಕೆಯಾದರೂ ಪ್ರಕರಣದ ತನಿಖೆ ಮುಂದುವರೆಯಲಿದೆ. ಕ್ಲೀನ್ ಚಿಟ್ ನೀಡಿದ ನಾಲ್ವರನ್ನು ಹೊರತುಪಡಿಸಿ ಉಳಿದವರ ವಿರುದ್ಧ ಲೋಕಾಯುಕ್ತ ಪೊಲೀಸರು ತನಿಖೆ ಮುಂದುವರಿಸಲಿದ್ದಾರೆ.

ದೂರುದಾರ ಸ್ನೇಹಮಯಿ ಕೃಷ್ಣ ನೀಡಿದ್ದ ದೂರಿನಲ್ಲಿ ಯಾವುದೇ ಸಾಕ್ಷ್ಯವಿಲ್ಲ ಎಂದು ಲೋಕಾಯುಕ್ತ ಪೊಲೀಸರು ಸ್ಪಷ್ಟಪಡಿಸಿದ್ದಾರೆ.

ಅಲ್ಲದೆ, ಸಾಕ್ಷ್ಯಾಧಾರಗಳ ಕೊರತೆ ಎಂದು ಸ್ನೇಹಮಯಿ ಕೃಷ್ಣಗೆ ಲೋಕಾಯುಕ್ತ ನೋಟಿಸ್ ನೀಡಿದೆ. ಇದರಿಂದ ದೂರುದಾರ ಸ್ನೇಹಮಯಿ ಕೃಷ್ಣ ಲೋಕಾಯುಕ್ತ ವಿರುದ್ಧ ಕೆಂಡಾಮಂಡಲಗೊಂಡಿದ್ದಾರೆ.

ಮೊದಲಿನಿಂದಲೂ ಈ ಪ್ರಕರಣದ ಸರಿಯಾಗಿ ತನಿಖೆ ನಡೆಯುತ್ತಿಲ್ಲ ಎಂದು ಹೇಳುತ್ತಿದ್ದೆ, ಈಗ ಸಾಕ್ಷ್ಯಾಧಾರಗಳ ಕೊರತೆ ಎಂದು ಬಿ ರಿಪೋರ್ಟ್ ಹಾಕಲು ಹೊರಟಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಇಷ್ಟೊಂದು ದಾಖಲೆಗಳಿದ್ದರೂ ಸಾಕ್ಷ್ಯಾಧಾರಗಳ ಕೊರತೆ ಎಂದು ಹೇಳುತ್ತಿರುವುದು ಸರಿಯಲ್ಲ. 10ನೇ ತರಗತಿ ಪಾಸಾದ ನನಗೆ ಕಾನೂನಿನ ಅರಿವಿರುವಷ್ಟು ಲೋಕಾಯುಕ್ತ ಅಧಿಕಾರಿಗಳಿಗೆ ಇಲ್ಲವೇ? ಸಿಎಂ ಸಿದ್ದರಾಮಯ್ಯ ಮತ್ತು ಅವರ ಕುಟುಂಬವನ್ನು ರಕ್ಷಿಸಲು ಲೋಕಾಯುಕ್ತ ಅಧಿಕಾರಿಗಳು ತನಿಖೆ ಮುಗಿಯುವ ಮುನ್ನವೇ ವರದಿ ಸಲ್ಲಿಸಲು ಹೊರಟಿದ್ದಾರೆ ಎಂದು ಆರೋಪಿಸಿದ್ದಾರೆ.

ಏತನ್ಮಧ್ಯೆ ಪ್ರತಿಕ್ರಿಯೆ ನೀಡಿರುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು, ಈ ಪ್ರಕರಣದ ಪ್ರಾರಂಭದಲ್ಲೇ ನಾನು ಹೇಳಿದ್ದೆ. ಬಿಜೆಪಿ ಹಾಗೂ ಜೆಡಿಎಸ್‌ನವರು ಬೆಂಗಳೂರಿನಿಂದ ಮೈಸೂರುವರೆಗೆ ಪಾದಯಾತ್ರೆ ಮಾಡಿದಾಗಲೇ, ನಾನು ಏನು ಹೇಳಬೇಕೋ ಹೇಳಿದ್ದೆ. ಇದು ರಾಜಕೀಯ ಪ್ರೇರಿತ ಆರೋಪ. ಯಾವ ದಾಖಲೆಯಲ್ಲೂ ಸಿದ್ದರಾಮಯ್ಯ ಅವರ ಸಹಿ ಇಲ್ಲದಿರುವಾಗ, ಸಂಬಂಧವೇ ಇಲ್ಲದಿರುವಾಗ ಅವರ ಪಾತ್ರ ಹೇಗೆ ಬರುತ್ತದೆ? ಆಸ್ತಿ ಕಳೆದುಕೊಂಡವರು ಪರಿಹಾರ ಕೇಳುವುದು ಸಹಜ. ನಾವು ನೀವು ಕೂಡ ಕೇಳುತ್ತೇವೆ. ಮುಡಾದವರು ಕೊಟ್ಟಿದ್ದಾರೆ. ನಮಗೆ ಇಂತಹದೇ ಜಾಗದಲ್ಲಿ ನಿವೇಶನ ನೀಡಿ ಎಂದು ಅವರು ಎಲ್ಲಿಯೂ ಕೇಳಿಲ್ಲ ಎಂದು ಸಮರ್ಥಿಸಿಕೊಂಡರು.

ಆದರೂ ಅನಗತ್ಯ ಗೊಂದಲ ಬೇಡ ಎಂದು ಅವರು ಈ ನಿವೇಶನಗಳನ್ನು ವಾಪಸ್ ನೀಡಿದ್ದಾರೆ. ಯಾವುದೇ ಪ್ರಕರಣ ದಾಖಲಿಸುವಾಗ ಅದಕ್ಕೆ ಪೂರಕವಾದ ದಾಖಲೆ ಬೇಕು. ಲೋಕಾಯುಕ್ತ ಸಂಸ್ಥೆ ತನ್ನ ಕರ್ತವ್ಯ ಮಾಡಿದೆ. ಬಿಜೆಪಿಯವರು ತಮ್ಮ ಹೋರಾಟ ಮಾಡಿಕೊಳ್ಳಲಿ. ದೆಹಲಿಯಿಂದ ವಕೀಲರನ್ನು ಕರೆಸಿ ವಾದ ಮಂಡಿಸಲು ನಮಗೆ ಗೊತ್ತಿಲ್ಲವೇ? ಇದು ಬಿಜೆಪಿ ಹಾಗೂ ಜೆಡಿಎಸ್ ಪಕ್ಷದ ಕುತಂತ್ರ. ಇದು ಹೆಚ್ಚು ದಿನ ನಡೆಯುವುದಿಲ್ಲ ಎಂದು ತಿರುಗೇಟು ನೀಡಿದರು.

## ಮಾನವೀಯತೆಯ ರಾಯಭಾರಿಗಳಾಗಲು ಇಮಾಂ ಕೃತಿ ಸಹಕಾರಿ: ವಿಧಾನಸಭಾಧ್ಯಕ್ಷ ಯು.ಟಿ. ಖಾದರ್




**ದಾವಣಗೆರೆ:** ಆಧುನಿಕ ಯುವಜನಾಂಗ ಸೆಲ್ಫೀ ಫೋಟೋ ತೆಗೆದುಕೊಳ್ಳುತ್ತಾ ಪೂರ್ತಿ ಸೆಲ್ಫಿಶ್ ಗಳಾಗಿದ್ದಾರೆ. ಜೆ.ಎಂ. ಇಮಾಂ ಅವರಂತಹ ಸಾಧಕರ ಕೃತಿಗಳನ್ನು ಓದುವುದರಿಂದ ಅವರ ಜೀವನದಲ್ಲೂ ಬದಲಾವಣೆ ಆಗಬಹುದು ಎಂಬ ಆಶಯವನ್ನು ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ವ್ಯಕ್ತಪಡಿಸಿದರು.

ಗುರುವಾರ ನಗರದ ಕುವೆಂಪು ಕನ್ನಡ ಭವನದಲ್ಲಿ ಜೆ.ಎಂ. ಇಮಾಂ ಟ್ರಸ್ಟ್ ಹಾಗೂ ಜೆ.ಎಂ. ಇಮಾಂ ಸ್ಮಾರಕ ಶಾಲೆ ವತಿಯಿಂದ ಹಮ್ಮಿಕೊಂಡಿದ್ದ 'ಮಾನವತೆಯ ಬೆಳಕು –ಜಗಲೂರು ಮಹಮದ್ ಇಮಾಂ' ಕೃತಿಯ ಲೋಕಾರ್ಪಣೆ ಸಮಾರಂಭದಲ್ಲಿ ಕೈಗೊಂಡು ಮಾತನಾಡಿದರು.

ಎಲ್ಲ ಧರ್ಮಗಳಿಗೂ ಮೀರಿ ಮುಂದೆ ನಿಂತಿರುವುದು ಇದೆ ಎಂದಾದರೆ ಅದು ಮಾನವೀಯತೆ. ಗಾಂಧೀಜಿ, ಅಂಬೇಡ್ಕರ್, ಇಮಾಂರಂತಹ ಮಾನವತಾವಾದಿಗಳು ನಮ್ಮ ಯುವಜನಾಂಗಕ್ಕೆ ಮಾರ್ಗದರ್ಶಕವಾಗಬೇಕಿದೆ. ಯುವಜನತೆ ತಮ್ಮ ತಂದೆ–ತಾಯಿ ಹಾಗೂ ದೇಶದ ಸಂಪತ್ತಾಗಿ ರೂಪುಗೊಳ್ಳುವ ಜೊತೆಗೆ ಮಾನವೀಯತೆಯ ರಾಯಭಾರಿಗಳಾಗಬೇಕು. ಈ ನಿಟ್ಟಿನಲ್ಲಿ ಇಮಾಂ ಅವರ ಕುರಿತಾದ ಕೃತಿ ಸಹಕಾರಿಯಾಗಲಿದೆ ಎಂದು ಆಶಿಸಿದರು.

ನೀವು ಇರುವಾಗಲೂ, ಹೋದ ನಂತರವೂ ಆಸ್ತಿ, ಅಧಿಕಾರ, ಅಂತಸ್ತು ಯಾವುದೂ ನಿಮ್ಮ ಹೆಸರನ್ನು ನೆನಪಿಸದು. ಆದರೆ ನೀವು ತೋರಿದ ಪ್ರೀತಿ, ವಿಶ್ವಾಸ ಹಾಗೂ ಮಾನವೀಯತೆಯ ಕೆಲಸಗಳಿಂದ ನಿಮ್ಮನ್ನು ನೆನಪಿಸಿಕೊಳ್ಳಲಾಗುವುದು. ಜೆ.ಎಂ. ಇಮಾಂ ಅವರ ನ್ಯಾಯಪರ, ಜಾತ್ಯಾತೀತ ವ್ಯಕ್ತಿತ್ವ ಇಂದಿಗೂ ಮಾದರಿಯಾಗಿದೆ. ಅವರು ಕೈಗೊಂಡ ಕೆಲಸಗಳು ಸದಾ ಸ್ಮರಣೀಯ. ಅವರ ಕುರಿತಾದ ಕೃತಿ ಓದಿದರೆ ಸಾಲದು. ಅವರ ಅದರ್ಶಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಯಾರಿಗೂ ಹುಟ್ಟುವಾಗ ಹೆಸರು ಇರುವುದಿಲ್ಲ. ಉಸಿರು ಇರುತ್ತದೆ. ಬಿಟ್ಟು ಹೋಗುವಾಗ ಹೆಸರು ಇರುತ್ತದೆ. ಉಸಿರು ಇರುವುದಿಲ್ಲ. ಅತ್ಯದ್ಭುತ ವ್ಯಕ್ತಿತ್ವದ ಇಮಾಂ ಅವರು ತಮ್ಮ ಮಾದರಿಯುತ ಜೀವನದ ಮೂಲಕ ಹೆಸರು ಬಿಟ್ಟು ಹೋಗಿದ್ದಾರೆ. ಅವರು ಜಗಳೂರಿಗಷ್ಟೇ ಅಲ್ಲ. ರಾಜ್ಯಕ್ಕೆ ಆದರ್ಶಪ್ರಾಯರು.

### ರಾಜಕಾರಣ ಬದಲಾಗಿದೆ.......

60–70 ರ ದಶಕದಲ್ಲಿದ್ದ ರಾಜಕಾರಣ–ಕ್ಕೂ, ಈಗಿನ ರಾಜಕಾರಣಕ್ಕೂ ಅಜಗಜಾಂತರ ವ್ಯತ್ಯಾಸವಿದೆ. ಅಂದೆಲ್ಲಾ ರಾಜಕಾರಣಿಗಳು ರಾಜಕೀಯ ಮಾಡುತ್ತಿದ್ದರು. ವ್ಯಾಪಾರಿಗಳು ವ್ಯಾಪಾರ ಮಾಡುತ್ತಿದ್ದರು. ಅಗತ್ಯ ಬಂದಾಗ ರಾಜಕಾರಣಿಗಳಿಗೆ ಎಲ್ಲ ರೀತಿಯ ಸಹಕಾರ ನೀಡುತ್ತಿದ್ದರು. ಈಗ ಹಾಗಲ್ಲ. ವ್ಯಾಪಾರಿಗಳು ತಾವೇಕೆ ರಾಜಕೀಯ ಮಾಡಬಾರದು ಎಂದು ಅವರೇ ರಾಜಕೀಯಕ್ಕೆ ಧುಮುಕುತಿದ್ದಾರೆ. ನಮ್ಮ ಹಿಂದಿನವರ ಗೌರವ ಉಳಿಸಿಕೊಂಡು, ಈಗಿನ ಪರಿಸ್ಥಿತಿಯಲ್ಲಿ ಈಜಬೇಕಿದೆ ಎಂದು ಹೇಳುವ ಮೂಲಕ ಖಾದರ್ ಪ್ರಸ್ತುತ ರಾಜಕಾರಣದ ಸ್ಥಿತಿಗತಿಯನ್ನು ತೆರೆದಿಟ್ಟರು.

### ದೇವರನ್ನು ಮೆಚ್ಚಿಸುವ ಹಾಗೆ ನಡೆದುಕೊಳ್ಳಿ

ನಾವುಗಳು ಸಮಾಜವನ್ನು ಒಟ್ಟುಗೂಡಿಸುವವರಾಗಬೇಕೇ ಹೊರತು ಬಿಕ್ಕಟ್ಟು ಮೂಡಿಸುವವರಾಗಬಾರದು. ಬಾಯಿಗೆ ಬಂದಂತೆ ಮಾತನಾಡುವುದು, ಸಮಸ್ಯೆ ಸೃಷ್ಟಿಸುವುದು ಹಾಗೂ ಪರಿಹರಿಸುವುದರಲ್ಲೇ ನಮ್ಮ ಅರ್ಧ ಆಯುಷ್ಯ ಮುಗಿಯುತ್ತದೆ. ನಮ್ಮನ್ನು ನಾವು ಅರ್ಥ ಮಾಡಿಕೊಂಡು, ಶುದ್ಧ ಮಾಡಿಕೊಂಡು, ಹಿಂದೆ ಉಳಿದವರ ಕೈ ಹಿಡಿದು ಮುಂದೆ ತರಬೇಕಿದೆ. ಜನರನ್ನು ಮೆಚ್ಚಿಸಲು ಸಾಧ್ಯವಿಲ್ಲ. ಆದರೆ ದೇವರನ್ನು ಮೆಚ್ಚಿಸುವ ಹಾಗೆ ನಡೆದುಕೊಳ್ಳಿರಿ. ಆಗ ನಿಮ್ಮನ್ನು ದೊಡ್ಡ ಸ್ಥಾನಕ್ಕೆ ಕರೆದೊಯ್ಯುತ್ತದೆ ಎಂದು ಖಾದರ್ ಯುವಜನಾಂಗಕ್ಕೆ ಕಿವಿಮಾತು ಹೇಳಿದರು

ಅವರ ಕುರಿತಾದ ಪುಸ್ತಕ ಹೊರತರಲಾಗಿದೆ. ಇಮಾಂ ಅವರ ಜೀವನ ಚರಿತ್ರೆ ಮುಂದಿನ ಪೀಳಿಗೆಗೆ ದಾರಿದೀಪವಾಗಲಿದೆ ಎಂದು ನುಡಿದರು.

ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್, ಜೆ.ಎಂ. ಇಮಾಂ ಅವರ ಜೀವನ ಸಾಧನೆಗಳು ಎಲ್ಲರಿಗೂ ಪ್ರೇರಕ. ಅವರು 9 ಕ್ಷೇತ್ರಗಳಲ್ಲಿ ಕೆಲಸ ನಿರ್ವಹಿಸಿ ಜನಾನುರಾಗಿಯಾಗಿದ್ದರು. ನಮ್ಮ ಸಿರಿಗೆರೆ ಶ್ರೀಗಳು ಕೂಡ ಅವರ ಗುಣಗಾನ ಮಾಡಿರುವುದನ್ನು ಕೇಳಿದ್ದೇನೆ. ಅವರ ಜೀವನ ಈಗಿನ ರಾಜಕಾರಣಿಗಳಿಗೆ ಮಾರ್ಗದರ್ಶಕವಾದರೆ, ನಾವೂ ಕೂಡ ಅವರಂತೆ ಮೌಲ್ಯಯುತ ಜೀವನ ನಡೆಸಲು ಸಾಧ್ಯವಿದೆ ಎಂದು ಅಭಿಪ್ರಾಯಪಟ್ಟರು.

ಕೃತಿ ಲೋಕಾರ್ಪಣೆ ನಂತರ ಪ್ರಥಮ ಪ್ರತಿಯನ್ನು ಹಾಜಿ ಜೆ.ಕೆ. ಹುಸೇನ್ ಮಿಯ್ಯಾ ಸಾಬ್ ಕಸಾಪ ಜಿಲ್ಲಾಧ್ಯಕ್ಷ ಬಿ. ವಾಮದೇವಪ್ಪ ಅವರಿಗೆ ಹಸ್ತಾಂತರಿಸಿದರು.

ಕೃತಿ ಕುರಿತು ಕುವೆಂಪು ವಿವಿ ನಿವೃತ್ತ ಪ್ರಾಧ್ಯಾಪಕ ಡಾ. ರಾಜೇಂದ್ರ ಚೆನ್ನಿ ಮಾತನಾಡಿದರು. ಮುಖ್ಯ ಅತಿಥಿಗಳಾಗಿ ಜಗಳೂರು ಶಾಸಕ ಚಿಕ್ಕಮ್ಮನ ಹಟ್ಟಿ ಬಿ. ದೇವೇಂದ್ರಪ್ಪ, ಮಾಯಕೊಂಡ ಶಾಸಕ ಕೆ.ಎಸ್. ಬಸವಂತಪ್ಪ, ವಿಧಾನ ಪರಿಷತ್ ಸದಸ್ಯ ಅಬ್ದುಲ್ ಜಬ್ಬಾರ್, ಮಹಾಪೌರರಾದ ಕೆ. ಚಮನ್ ಸಾಬ್, ಕೃತಿಯ ಪ್ರಧಾನ ಸಂಪಾದಕರಾದ ಎನ್.ಟಿ. ಎರ್ರಿಸ್ವಾಮಿ, ರಾಜ್ಯ ಪಿಂಜಾರ ನದಾಫ್ ಸಂಘದ ಅಧ್ಯಕ್ಷ ಜಲೀಲ್ ಸಾಬ್, ಉದ್ಯಮಿ ಹೆಚ್.ಇ. ದಾದಾ ಖಲಂದರ್, ನಿವೃತ್ತ ಪ್ರಾಧ್ಯಾಪಕಿ ಚಮನ್ ಫರ್ಜಾನಾ ಉಪಸ್ಥಿತರಿದ್ದು, ಜೆ.ಎಂ. ಇಮಾಂ ಟ್ರಸ್ಟ್ ಗೌರವಾಧ್ಯಕ್ಷ ಹಾಜಿ ಜೆ.ಕೆ. ಹುಸೇನ್ ಮಿಯ್ಯಾ ಸಾಬ್ ಅಧ್ಯಕ್ಷತೆ ವಹಿಸಿದ್ದರು.

ಸಂಗೀತ ಶಿಕ್ಷಕಿ ಪದ್ಮಶ್ರೀ ಪ್ರಾರ್ಥಿಸಿದರು. ಎಂ. ಶಿಲ್ಪ ಸ್ವಾಗತಿಸಿದರು. ಪುಸ್ತಕದ ಪ್ರಧಾನ ಸಂಪಾದಕರಲ್ಲಿ ಒಬ್ಬರಾದ ದಾದಾಪೀರ್ ನವಿಲೇಹಾಳ್ ಪ್ರಾಸ್ತಾವಿಕ ನುಡಿಗಳನ್ನಾಡಿದರು.

## ತ್ರಿಪದಿ ಕವಿ ಶ್ರೀ ಸರ್ವಜ್ಞ ಜಯಂತಿ ಆಚರಣೆ



**ದಾವಣಗೆರೆ :** ಸರ್ವಜ್ಞ ಕವಿಯು ತಮ್ಮ ತ್ರಿಪದಿಗಳ ಮೂಲಕ ಜೀವನದ ಅನುಭವ ಕಲಿಸಿಕೊಟ್ಟು, ಬದುಕಿನ ಅರಿವು ಮೂಡಿಸುವ ಪ್ರಯತ್ನ ಮಾಡಿದ್ದರು ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಹೇಳಿದರು.

ಗುರುವಾರ(ಫೆ.20) ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಆಶ್ರಯದಲ್ಲಿ ನಡೆದ ತ್ರಿಪದಿ ಕವಿ ಶ್ರೀಸರ್ವಜ್ಞ ಜಯಂತಿ ಆಚರಣೆ ಕಾರ್ಯಕ್ರಮದಲ್ಲಿ ಸರ್ವಜ್ಞನ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದರು.

ಸರ್ವಜ್ಞ ನವರು ಸಮಾಜದ ಅಂಕುಡೊಂಕುಗಳನ್ನು ತ್ರಿಪದಿಯಲ್ಲಿ ವರ್ಣನೆ ಮಾಡಿದ್ದಾರೆ. ಅವರ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಮುನ್ನಡೆಯೋಣ ಎಂದು ಹೇಳಿದರು. ಸರ್ವಜ್ಞ ಸತ್ಯ ಶುದ್ಧವಾದ ಕಾಯಕವನ್ನು ಮಾಡುತ್ತಾ ಅನೇಕ ರೀತಿಯಲ್ಲಿ ಸಮಾಜಕ್ಕೆ ಉತ್ತಮ ಸಂದೇಶಗಳನ್ನು ನೀಡಿದ್ದಾರೆ.

ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್ ಮಾತನಾಡಿ, ಸರ್ವಜ್ಞ ಎಂದರೆ ಎಲ್ಲವನ್ನು ತಿಳಿದವನು, ಸಮಾಜದ ಜ್ಞಾನವನ್ನು ಅರಿತವನು. ಸರ್ವಜ್ಞ ಕವಿ ವಿದ್ಯೆ, ಕೃಷಿ ಹಾಗೂ ಜೀವನದ ಕುರಿತ ಆಳವನ್ನು ಅಳೆಯುವುದರ ಮೂಲಕ ದೊಡ್ಡ ವ್ಯಕ್ತಿತ್ವವನ್ನು ಹೊಂದಿದ್ದರು. ಅವರ ತ್ರಿಪದಿಗಳಲ್ಲಿ ಒಳ ಅರಿವು ಜಾಸ್ತಿ ಇದ್ದು, ಶ್ರೀಸಾಮಾನ್ಯರಿಗೂ ಅರ್ಥವಾಗುವಂತಿರುತ್ತದೆ. ಸರ್ವಜ್ಞರ ತತ್ವಾದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಮುಂದಿನ ಪೀಳಿಗೆಗೆ ತಲುಪಿಸುವಂಥ ಕೆಲಸವನ್ನು ಮಾಡಬೇಕು ಎಂದರು.

ಸಮಾಜದ ಅಧ್ಯಕ್ಷ ಪುಷ್ಪರಾಜ್ ತ್ರಿಪದಿ ಎಂದರೆ ಮೂರು ಸಾಲುಗಳ ಕವಿತೆ. ಆದ್ದರಿಂದ ಸರ್ವಜ್ಞನನ್ನು ತ್ರಿಪದಿ ಕವಿ ಎನ್ನುತ್ತಾರೆ. ಸರ್ವಜ್ಞರ ವ್ಯಕ್ತಿತ್ವ ಅನಿಕೇತನವಾದದ್ದು. ನಿಂತಲ್ಲಿ ನಿಲ್ಲದೆ, ಗಾಳಿಯಂತೆ ಅಲೆದವನು ಇವರು. ಮಂಡೆ ಬೋಳಿಸಿಕೊಂಡು ತುಂಡುಗಂಬಳಿ ಹೊದೆದು ಹಿಂಡನಗಲಿದ ಗಜದಂತೆ ಸುತ್ತಿದವನು. ಕೈಯಲ್ಲೊಂದು ಕಪ್ಪರವನ್ನು ಹಿಡಿದು, ಹಿರಿದಾದ ನಾಡು ಎದುರಿಗಿರುವಾಗ ಪರಮೇಶನೆಂಬ ನಾಮವನ್ನು ನೆಚ್ಚಿ, ತಿರಿಯುತ್ತಲೇ ಊರೂರು ಸುತ್ತಿದ ಚಾರಣ ಕವಿ ಎಂದರು.

ಜಿ.ಪಂ.ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಸುರೇಶ್.ಬಿ.ಇಟ್ನಾಳ್, ಹೆಚ್ಚುವರಿ ಪೊಲೀಸ್ ಅಧೀಕ್ಷಕ ಮಂಜುನಾಥ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ, ಕುಂಬಾರ ಸಮಾಜದ ಕಾರ್ಯದರ್ಶಿ ತಿಪ್ಪೇಸ್ವಾಮಿ, ಉಪಸ್ಥಿತರಿದ್ದರು.

## ಇ–ಆಸ್ತಿ ಖಾತಾ ಅಭಿಯಾನ

**ದಾವಣಗೆರೆ :** ಪುರಸಭೆ ವ್ಯಾಪ್ತಿಯೊಳಗೆ ಬರುವ ಸರ್ಕಾರಿ, ಅರೆ ಸರ್ಕಾರಿ, ಸ್ಥಳೀಯ ಸಂಸ್ಥೆಗಳ ಒಡೆತನದಲ್ಲಿರುವ ಆಸ್ತಿಗಳನ್ನು ಹೊರತುಪಡಿಸಿ ಇನ್ನುಳಿದ ಎಲ್ಲಾ ರೀತಿಯ ಕಟ್ಟಡಗಳ, ನಿವೇಶನಗಳ ಮಾಲೀಕರು ತಮ್ಮ ಆಸ್ತಿಗಳಿಗೆ ಸಂಬಂಧಿಸಿದ ದಾಖಲೆಗಳಾದ ಎಲ್ಲಾ ನೊಂದಾಯಿತ ಪತ್ರಗಳು, ಆಸ್ತಿಯ ಛಾಯಾಚಿತ್ರ, ಮಾಲೀಕರ ಭಾವಚಿತ್ರ, ಮಾಲೀಕರ ಚುನಾವಣಾ ಗುರುತಿನ ಚೀಟಿ, ಪಾನ್‌ಕಾರ್ಡ್, ರೇಷನ್ ಕಾರ್ಡ್ ನಮೂನೆ–15(ಇಸಿ), ಕೆಇಬಿ ಬಿಲ್, ನೀರಿನ ಬಿಲ್, ಕಟ್ಟಡ ಪರವಾನಿಗೆ ಮತ್ತು ಅನುಮೋದಿತ ನಕ್ಷೆ ನಕಲು ಪ್ರತಿ, ಏಕ ನಿವೇಶನ, ಬಹು ನಿವೇಶನ ತಾಂತ್ರಿಕ ಅನುಮೋದನೆ ನಕ್ಷೆ ಕಂದಾಯ ಪಾವತಿಸಿದ ರಶೀದಿ ಹಾಗೂ ಅವಶ್ಯಕತೆ ಇರುವ ಇತರೆ ದಾಖಲೆಗಳನ್ನು ಹಾಜರಿಪಡಿಸಿ ನಿಮ್ಮ ಆಸ್ತಿಯನ್ನು ಗಣಕೀಕರಿಸಿಕೊಂಡು ನಮೂನೆ–3 ಮತ್ತು ನಮೂನೆ–3ಎ ರನ್ನು ಪಡೆದುಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ https://eaasthi.kanajakarnatakasmartcity.in/kmf24 ವೆಬ್‌ಸೈಟ್ ಅಥವಾ ಪುರಸಭೆ ಮುಖ್ಯಾಧಿಕಾರಿಗಳು, ಕಂದಾಯ ಅಧಿಕಾರಿ, ಕಂದಾಯ ಶಾಖೆ ಸಿಬ್ಬಂದಿಯನ್ನು ಸಂಪರ್ಕಿಸಬಹುದು.

### ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯ ಪೂರ್ವಭಾವಿ ಸಭೆ

## ಪರೀಕ್ಷಾ ಕರ್ತವ್ಯ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಿ : ಎಡಿಸಿ ಲೋಕೇಶ್ ಸೂಚನೆ

**ದಾವಣಗೆರೆ :** ದ್ವಿತೀಯ ಪಿಯುಸಿ ಪರೀಕ್ಷೆ ಮಾರ್ಚ್ 1 ರಿಂದ 20 ರವರೆಗೆ ನಡೆಯುತ್ತದೆ. ಪರೀಕ್ಷಾ ಕಾರ್ಯದಲ್ಲಿ ಲೋಪವಾಗದಂತೆ ಕೋರ್ಯನಿರ್ವಹಿಸಬೇಕೆಂದು ಅಪರ ಜೀಲ್ಲಾಧಿಕಾರಿ ಪಿ.ಎನ್.ಲೋಕೇಶ್ ತಿಳಿಸಿದರು.

ಬುಧವಾರ (ಫೆ.19)ರಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಆಯೋಜಿಸಲಾಗಿದ್ದ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಪರೀಕ್ಷೆಗೆ ಪದವಿ ಪೂರ್ವ ಶಿಕ್ಷಣ ಇಲಾಖೆ ಅಧಿಕಾರಿಗಳು, ಪ್ರಾಂಶುಪಾಲರು, ಉಪನ್ಯಾಸಕರು ಶ್ರಮವಹಿಸಿ, ಬಹಳ ಎಚ್ಚರಿಕೆಯಿಂದ ಜಿಲ್ಲೆಗೆ ಉತ್ತಮ ಹಾಗೂ ಹೆಚ್ಚಿನ ಫಲಿತಾಂಶ ತರುವಲ್ಲಿ ತಮ್ಮಗಳ ಜವಾಬ್ದಾರಿ ಇದ್ದು ಎಚ್ಚರಿಕೆಯಿಂದ ಕೆಲಸ ನಿರ್ವಹಿಸಿ ಎಂದು ಸೂಚಿಸಿದರು.



ಜಿಲ್ಲೆಯ ಆರು ತಾಲ್ಲೂಕುಗಳಲ್ಲಿ ಸಿದ್ಧತೆ ಮಾಡಿಕೊಂಡ ಬಗ್ಗೆ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

ಪರೀಕ್ಷಾ ಕಾರ್ಯ ನಿರ್ವಹಿಸುವಲ್ಲಿ ಬೇಜವಾಬ್ದಾರಿ ಹಾಗೂ ನಿರ್ಲಕ್ಷ್ಯತೆ ಬೇಡ, ನಿಯಮಗಳನ್ನು ಸರಿಯಾದ ರೀತಿಯಲ್ಲಿ ಪಾಲನೆ ಮಾಡದಿದ್ದರೆ ಸಂಬಂಧಪಟ್ಟ ಅಧಿಕಾರಿಗಳನ್ನು ನೇರವಾಗಿ ಹೊಣೆ ಮಾಡಲಾಗುವುದು ಎಂದು ಹೇಳಿದರು.

ಶಾಲಾ ಶಿಕ್ಷಣ ಪದವಿ ಪೂರ್ವ ಇಲಾಖೆ ಉಪನಿರ್ದೇಶಕರಾದ ಕರಿಸಿದ್ದಪ್ಪ ಜಿ. ಮಾತನಾಡಿ ದಾವಣಗೆರೆ ತಾಲ್ಲೂಕಿನಲ್ಲಿ 20 ಕೇಂದ್ರಗಳು, ಹರಿಹರದಲ್ಲಿ 4, ಜಗಳೂರಿನಲ್ಲಿ 3, ಚನ್ನಗಿರಿಯ 5, ಹೊನ್ನಾಳಿಯ 3 ಕೇಂದ್ರಗಳು ಸೇರಿದಂತೆ ಒಟ್ಟು 35 ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ. ಈ ಕೇಂದ್ರಗಳಲ್ಲಿ 21,153 ವಿದ್ಯಾರ್ಥಿಗಳು ದ್ವಿತೀಯ ಪಿಯುಸಿ ಪರೀಕ್ಷೆ ಬರೆಯಲಿದ್ದಾರೆ. ಪರೀಕ್ಷಾ ಕೇಂದ್ರದೊಳಗೆ ಕರ್ತವ್ಯ ನಿರತ ಸಿಬ್ಬಂದಿ ಹೊರತುಪಡಿಸಿ, ಇತರೆ ಯಾರಿಗೂ ಪ್ರವೇಶ ಇರುವುದಿಲ್ಲ ಎಂದರು.

ಪರೀಕ್ಷಾ ವೇಳಾಪಟ್ಟಿ : ಮಾ. 1 ರಂದು ಕನ್ನಡ, ಅರೇಬಿಕ್. ಮಾ. 3–ಗಣಿತ, ಶಿಕ್ಷಣ ಶಾಸ್ತ್ರ, ತರ್ಕಶಾಸ್ತ್ರ, ವ್ಯವಹಾರ ಅಧ್ಯಯನ. ಮಾ. 4–ತಮಿಳು, ತೆಲುಗು, ಮಲಯಾಳಂ, ಮರಾಠಿ, ಉರ್ದು, ಸಂಸ್ಕೃತ, ಫ್ರೆಂಚ್. ಮಾ. 5–ರಾಜ್ಯ ಶಾಸ್ತ್ರ, ಸಂಖ್ಯಾ ಶಾಸ್ತ್ರ. ಮಾ. 7–ಇತಿಹಾಸ, ಭೌತಶಾಸ್ತ್ರ. ಮಾ. 10–ಐಚ್ಛಿಕ ಕನ್ನಡ, ಲೆಕ್ಕಶಾಸ್ತ್ರ, ಭೂಗರ್ಭಶಾಸ್ತ್ರ, ಗೃಹ ವಿಜ್ಞಾನ. ಮಾ. 12–ಮನಃಶಾಸ್ತ್ರ, ರಸಾಯನಶಾಸ್ತ್ರ, ಮೂಲ ಗಣಿತ. ಮಾ. 13–ಅರ್ಥ ಶಾಸ್ತ್ರ. ಮಾ. 15– ಇಂಗ್ಲೀಷ್. ಮಾ. 17–ಭೂಗೋಳಶಾಸ್ತ್ರ, ಮಾ. 18–ಜೀವಶಾಸ್ತ್ರ, ಸಮಾಜಶಾಸ್ತ್ರ, ವಿದ್ಯುನ್ಮಾನಶಾಸ್ತ್ರ, ಗಣಕ ವಿಜ್ಞಾನ. ಮಾ. 19–ಹಿಂದೂಸ್ತಾನಿ ಸಂಗೀತ, ಮಾಹಿತಿ ತಂತ್ರಜ್ಞಾನ, ರೀಟೈಲ್, ಆಟೋಮೊಬೈಲ್, ಹೆಲ್ತ್ ಕೇರ್, ಬ್ಯೂಟಿ ಅಂಡ್ ವೆಲ್‌ನೆಸ್. ಮಾ.20–ಹಿಂದಿ.

ವೆಬ್ ಕ್ಯಾಮೆರಾ ಮತ್ತು ಸಿಸಿಟಿವಿಗಳ ಬಗ್ಗೆ ಪರೀಕ್ಷೆ ಕೇಂದ್ರದ ಮುಖ್ಯ ನಿರೀಕ್ಷಕರು ಗಮನ ಹರಿಸಬೇಕೆಂದು ತಿಳಿಸಿದರು.

35 ಪರೀಕ್ಷಾ ಕೇಂದ್ರಗಳ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಲಾಗುತ್ತಿದ್ದು, ಕೇಂದ್ರಗಳ ಸುತ್ತಮುತ್ತಲಿರುವ ಜೆರಾಕ್ಸ್ ಅಂಗಡಿಗಳನ್ನು ಮುಚ್ಚಲು ಅಗತ್ಯ ಕ್ರಮ ವಹಿಸಲಾಗುವುದು.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಇಂದು, ನಿಮ್ಮ ಆರೋಗ್ಯವು ಆರೋಗ್ಯಕರವಾಗಿರುತ್ತದೆ ಎಂದು ನಿರೀಕ್ಷಿಸಲಾಗಿದೆ. ನೀವು ಮನೆಯಿಂದ ಹೊರ ಇದ್ದು ಉದ್ಯೋಗ ಅಥವಾ ಅಧ್ಯಯನ ಮಾಡುತ್ತಿದ್ದರೆ, ನಿಮ್ಮ ಹಣ ಮತ್ತು ಸಮಯವನ್ನು ವ್ಯರ್ಥ ಮಾಡುವಂತಹ ಜನರಿಂದ ದೂರವಿರುವುದು ಕಲಿತುಕೊಳ್ಳಬೇಕು. ನೀವು ಭಾವಿಸಿದ್ದಕ್ಕಿಂತ ಹೆಚ್ಚಾಗಿ ನಿಮ್ಮ ಸಹೋದರರು ನಿಮ್ಮ ಅಗತ್ಯಗಳಿಗೆ ಬೆಂಬಲ ನೀಡುತ್ತಾರೆ. ನಿಮ್ಮ ಶಕ್ತಿ ಮತ್ತು ಉತ್ಸಾಹವನ್ನು ಮರಳಿ ತರುವ ಒಂದು ಆನಂದಮಯ ಪ್ರವಾಸಕ್ಕೆ ಹೋಗುವ ಸಾಧ್ಯತೆಯಿದೆ.

### ವೃಷಭ ರಾಶಿ

ನೀವು ಕಳೆದುಹೋದದ್ದರ ಬಗ್ಗೆ ಯೋಚಿಸುತ್ತಿದ್ದರೆ ನಿಮ್ಮ ಹತಾಶೆ ನಿಮ್ಮ ಆರೋಗ್ಯವನ್ನು ನಾಶಮಾಡಬಹುದು - ಸಾಧ್ಯವಾದಷ್ಟೂ ವಿಶ್ರಾಂತಿ ತಗೆದುಕೊಳ್ಳಲು ಪ್ರಯತ್ನಿಸಿ. ಇಂದು ನಿಮ್ಮ ಹಣವನ್ನು ಅನೇಕ ವಿಷಯಗಳಿಗೆ ಖರ್ಚು ಮಾಡಬಹುದು, ನೀವು ಇಂದು ಉತ್ತಮ ಬಜೆಟ್ ಅನ್ನು ಯೋಜಿಸಬೇಕಾಗಿದೆ, ಇದು ನಿಮ್ಮ ಅನೇಕ ಸಮಸ್ಯೆಗಳನ್ನು ತೆಗೆದುಹಾಕುತ್ತದೆ. ಮನೆಯ ಸದಸ್ಯರೊಬ್ಬರ ವರ್ತನೆಯಿಂದ ನೀವು ತೊಂದರೆಗೊಳಗಾಗಬಹುದು.

### ಮಿಥುನ ರಾಶಿ

ನಿಮ್ಮ ಹೆಂಡತಿಯ ಜೊತೆ ಕುಟುಂಬದ ಸಮಸ್ಯೆಗಳನ್ನು ಹಂಚಿಕೊಳ್ಳಿ. ನಮ್ಮನ್ನು ನೀವೇ ಒಂದು ಪ್ರೀತಿಯ ಪೋಷಿಸುವ ಜೋಡಿಯೆನ್ನುವುದನ್ನು ಪುನಃ ಕಂಡುಹಿಡಿಯಲು ಸ್ವಲ್ಪ ಸಮಯ ಖರ್ಚು ಮಾಡಿ. ನಿಮ್ಮ ಮಕ್ಕಳೂ ಕೂಡ ಮನೆಯಲ್ಲಿನ ಶಾಂತಿ ಸಾಮರಸ್ಯದ ವಾತಾವರಣವನ್ನು ಆವಾಹಿಸಿಕೊಳ್ಳುತ್ತಾರೆ. ಇದು ಪರಸ್ಪರ ಸಂಪರ್ಕದಲ್ಲಿ ನಿಮ್ಮ ಮಾತುಕತೆಗೆ ನಿಮಗೆ ಹೆಚ್ಚಿನ ಸ್ವಾಭಾವಿಕತೆ ಮತ್ತು ಸ್ವಾತಂತ್ರ್ಯ ನೀಡುತ್ತದೆ.

### ಕರ್ಕ ರಾಶಿ

ನೀವು ಆರೋಗ್ಯ ಸಮಸ್ಯೆಯಿಂದಾಗಿ ಒಂದು ಪ್ರಮುಖ ಕೆಲಸಕ್ಕೆ ಹೋಗಲು ಸಾಧ್ಯವಾಗದಿರುವುದರಿಂದ ಕೆಲವು ಹಿನ್ನಡೆ ಎದುರಿಸುವ ಸಾಧ್ಯತೆಯಿದೆ. ಆದರೆ ನಿಮ್ಮನ್ನು ಮೇಲೆತ್ತಲು ನಿಮ್ಮ ತಾರ್ಕಿಕತೆಯನ್ನು ಬಳಸಿ. ಅನಿರೀಕ್ಷಿತ ಬಿಲ್ಲುಗಳು ಹಣಕಾಸಿನ ಹೊರೆಯನ್ನು ಹೆಚ್ಚಿಸುತ್ತದೆ. ನೀವು ನಿಮ್ಮ ಆಕರ್ಷಣೆಯನ್ನು ಹಾಗೂ ನಿಮ್ಮ ಬುದ್ಧಿವಂತಿಕೆಯನ್ನು ಬಳಸಿದಲ್ಲಿ ಜನರು ನಿಮ್ಮ ಮತುಗಳನ್ನು ಕೇಳುತ್ತಾರೆ. ಭಿನ್ನಾಭಿಪ್ರಾಯಗಳ ಕಾರಣ ವೈಯಕ್ತಿಕ ಸಂಬಂಧದಲ್ಲಿ ಬಿರುಕು ಬಿಡಬಹುದು.

### ಸಿಂಹ ರಾಶಿ

ಇಂದು ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ಯಶಸ್ಸಿಗೆ ಇಂದಿನ ಸೂತ್ರವೆಂದರೆ ನಾವೀನ್ಯತೆಯಿರವ ಮತ್ತು ಉತ್ತಮ ಅನುಭವ ಹೊಂದಿರುವ ಜನರ ಸಲಹೆಯಂತೆ ನಿಮ್ಮ ಹಣವನ್ನು ಹೂಡುವುದಾಗಿದೆ. ನಿಮ್ಮ ಮನೆಯಲ್ಲಿ ಸಾಮರಸ್ಯ ತರಲು ನಿಕಟ ಸಹಕಾರದೊಂದಿಗೆ ಕೆಲಸ ಮಾಡಬೇಕು. ಪ್ರೀತಿಯ ಇಂದ್ರಜಾಲ ಇಂದು ನಿಮ್ಮನ್ನು ಕಟ್ಟಿಹಾಕಲಿದೆ. ಕೇವಲ ಈ ಆನಂದವನ್ನು ಆಸ್ವಾದಿಸಿ. ಹತ್ತಿರದ ಸಹಯೋಗಿಗಳ ಜೊತೆ ಹಲವಾರು ಭಿನ್ನಾಭಿಪ್ರಾಯಗಳು ಉದ್ಭವಿಸಬಹುದಾದ ಒತ್ತಡ ತುಂಬಿದ ದಿನ.

### ಕನ್ಯಾ ರಾಶಿ

ಅನಂತ ಜೀವನದ ಉತ್ಕೃಷ್ಟ ವೈಭವವನ್ನು ಆನಂದಿಸಲು ನಿಮ್ಮ ಜೀವನವನ್ನು ಹೆಚ್ಚು ಭವ್ಯಗೊಳಿಸಿ. ಚಿಂತೆಯ ಅನುಪಸ್ಥಿತಿ ಈ ದಿಕ್ಕಿನಲ್ಲಿ ಮೊದಲ ಹೆಜ್ಜೆ. ಇಂದು ಸಾಲಗಾರನು ನಿಮ್ಮ ಮನೆ ಬಾಗಿಲಿಗೆ ಬರಬಹುದು ಮತ್ತು ನಿಮ್ಮ ಹತ್ತಿರ ಸಾಲ ಕೇಳಬಹುದು.ಅವರಿಗೆ ಹಣವನ್ನು ಹಿಂದಿರುಗಿಸಿ ನೀವು ಆರ್ಥಿಕ ಬಿಕ್ಕಟ್ಟಿಗೆ ಸಿಲುಕಬಹುದು. ಸಾಲ ಪಡೆಯುವುದನ್ನು ತಪ್ಪಿಸಲು ನಿಮಗೆ ಸೂಚಿಸಲಾಗಿದೆ.

### ತುಲಾ ರಾಶಿ

ಆಧ್ಯಾತ್ಮಿಕ ಜೀವನದ ಪೂರ್ವಾಪೇಕ್ಷಿತವಾಗಿರುವಂತಹ ನಿಮ್ಮ ಮಾನಸಿಕ ಆರೋಗ್ಯವನ್ನು ಕಾಯ್ದುಕೊಳ್ಳಿ. ಒಳ್ಳೆಯದೂ ಹಾಗೂ ಕೆಟ್ಟದೆಲ್ಲವೂ ಮನಸ್ಸಿನ ಮೂಲಕವೇ ಬರುವುದರಿಂದ ಬುದ್ದಿ ಜೀವನದ ಹೆಬ್ಬಾಗಿಲಾಗಿದೆ. ಇದು ಜೀವನದ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಸಹಾಯ ಮಾಡುತ್ತದೆ ಮತ್ತು ಅಗತ್ಯವಿರುವ ಬೆಳಕನ್ನು ನೀಡುತ್ತದೆ. ಆವತ್ತಿಗಾಗಿ ಮಾತ್ರ ಬದುಕುವ ಮತ್ತು ಮನೋರಂಜನೆಗಾಗಿ ಹೆಚ್ಚು ಸಮಯ ಮತ್ತು ಹಣ ಖರ್ಚು ಮಾಡುವ ನಿಮ್ಮ ಪ್ರವೃತ್ತಿಯನ್ನು ನಿಯಂತ್ರಿಸಿ.

### ವೃಶ್ಚಿಕ ರಾಶಿ

ಕೆಲಸದಲ್ಲಿ ಹಿರಿಯರಿಂದ ಒತ್ತಡ ಮತ್ತು ಮನೆಯಲ್ಲಿ ಅಪಶ್ರುತಿ ನಿಮ್ಮ ಏಕಾಗ್ರತೆಗೆ ತೊಂದರೆ ತರಬಹುದು. ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ. ಈ ಅವಧಿ ನಿಮ್ಮ ಹೊಸ ಯೋಜನೆಗಳು ಹಾಗೂ ಆಲೋಚನೆಗಳ ಬಗ್ಗೆ ನಿಮ್ಮ ಪೋಷಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಲು ಒಳ್ಳೆಯದಾಗಿದೆ. ಇಂದು ನೀವು ನೀವು ಸುತ್ತಲೂ ನಿಮ್ಮ ಪ್ರಿಯತಮೆಯ ಪ್ರೀತಿಯನ್ನು ಅನುಭವಿಸುತ್ತೀರಿ. ಇದು ಒಂದು ಸುಂದರವಾದ ಅದ್ಭುತ ದಿನ.

### ಧನು ರಾಶಿ

ಖಿನ್ನತೆಯನ್ನು ಹೊಡೆದೋಡಿಸಿ ಇದ ನಿಮ್ಮನ್ನು ಆವರಿಸಿಕೊಳ್ಳುತ್ತಿದೆ ಮತ್ತು ನಿಮ್ಮ ಪ್ರಗತಿಗೆ ಅಡ್ಡಿಪಡಿಸುತ್ತಿದೆ. ಇಂದು ನೀವು ನಿಮ್ಮ ಮನೆಯ ಸದಸ್ಯರನ್ನು ಎಲ್ಲಿಗಾದರೂ ಸುತ್ತಾಡಲು ಕರೆದುಕೊಂಡು ಹೋಗಬಹುದು ಮತ್ತು ನಿಮ್ಮ ಸಾಕಷ್ಟು ಹಣವು ಖರ್ಚಾಗಬಹುದು ದೂರದ ಸ್ಥಳದ ಸಂಬಂಧಿಗಳು ಇಂದು ನಿಮ್ಮನ್ನು ಸಂಪರ್ಕಿಸಬಹುದು. ನಿಮ್ಮ ಪ್ರೀತಿಪಾತ್ರರ ತೋಳುಗಳಲ್ಲಿ ನೀವು ಸಮಾಧಾನ ಪಡೆಯುವಿರಿ.

### ಮಕರ ರಾಶಿ

ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಇಂದು ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ. ಯಶಸ್ಸಿಗೆ ಇಂದಿನ ಸೂತ್ರವೆಂದರೆ ನಾವೀನ್ಯತೆಯಿರವ ಮತ್ತು ಉತ್ತಮ ಅನುಭವ ಹೊಂದಿರುವ ಜನರ ಸಲಹೆಯಂತೆ ನಿಮ್ಮ ಹಣವನ್ನು ಹೂಡುವುದಾಗಿದೆ. ಮನೆಯಲ್ಲಿ ಧರ್ಮಕಾರ್ಯಗಳನ್ನು ನಡೆಸಲಾಗುವುದು.

### ಕುಂಭ ರಾಶಿ


ನಿಮ್ಮ ನಿರೀಕ್ಷೆಗಳನ್ನು ಪೂರೈಸಲು ವೈಯಕ್ತಿಕ ಸಂಬಂಧಗಳನ್ನು ದುರ್ಬಳಕೆ ಮಾಡುವುದು ನಿಮ್ಮ ಪತ್ನಿಗೆ ಕೋಪ ಬರಿಸುತ್ತದೆ. ನಿಮ್ಮ ತಂದೆಯ ಯಾವುದೇ ಸಲಹೆ ಇಂದು ಕೆಲಸದ ಸ್ಥಳದಲ್ಲಿ ಇಂದು ನಿಮಗೆ ಹಣದ ಪ್ರಯೋಜನವನ್ನು ನೀಡುತ್ತದೆ. ಒಂದು ಅಂಚೆಯ ಮೂಲಕ ಬಂದ ಪತ್ರ ಇಡೀ ಕುಟುಂಬಕ್ಕೆ ಸಂತೋಷದ ಸುದ್ದಿ ತರುತ್ತದೆ. ಧೃತಿಗೆಡಬೇಡಿ - ವೈಫಲ್ಯಗಳು ಸಹಜ ಅವುಗಳು ಜೀವನದ ಸೌಂದರ್ಯವಾಗಿವೆ.

### ಮೀನ ರಾಶಿ

ಇಂದು ನೀವು ಪ್ರಮುಖ ನಿರ್ಧಾರ ಕೈಗೊಳ್ಳಬೇಕು ಇದು ನಿಮ್ಮನ್ನು ಒತ್ತಡ ಹಾಗೂ ಉದ್ವೇಗಕ್ಕೆ ಒಳಪಡಿಸುತ್ತದೆ. ದುರ್ಬಲ ಆರ್ಥಿಕ ಸ್ಥಿತಿಯಿಂದ ಕೆಲವು ಪ್ರಮುಖ ಕೆಲಸಗಳು ಸ್ಥಗಿತಗೊಳ್ಳುತ್ತವೆ. ಕೆಲವರು ಅವರಿಗೆ ಸಾಧ್ಯವಿರುವುದಕ್ಕಿಂತ ಹೆಚ್ಚು ನೀಡುವ ಭರವಸೆ ನೀಡುತ್ತಾರೆ ಕೇವಲ ಮಾತನಾಡುವ ಮತ್ತು ಯಾವುದೇ ಫಲಿತಾಂಶಗಳ ನೀಡದ ಇಂಥ ಜನರನ್ನು ಮರೆತುಬಿಡಿ. ತಮ್ಮ ಪ್ರೀತಿಪತ್ರರೊಡನೆ ಸಣ್ಣ ಪ್ರಯಾಣ ಕೈಗೊಳ್ಳುವವರು ಅತ್ಯಂತ ಸ್ಮರಣೀಯ ಸಮಯವನ್ನು ಹೊಂದುತ್ತಾರೆ. ನಿಮ್ಮ ಸಂವಹನ ತಂತ್ರಗಳು ಮತ್ತು ಕೆಲಸದ ಕೌಶಲಗಳು ಪರಿಣಾಮಕಾರಿಯಾಗಿರುತ್ತವೆ.

# ಜನಸ್ನೇಹಿ ಆಡಳಿತದ ಪ್ರತೀಕವೆ ಜನ ಸಂಪರ್ಕ ಸಭೆ : ಶಾಸಕ ಹೆಚ್ ಡಿ ತಮ್ಮಯ್ಯ

**ಚಿಕ್ಕಮಗಳೂರು:** ರೈತರು, ಕೂಲಿ ಕಾರ್ಮಿಕರು, ಅನಕ್ಷರಸ್ಥರು ಮತ್ತು ವಿವಿಧ ವರ್ಗದ ಜನರ ಸಮಸ್ಯೆಗಳನ್ನು ಗ್ರಾಮ ಮಟ್ಟದಲ್ಲೇ ಪರಿಹರಿಸಿ ಜನಸ್ನೇಹಿ ಆಡಳಿತ ನೀಡುವುದೇ ಜನ ಸಂಪರ್ಕ ಸಭೆಯ ಮುಖ್ಯ ಉದ್ದೇಶ ಎಂದು ಶಾಸಕ ಹೆಚ್.ಡಿ ತಮ್ಮಯ್ಯ ಹೇಳಿದರು.




ಜಿಲ್ಲಾ ಪಂಚಾಯಿತಿ ಚಿಕ್ಕಮಗಳೂರು ತಾಲ್ಲೂಕು ಪಂಚಾಯಿತಿ ಕಡೂರು ಹಾಗೂ ಹುಲಿಕೆರೆ, ಪಿಳ್ಳೇನಹಳ್ಳಿ, ಮತ್ತು ಎಸ್ ಬಿದರೆ ಗ್ರಾಮ ಪಂಚಾಯಿತಿ ವತಿಯಿಂದ ಹುಲಿಕೆರೆ ಗ್ರಾಮದಲ್ಲಿ ಆಯೋಜಿಸಿದ್ದ ಜನ ಸಂಪರ್ಕ ಸಭೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಬಗೆಹರಿಸಬಹುದಾದ ಸಾರ್ವಜನಿಕರ ಎಲ್ಲಾ ಸಮಸ್ಯೆಗಳ ಪರಿಹಾರಕ್ಕೆ ಅಧಿಕಾರಿಗಳೆ ಸ್ವತಃ ಜನ ಸಾಮಾನ್ಯರ ಮನೆ ಅಂಗಳಗಳಲ್ಲಿ ಅವರ ಸಮಸ್ಯೆಗಳನ್ನು ಆಲಿಸಿ ಪರಿಹರಿಸಲು ಜನ ಸಂಪರ್ಕ ಸಭೆ ಕಾರ್ಯಕ್ರಮ ಉತ್ತಮ ವೇದಿಕೆಯಾಗಿದೆ ಎಂದರು

ಜನ ಸಂಪರ್ಕ ಕಾರ್ಯಕ್ರಮದಲ್ಲಿ ತಾಲ್ಲೂಕು ಮಟ್ಟದ ಎಲ್ಲಾ ಅಧಿಕಾರಿಗಳು ಭಾಗವಹಿಸಿದ್ದು ಸಾರ್ವಜನಿಕರು ಯಾವುದೇ ಇಲಾಖೆಗೆ ಸಂಬಂಧಿಸಿದ ಸಮಸ್ಯೆಗಳಿದ್ದರು ಅವುಗಳನ್ನು ಬಿತ್ತರಿಸಿ ಪರಿಹಾರ ಕಂಡುಕೊಳ್ಳಬಹುದಾಗಿದೆ. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಬಗೆಹರಿಯಬಹುದಾದ ಎಲ್ಲಾ ಸಮಸ್ಯೆಗಳಿಗೆ ಸ್ಥಳದಲ್ಲೇ ಸೂಕ್ತ ಪರಿಹಾರ ನೀಡಿ ಬಗೆಹರಿಸಲಾಗುವುದು. ಅಧಿಕಾರಿಗಳು ಒಮ್ಮೆ ಸಾರ್ವಜನಿಕರು ಸಮಸ್ಯೆಗಳನ್ನು ಹೊತ್ತು ತಂದರೆ ಶೀಘ್ರವಾಗಿ ಪರಿಹಾರ ಕ್ರಮ ಕೈಗೊಂಡು ಸಮಸ್ಯೆಗಳ ಅಹವಾಲುಗಳು ಪುನರಾವರ್ತನೆ ಆಗದಂತೆ ಕ್ರಮ ವಹಿಸಬೇಕು ಎಂದರು.

ಕಡೂರು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಣಾಧಿಕಾರಿ ಪ್ರವೀಣ್ ಪ್ರಾಸ್ತಾವಿಕವಾಗಿ ಮಾತನಾಡಿ ಆಡಳಿತ ವ್ಯವಸ್ಥೆಯನ್ನು ಜನರ ಮನೆ ಬಾಗಿಲಿಗೆ ತಲುಪಿಸುವಂತ ಕಾರ್ಯಕ್ರಮ ಜನ ಸಂಪರ್ಕ ಸಭೆ. ಕ್ಷೇತ್ರದಲ್ಲಿನ ಜನರ ಸಮಸ್ಯೆಗಳನ್ನು ಆಲಿಸಿ ಪರಿಹರಿಸುವ ನಿಟ್ಟಿನಲ್ಲಿ ಶಾಸಕರು ಹೆಚ್ಚಿನ ಕ್ರಮ ವಹಿಸುತಿದ್ದಾರೆ. ಈ ಸಭೆಯಲ್ಲಿ ನಿಮ್ಮ ಸಮಸ್ಯೆಗಳಿಗೆ ಸ್ಥಳದಲ್ಲಿಯೇ ಪರಿಹಾರ ನೀಡಲಾಗುವುದು ಈ ಸಭೆಯಲ್ಲಿ ತಾಲ್ಲೂಕು ಮಟ್ಟದ ಎಲ್ಲಾ ಅಧಿಕಾರಿಗಳು ಉಪಸ್ಥಿತರಿದ್ದು ಯಾವುದೇ ಯೋಜನೆಗೆ ಸಂಬಂಧಿಸಿದ ಅಹವಾಲು, ಕುಂದು ಕೊರತೆಗಳು ಇದಲ್ಲಿ ಅವುಗಳನ್ನು ಬಿತ್ತಿರಿ ಪರಿಹರಿಸಿಕೊಳ್ಳಿ ಎಂದರು.

ಕಾರ್ಯಕ್ರಮದಲ್ಲಿ ಹುಲಿಕೆರೆ ಗ್ರಾ.ಪಂ ಅಧ್ಯಕ್ಷೆ ರತ್ನಮ್ಮ, ಪಿಳ್ಳೇನಹಳ್ಳಿ ಗ್ರಾ.ಪಂ ಅಧ್ಯಕ್ಷ ಮಹೇಂದ್ರ ಆಚಾರ್, ಎಸ್.ಬಿದರೆ ಗ್ರಾ.ಪಂ ಅಧ್ಯಕ್ಷ ಸತೀಶ್, ಕಡೂರು ತಾಲ್ಲೂಕು ತಹಶೀಲ್ದಾರ್ ಮಂಜುನಾಥ್, ಕಡೂರು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಪ್ರವೀಣ್ ಸೇರಿದಂತೆ ವಿವಿಧ ಇಲಾಖೆಗಳ ತಾಲ್ಲೂಕು ಮಟ್ಟದ ಅಧಿಕಾರಿಗಳು ಹಾಗೂ ಮೂರು ಗ್ರಾಮ ಪಂಚಾಯಿತಿಗಳ ಉಪಾಧ್ಯಕ್ಷರು, ಸದಸ್ಯರು ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.

# ಗದಗ ಜಿಲ್ಲಾ ಮಟ್ಟದ ಉದ್ಯೋಗ ಮೇಳ ಆಯೋಜನೆ : ಸಚಿವ ಎಚ್. ಕೆ. ಪಾಟೀಲ



**ಗದಗ:** ಗದಗ ಜಿಲ್ಲೆಯಲ್ಲಿ ಉದ್ಯೋಗ ಮೇಳವನ್ನು ಆಯೋಜಿಸಲಾಗುತ್ತಿದೆ. ಈ ಉದ್ಯೋಗ ಮೇಳದಲ್ಲಿ ಪ್ರತಿಷ್ಠಿತ ಕಂಪನಿಗಳು ಭಾಗವಹಿಸುತ್ತಿದ್ದು, ಜಿಲ್ಲೆಯ ಉದ್ಯೋಗ ಆಕಾಂಕ್ಷಿಗಳು ಉದ್ಯೋಗ ಮೇಳದಲ್ಲಿ ಭಾಗವಹಿಸಿ ಸದುಪಯೋಗ ಪಡೆಯಬೇಕೆಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್ ಕೆ ಪಾಟೀಲ ಅವರು ಹೇಳಿದರು.

ಗದಗ್ ಜಿಲ್ಲಾಡಳಿತ ಭವನದ ಬುಧವಾರ ಜರುಗಿದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡುತ್ತಾ ಮಾರ್ಚ್ 1 ಮತ್ತು 2 ರಂದು ಗದಗ ನಗರದ ಕೆ ಎಚ್ ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಮಟ್ಟದ ಉದ್ಯೋಗ ಮೇಳ ಜರುಗಲಿದೆ. ಉದ್ಯೋಗ ಆಕಾಂಕ್ಷಿಗಳು ಉದ್ಯೋಗ ಮೇಳದ ದಿನದಂದು ಬೆಳಗ್ಗೆ 10 ರಿಂದ ಸಂಜೆ 4 ರವರೆಗೆ ಪಾಲ್ಗೊಳ್ಳುವ ಮೂಲಕ ಉದ್ಯೋಗ ಪಡೆಯಬಹುದಾಗಿದೆ ಎಂದರು.

ಉದ್ಯೋಗ ಆಕಾಂಕ್ಷಿಗಳು ವೆಬ್ಸೈಟ್ ವಿಳಾಸ ಫಫಫ.ಉಂಆಂಉಎಔಃಈಂಖಖ.ಅಔಒ ನಲ್ಲಿ ಅಥವಾ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡುವ ಮೂಲಕ ನೊಂದಾಯಿಸಿಕೊಳ್ಳಬೇಕು. ಕಳೆದ 3 ದಿನದಲ್ಲಿ ಉದ್ಯೋಗ ಮೇಳದ ಲಿಂಕ್ ಮೂಲಕ ಒಟ್ಟು 743 ಅಭ್ಯರ್ಥಿಗಳು ನೊಂದಣಿ ಮಾಡಿಕೊಂಡಿದ್ದಾರೆ. ಇನ್ನು ಹೆಚ್ಚಿನ ಅಭ್ಯರ್ಥಿಗಳು ಲಿಂಕ್ ಬಳಸಿಕೊಂಡು ನೋಂದಾಯಿಸುವ ಮೂಲಕ ಉದ್ಯೋಗ ಪಡೆಯುವಂತೆ ಸಚಿವರು ತಿಳಿಸಿದರು.

ಈ ಜಿಲ್ಲಾಮಟ್ಟದ ಉದ್ಯೋಗ ಮೇಳದಲ್ಲಿ ವಿಂಡ್ ವರ್ಡ್ ಇಂಡಿಯಾ, ಎಲ್ಐಸಿ, ಎಸ್ಬಿಐ ಲೈಫ್ ಇನ್ಸೂರೆನ್ಸ್, ಎಚ್ ಸಿ ಎಲ್ ಟೆಕ್, ಹೋಂಡಾ, ವೋಲ್ವೋ ಬಸ್, ಟಾಟಾ ಎಲೆಕ್ಟ್ರಾನಿಕ್ ಸಿಸ್ಟಮ್ ಸೇರಿದಂತೆ ಹಲವು ಕಂಪನಿಗಳು ಆಗಮಿಸಲಿವೆ ಎಂದು ಹೇಳಿದರು.

ಉದ್ಯೋಗ ಮೇಳದ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಚೇರಿ ರೂಮ್ ನಂಬರ್ 106 ಮತ್ತು ಉದ್ಯೋಗಾಧಿಕಾರಿಗಳ ಕಚೇರಿ ರೂಮ್ ನಂಬರ್ 215 ಜಿಲ್ಲಾಡಳಿತ ಭವನ ಗದಗ್ ಇವರನ್ನು ಸಂಪರ್ಕಿಸಬಹುದಾಗಿದೆ ಅಥವಾ ಮೊಬೈಲ್ ನಂಬರ್ 9480151562, 9380985123, 6363330688, 903680429, 9008234012 ಸಂಪರ್ಕಿಸಬಹುದಾಗಿದೆ.

ಪತ್ರಿಕಾಗೋಷ್ಠಿಯಲ್ಲಿ ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್ ಬಾಬರ್ಜಿ, ಗದಗ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿಬಿ ಅಸೂಟಿ, ತಾಲೂಕಾಧ್ಯಕ್ಷ ಅಶೋಕ ಮಂದಾಲಿ, ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ ಬಿ ಸಂಕದ, ಸಿದ್ದು ಪಾಟೀಲ, ಎಸ್ ಎನ್ ಬಳ್ಳಾರಿ, ಫಾರೂಕ್ ಹುಬ್ಬಳ್ಳಿ ಸೇರಿದಂತೆ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಡಾ ಮಲ್ಲೂರ್ ಬಸವರಾಜ, ಸಹಾಯಕ ನಿರ್ದೇಶಕಿ ಉಮಾ ಪಾಳೇಗಾರ, ಸಹಾಯಕ ಸಾಂಖ್ಯಿಕ ಅಧಿಕಾರಿ ಪಿ ಎಸ್ ಕೋಳಿವಾಡ, ಶೇಖರಡಿ ಎಚ್ ಎಚ್ ಇದ್ದರು.

# ಮಾ.15 ರಿಂದ ಬಾಬಾಬುಡನ್ ಉರುಸ್ ಕಾರ್ಯಕ್ರಮ

**ಚಿಕ್ಕಮಗಳೂರು:** ಗುರುದತ್ತಾತ್ರೇಯ ಬಾಬಾಬುಡನ್ ಸ್ವಾಮಿ ದರ್ಗಾದಲ್ಲಿ ಮಾರ್ಚ್ 15 ರಿಂದ 17 ರವರೆಗೆ ಉರುಸ್ ಕಾರ್ಯಕ್ರಮ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಮೀನಾ ನಾಗರಾಜ್ ಸಿ.ಎನ್. ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ನಡೆದ ಉರುಸ್ ಕಾರ್ಯಕ್ರಮದ ಪೂರ್ವಭಾವಿ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಉರುಸ್ ಕಾರ್ಯಕ್ರಮ ಸುಸೂತ್ರವಾಗಿ ನಡೆಯಲು ಎಲ್ಲರೂ ಸಹಕರಿಸಬೇಕು. ಇದಕ್ಕೆ ಬೇಕಾದ ಎಲ್ಲ ಸಿದ್ಧತೆಗಳನ್ನು ವ್ಯವಸ್ಥೆ ಮಾಡಲಾಗುವುದು ಎಂದ ಅವರು. ಗಿರಿಗೆ ಹೋಗುವ ರಸ್ತೆ ದುರಸ್ತಿ, ನಿರಂತರ ವಿದ್ಯುತ್ ಪೂರೈಕೆ, ತಾತ್ಕಾಲಿಕ ಆಸ್ಪತ್ರೆ, ಭಕ್ತಾಧಿಗಳಿಗೆ ಸಂಚರಿಸಲು ಹೆಚ್ಚುವರಿ ಬಸ್ ಒದಗಿಸುವುದು ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಅವರು ಸಂಬಂಧಿಸಿದ ಇಲಾಖಾ ಅಧಿಕಾರಿಗಳಿಗೆ ಸೂಚಿಸಿದರು.

ಕುಡಿಯುವ ನೀರಿನ ವ್ಯವಸ್ಥೆ, ಭಕ್ತರಿಗೆ ಪ್ರಸಾದ ಊಟದ ವ್ಯವಸ್ಥೆಯನ್ನು ಒದಗಿಸಲಾಗುವುದು. ಗಿರಿಯಲ್ಲಿ ಸುಗಮ ಸಂಚಾರಕ್ಕೆ ಅನುಕೂಲವಾಗಲು ಚಿಕ್ಕ ವಾಹನಗಳನ್ನು ಬಳಸುವಂತೆ ತಿಳಿಸಿದರು.



ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಕ್ರಮ್ ಅಮಟೆ ಮಾತನಾಡಿ, ಉರುಸ್ ಕಾರ್ಯಕ್ರಮಕ್ಕೆ ಅಗತ್ಯ ಪೊಲೀಸ್ ಭದ್ರತೆಯನ್ನು ಒದಗಿಸಲಾಗುವುದು. ಸಂಚಾರ ವ್ಯವಸ್ಥೆ ನಿರ್ವಹಣೆಗೆ ಗಮನಹರಿಸಲಾಗುವುದು ಎಂದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹೆಚ್.ಎಸ್. ಕೀರ್ತನಾ, ಚಿಕ್ಕಮಗಳೂರು ತಹಸೀಲ್ದಾರ್ ಡಾ. ಸುಮಂತ್, ನಗರಸಭೆ ಪೌರಾಯುಕ್ತ ಬಸವರಾಜ್ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು, ವ್ಯವಸ್ಥಾಪನಾ ಸಮಿತಿ ಅಧ್ಯಕ್ಷರು, ಸದಸ್ಯರು ಮತ್ತು ಮುಸ್ಲಿಂ ಮುಖಂಡರು ಹಾಜರಿದ್ದರು.

# ನ್ಯಾಯಬೆಲೆ ಅಂಗಡಿಗಳಲ್ಲಿ ಸಾರವರ್ಧಿತ ಅಕ್ಕಿ ವಿತರಣೆ

**ಚಿಕ್ಕಮಗಳೂರು:** ನ್ಯಾಯಬೆಲೆ ಅಂಗಡಿಗಳಲ್ಲಿ ಪಡಿತರ ಚೀಟಿದಾರರಿಗೆ ಪ್ಲಾಸ್ಟಿಕ್ ಅಕ್ಕಿಯನ್ನು ವಿತರಿಸಲಾಗುತ್ತಿರುವುದಾಗಿ ದೂರುಗಳು ಬಂದಿರುತ್ತವೆ. ಆದರೆ ಸಾರ್ವಜನಿಕ ವಿತರಣಾ ಪದ್ಧತಿಯಡಿ ನ್ಯಾಯಬೆಲೆ ಅಂಗಡಿಗಳಲ್ಲಿ ವಿತರಿಸಲಾಗುತ್ತಿರುವ ಅಕ್ಕಿಯು ಸಾರವರ್ಧಿತ ಅಕ್ಕಿಯಾಗಿದ್ದು (ಈಠಿಡಿಣುಜಿಜಜ ಖಿಛಿಜ) ಪ್ಲಾಸ್ಟಿಕ್ ಅಕ್ಕಿಯಾಗಿರುವುದಿಲ್ಲ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.ಕೇಂದ್ರ ಸರ್ಕಾರವು ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಬಡತನ ರೇಖೆಗಿಂತ ಕೆಳಗಿರುವ ಪಡಿತರ ಚೀಟಿದಾರರಲ್ಲಿ ಅಪೌಷ್ಠಿಕತೆಯನ್ನು ನಿವಾರಿಸುವ ಸಲುವಾಗಿ ಸಾರವರ್ಧಿತ ಅಕ್ಕಿಯನ್ನು ಬಿಡುಗಡೆ ಮಾಡುತ್ತಿದ್ದು, ಸದರಿ ಅಕ್ಕಿಯನ್ನು ಜಿಲ್ಲೆಯ ಎಲ್ಲಾ ನ್ಯಾಯಬೆಲೆ ಅಂಗಡಿ ಮೂಲಕ ಪಡಿತರ ಚೀಟಿದಾರರಿಗೆ ವಿತರಿಸಲಾಗುತ್ತಿದೆ.

1 ಕೆ.ಜಿ. ಸಾರವರ್ಧಿತ ತುಣುಕುಗಳನ್ನು 100 ಕೆ.ಜಿ. ಸಾಮಾನ್ಯ ಅಕ್ಕಿಗೆ ಮಿಶ್ರಣ ಮಾಡಿ (1:100 ಅನುಪಾತದಲ್ಲಿ) ಸಾರವರ್ಧಿತ ಅಕ್ಕಿಯನ್ನು ಸಿದ್ಧಪಡಿಸಿ, ಕೇಂದ್ರ ಸರ್ಕಾರದಿಂದ ಜಿಲ್ಲೆಯ ಸಗಟು ಮಳಿಗೆಗಳಿಗೆ ಸರಬರಾಜು ಮಾಡಲಾಗುತ್ತದೆ. ಸಾರವರ್ಧಿತ ಅಕ್ಕಿಯು ವ್ಯಕ್ತಿಯ ಆರೋಗ್ಯಕ್ಕೆ ಆಗತ್ಯವಾದ ಜೀವಸತ್ವಗಳು, ಪೋಷಕಾಂಶಗಳಾದ ಕಬ್ಬಿಣಾಂಶ, ಫೋಲಿಕ್ ಆಮ್ಲ ಹಾಗೂ ವಿಟಮಿನ್ ಬಿ-12 ಅನ್ನು ಒಳಗೊಂಡಿರುತ್ತದೆ. ಸಾರ್ವಜನಿಕರು ಇಂತಹ ವದಂತಿಗಳಿಗೆ ಕಿವಿಗೊಡದೆ ಸಾರವರ್ಧಿತ ಅಕ್ಕಿಯನ್ನು ನಿರಾತಂಕವಾಗಿ ಬಳಸಲು ಹಾಗೂ ಅಡುಗೆ ಮಾಡುವ ಸಂದರ್ಭದಲ್ಲಿ ಅಕ್ಕಿಯನ್ನು ತೊಳೆದಾಗ ಸಾರವರ್ಧಿತ ಅಕ್ಕಿಯು ನೀರಿನಲ್ಲಿ ತೇಲುವುದರಿಂದ, ಸದರಿ ಅಕ್ಕಿಯನ್ನು ಪಡಿತರ ಚೀಟಿದಾರರು ಚೆಲ್ಲದೇ ಬೇಯಿಸಿ ಉಪಯೋಗಿಸಬಹುದಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪರಕೀಯರನ್ನು ಹಿಮ್ಮೆಟ್ಟಿಸಿ ರಾಷ್ಟ್ರ ಕಟ್ಟಿದ ಶಿವಾಜಿ ಮಹಾರಾಜರು : ಬಿ.ವೈ.ರಾಘವೇಂದ್ರ

**ಶಿವಮೊಗ್ಗ :** ಪರಕೀಯರ ದಾಳಿಯನ್ನು ಹಿಮ್ಮೆಟ್ಟಿಸಿ ರಾಷ್ಟ್ರ ಕಟ್ಟಿದ

ಛತ್ರಪತಿ ಶಿವಾಜಿ ಮಹಾರಾಜರನ್ನು ಯಾವುದೇ ಒಂದು ಜಾತಿಗೆ ಸೀಮಿತಗೊಳಿಸದೇ ಎಲ್ಲರೂ ಸೇರಿ ಜಯಂತಿಯನ್ನು ಆಚರಣೆ ಮಾಡೋಣ ಎಂದು ಸಂಸದರಾದ ಬಿ.ವೈ. ರಾಘವೇಂದ್ರ ಕರೆ ನೀಡಿದರು.

ಜಿಲ್ಲಾಡಳಿತ, ಜಿ.ಪಂ, ಮಹಾನಗರಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ ಬುಧವಾರ ನಗರದ ಕುವೆಂಪು ರಂಗಮಂದಿರದಲ್ಲಿ ಆಯೋಜಿಸಲಾಗಿದ್ದ ಛತ್ರಪತಿ ಶ್ರೀ ಶಿವಾಜಿ ಮಹಾರಾಜರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪರಕೀಯ ಆಕ್ರಮಣಕಾರರನ್ನು ಹಿಮ್ಮೆಟ್ಟಿಸಿ, ದೇಶದಲ್ಲಿ ಹಿಂದೂ ಸಾಮ್ರಾಜ್ಯ ಸ್ಥಾಪಿಸಲು ಹೋರಾಡಿದ ದಾರ್ಶನಿಕರು ಶಿವಾಜಿ ಮಹಾರಾಜರು. ತಾಯಿ ಜೀಜಾಬಾಯಿಯವರು ಶೌರ್ಯದಿಂದ ಮಗನನ್ನು ಬೆಳೆಸಿದ ಪ್ರತಿಫಲವಾಗಿ ಅವರು ಹಿಂದೂ ರಾಷ್ಟ್ರ ಕಟ್ಟುವಲ್ಲಿ ಸಫಲರಾದರು.

ಶಿವಮೊಗ್ಗಕ್ಕೂ ಶಿವಾಜಿಯವರ ಕುಟುಂಬಕ್ಕೂ ಅವಿನಾಭಾವ ಸಂಬಂಧ ಇದೆ. ಶಿವಾಜಿಯವರ ಮಕ್ಕಳು ಮೊಘಲರಿಂದ ತಪ್ಪಿಸುಕೊಳ್ಳುವಾಗ ಕೆಳದಿ ರಾಣಿ ಚೆನ್ನಮ್ಮ ಅವರನ್ನು ರಕ್ಷಿಸುವಲ್ಲಿ ಸಹಾಯ ಮಾಡಿದ್ದರು ಎಂದು ಸ್ಮರಿಸಿದರು.

ಮೊಘಲರು ಸೇರಿದಂತೆ ಇತರೆ ಆಕ್ರಮಣಕಾರರ ವಿರುದ್ದ ಹೊರಾಡಿದ್ದ ಶಿವಾಜಿ ಹಾಗೂ ವಂಶಸ್ಥರನ್ನು ನಾವು ಸ್ಮರಿಸಬೇಕು ಎಂದ ಅವರು ಪ್ರಸ್ತುತ ಪ್ರಯಾಗರಾಜ್ನಲ್ಲಿ ನಡೆಯುತ್ತಿರುವ ಕುಂಭಮೇಳದಲ್ಲಿ ಸಹ ಶಿವಾಜಿ ಮಹಾರಾಜರ ಕೊಡುಗೆ ಇದೆ ಎಂದರು.



ಯುವ ವಾಗ್ಮಿ ಕುಮಾರಿ ಹಾರಿಕ ಮಂಜುನಾಥ್ ವಿಶೇಷ ಉಪನ್ಯಾಸ ನೀಡಿ ಮಾತನಾಡಿ, ನಮ್ಮ ದೇಶದ ಗುಡಿ ಗೋಪುರಗಳನ್ನು ಉಳಿಸಿದ ಶಿವಾಜಿ ಮಹಾರಾಜರು ದೇವರ ಸಮಾನರು. ನಮ್ಮ ಸನಾತನ ಧರ್ಮವನ್ನು ನಾಶಗೊಳಿಸಲು ಪ್ರಯತ್ನಿಸಿದವರ ವಿರುದ್ದ ನಿಂತು ರಾಷ್ಟ್ರ ರಕ್ಷಣೆಯಲ್ಲಿ ತೊಡಗಿದ್ದ ಶೌರ್ಯವಂತರು.

ಹಿಂದು ಧರ್ಮ ಪಾಲನೆಗೆ ಅಡೆತಡೆಗಳಿದ್ದವು ಹಾಗೂ ನಮ್ಮ ಸನಾತನ ಧರ್ಮಕ್ಕೆ ನಿರಂತರವಾಗಿ ಒಂದು ಸಾವಿರ ವರ್ಷಗಳ ದಾಳಿ ನಡೆದರೂ ಶಿವಾಜಿಯಂತಹ ಹೋರಾಟಗಾರರಿಂದ ಧರ್ಮ ರಕ್ಷಣೆಯಾಗಿದೆ. ಜಾಗತಿಕ ಮಟ್ಟದಲ್ಲಿ ಅನೇಕ ಪ್ರಾಚೀನ ಮತ, ಪಂಥಗಳು ಕಣ್ಮರೆಯಾಗಿರುವುದನ್ನು ಕಾಣಬಹುದಾಗಿದೆ. ಆದರೆ ಶಿವಾಜಿಯಂತಹವರು ಪರಕೀಯ ದೇಶಗಳ ಸರಣಿ ದಾಳಿಯಿಂದ ರಾಷ್ಟ್ರ ರಕ್ಷಣೆ ಮಾಡಿದ್ದಾರೆ.

ಧರ್ಮ ರಕ್ಷಣೆಗಾಗಿಯೇ ಎಂಬಂತೆ ಚಿಕ್ಕಂದಿನಿಂದಲೇ ಹೋರಾಟ ಮಾಡುತ್ತಾ ಬಂದ ಶಿವಾಜಿ ಮಹಾರಾಜರು, ಸಂಘಟಿತ ಬಲ ನೀಡಿ, ದೇಶ ರಕ್ಷಿಸಿದರು. ಸಂಘಟನಾ ತತ್ವದ ಕುರಿತು ಸಾರಿದರು. ಇದಕ್ಕೆಲ್ಲಾ ಕಾರಣ ತಾಯಿ ಜೀಜಾಬಾಯಿ. ಅವರು ವೀರತ್ವ ಮತ್ತು ಶೌರ್ಯದ ಕನಸನ್ನು ಕಟ್ಟಿಕೊಟ್ಟಿದ್ದರು. ಹಾಗೆಯೇ ಎಲ್ಲ ತಾಯಂದಿರು ತಮ್ಮ ಮಕ್ಕಳು ಉತ್ತಮ ಪ್ರಜೆಯಾಗಬೇಕೆಂಬುದನ್ನು ಕಲಿಸಬೇಕು ಎಂದರು.

ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಚಂದ್ರಭೂಪಾಲ್, ಎಎಸ್ಪಿ ಅನಿಲ್ ಕುಮಾರ್ ಭೂಮರಡ್ಡಿ, ಶಿವಮೊಗ್ಗದ ತಹಶೀಲ್ದಾರ ವಿ.ಎಸ್.ರಾಜೀವ್, ಸಮಾಜದ ಮುಖಂಡರಾದ ಆರ್.ಚಂದ್ರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಉಮೇಶ್, ಸಮಾಜದ ಮುಖಂಡರು ಹಾಜರಿದ್ದರು.

# ಕಾನೂನು ಸಾಕ್ಷರತಾ ಕಾರ್ಯಕ್ರಮ

**ಚಿಕ್ಕಮಗಳೂರು:** ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ (ರಿ), ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ನಗರಸಭೆ ವತಿಯಿಂದ ಫೆಬ್ರವರಿ 20 ರಂದು ಬೆಳಿಗ್ಗೆ 10.00 ಗಂಟೆಗೆ ನಗರದ ಶಾಂತಿನಗರ(ಪುರಿಭಟ್ಟಿ), ಓಂ ಶಕ್ತಿ ಸಮುದಾಯ ಭವನದಲ್ಲಿ ವಿಶ್ವ ಸಾಮಾಜಿಕ ನ್ಯಾಯ ದಿನದ ಅಂಗವಾಗಿ ಕಾನೂನು ಸಾಕ್ಷರತಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ವಿ. ಹನುಮಂತಪ್ಪ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ,

ನಗರಸಭೆ ಅಧ್ಯಕ್ಷೆ ಸುಜಾತ ಶಿವಕುಮಾರ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಜಿಲ್ಲಾ ವಕೀಲರ ಸಂಘ ಅಧ್ಯಕ್ಷ ಡಿ.ಬಿ. ಸುಜೇಂದ್ರ, ನಗರಸಭೆ ಪೌರಾಯುಕ್ತರು ಬಸವರಾಜು ಬಿ.ಸಿ., ನಗರಸಭೆ ಉಪಾಧ್ಯಕ್ಷೆ ಅನುಮಧುಕರ್, ನಗರಸಭೆ ವಾರ್ಡ್ ನಂ.20, ಸದಸ್ಯೆ ತಬಸುಮ್ ಬಾನು ಮುಂತಾದವರು ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

# ವಿಜಯನಗರ ಸೊಸೈಟಿ ಅಧ್ಯಕ್ಷರಾಗಿ ಬಿ. ರಮೇಶ್, ಉಪಾಧ್ಯಕ್ಷರಾಗಿ ಬಿ. ಚಂದ್ರಪ್ಪ



**ದಾವಣಗೆರೆ:** ವಿಜಯನಗರ ಸೊಸೈಟಿ ಅಧ್ಯಕ್ಷರಾಗಿ ಬಿ. ರಮೇಶ್ ಹಾಗೂ ಉಪಾಧ್ಯಕ್ಷರಾಗಿ ಬಿ. ಚಂದ್ರಪ್ಪ 2025-2030ರ ಅವಧಿಗೆ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ರಿಟರ್ನಿಂಗ್ ಅಧಿಕಾರಿ ಹಾಗೂ ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಛೇರಿಯ ಅಧೀಕ್ಷಕಿ ಪಿ. ನಿವೇದಿತಾ ತಿಳಿಸಿದ್ದಾರೆ.

ಫೆ 18ರ ಮಂಗಳವಾರ ನಡೆದ ಅಧ್ಯಕ್ಷ - ಉಪಾಧ್ಯಕ್ಷರ ಚುನಾವಣೆಯಲ್ಲಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಈ ಸಂದರ್ಭದಲ್ಲಿ ನಿರ್ದೇಶಕರುಗಳಾದ ತಿಪ್ಪೇಸ್ವಾಮಿ ಬಿ., ಮಮತ ಎಂ., ಶಿವಾನಂದ ಜೆ.ಕೆ., ಪಂಪಣ್ಣ ದಬಡಿ, ರಮೇಶ್ ಬಿ. (ಪಿ.ಜೆ.), ಮಂಜುನಾಥ ಬಿ., ದುಗ್ಗೇಶ್ ಎಸ್., ವಾಣಿ ಹೆಚ್.ಸಿ., ವಂದನ ಹೆಚ್.ಎಂ., ಶೃತಿ ಎಂ. ವ್ಯವಸ್ಥಾಪಕ ದಯಾನಂದ ದೊಡ್ಡಮನಿ ಉಪಸ್ಥಿತರಿದ್ದರು.

# ನೇರ ಸಂದರ್ಶನ

**ಚಿಕ್ಕಮಗಳೂರು:** ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಚಿಕ್ಕಮಗಳೂರು ಕಛೇರಿಯಲ್ಲಿ ಫೆಬ್ರವರಿ 21 ರಂದು ಬೆಳಿಗ್ಗೆ 10.30 ಗಂಟೆಗೆ ಖಾಸಗಿ ಕಂಪನಿಯಾದ ಯುತ್ ಫೊರ್ ಜಾಬ್ಸ್, ಬೆಂಗಳೂರು ಇವರು ತಮ್ಮಲ್ಲಿ ಖಾಲಿ ಇರುವ ಹುದ್ದೆಗಳಿಗೆ ನೇರ ಸಂದರ್ಶನವನ್ನು ಏರ್ಪಡಿಸಲಾಗಿದೆ. ಉಚಿತ ಪ್ರವೇಶವಾಗಿದ್ದು, ಎಸ್ಎಸ್ಎಲ್ಸಿ, ಪಿಯುಸಿ, ಐಟಿಐ, ಡಿಪ್ಲೋಮಾ ಮತ್ತು ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರುವ 18 ರಿಂದ 30 ವರ್ಷ ವಯೋಮಿತಿಯ ಅಂಗವಿಕಲ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ದೂರವಾಣಿ: 9945198500/ 08262-295538 ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


## ನಿಧಿ ಆಪ್ಕೆ ನಿಕಟ್ ಕಾರ್ಯಕ್ರಮ

**ಶಿವಮೊಗ್ಗ:** ಪ್ರಾದೇಶಿಕ ಭವಿಷ್ಯ ನಿಧಿ ಕಚೇರಿ ವತಿಯಿಂದ ನಿಧಿ ಆಪ್ಕೆ ನಿಕಟ್ 2.0 ಕಾರ್ಯಕ್ರಮವನ್ನು ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ಫೆ. 27 ರಂದು ಆಯೋಜಿಸಲಾಗಿದೆ. ಶಿವಮೊಗ್ಗ ಜಿಲ್ಲೆಯಲ್ಲಿ ಸೊರಬದ ಪ್ರವಾಸಿ ಮಂದಿರದಲ್ಲಿ ಹಾಗೂ ದಾವಣಗೆರೆ ಜಿಲ್ಲೆಯ ಚಿರಾಗ್ ಮೆಡಿಕೇರ್ ಸಲ್ಯೂಷನ್ ಪ್ರೈ. ಲಿ., ಎಂ.ಸಿ.ಸಿ.ಬಿ ಬ್ಲಾಕ್, ಗುಂಡಿ ಮಹಾದೇವಪ್ಪ ಚೌಲ್ಟ್ರಿ ಹಿಂಭಾಗ ಇಲ್ಲಿ ನಿಧಿ ಆಪ್ಕೆ ನಿಕಟ್ ಕಾರ್ಯಕ್ರಮ ನಡೆಯಲಿದೆ.ಉದ್ಯೋಗದಾತರು ಮತ್ತು ಉದ್ಯೋಗಿಗಳಿಗೆ ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆ ಹಾಗೂ ಪಿಂಚಣಿದಾರರಿಗೆ ಮಧ್ಯಾಹ್ನ 2.30 ರಿಂದ ಸಂಜೆ 4 ಗಂಟೆವರೆಗೆ ನಿಧಿ ಆಪ್ಕೆ ನಿಕಟ್ ಕಾರ್ಯಕ್ರಮ ನಡೆಯಲಿದ್ದು, ಉದ್ಯೋಗದಾತರು ಮತ್ತು ಉದ್ಯೋಗಿಗಳು ಮತ್ತು ಪಿಂಚಣಿದಾರರು ಈ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳುವಂತೆ ಪ್ರಾದೇಶಿಕ ಕಚೇರಿಯ ಸಹಾಯಕ ಭವಿಷ್ಯ ನಿಧಿ ಆಯುಕ್ತರು ತಿಳಿಸಿದ್ದಾರೆ.

## ಆನವಟ್ಟಿ :ಮೆಸ್ಕಾಂ ಜನ ಸಂಪರ್ಕ ಸಭೆ

**ಶಿವಮೊಗ್ಗ:** ಆನವಟ್ಟಿ ಮೆಸ್ಕಾಂ ಉಪವಿಭಾಗ ಕಛೇರಿಯಲ್ಲಿ ಫೆ. 20 ರಂದು ಬೆಳಿಗ್ಗೆ 11.00 ರಿಂದ 01.00 ರವರೆಗೆ ಜನ ಸಂಪರ್ಕ ಸಭೆ ನಡೆಯಲ್ಲಿದೆ. ಈ ಸಭೆಯಲ್ಲಿ ಸಂಬಂಧಪಟ್ಟ ಪ್ರದೇಶದ ಗ್ರಾಹಕರ ಅಹವಾಲುಗಳನ್ನು ಸ್ವೀಕರಿಸಲಿದ್ದು, ಈ ಅವಕಾಶವನ್ನು ಗ್ರಾಹಕರು ಸದುಪಯೋಗಪಡಿಸಿಕೊಳ್ಳುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ. ಸಂಪರ್ಕಿಸಬಹುದಾದ ದೂರವಾಣಿ ಸಂಖ್ಯೆ; 9448998783.


## ಲೆಕ್ಕ ಪರಿಶೋಧನಾ ಕಟ್ಟಡ ನಿರ್ಮಾಣಕ್ಕೆ ಸಚಿವ ಡಾ.ಎಚ್.ಕೆ.ಪಾಟೀಲ ಚಾಲನೆ



**ಗದಗ :** ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ನಗರದ ಗಂಗಿಮಡಿ ರಸ್ತೆಯ 21 ನೇ ವಾರ್ಡನಲ್ಲಿ ಲೆಕ್ಕ ಪರಿಶೋಧಕರ ಕಾರ್ಯಾಲಯದ ಕಟ್ಟಡದ ಭೂಮಿ ಪೂಜೆ ನೆರವೇರಿಸಿದರು. ಈ ಸಂದರ್ಭದಲ್ಲಿ ಗದಗ ಬೆಟಗೇರಿ ನಗರಾಬಿವೃದ್ದಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಗದಗ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಬಿ.ಅಸೂಟಿ, ತಾಲೂಕು ಮಟ್ಟದ ಗ್ಯಾರಂಟಿ ಯೋಜನಾ ಸಮಿತಿ ಅಧ್ಯಕ್ಷರಾದ ಅಶೋಕ ಮಂದಾಲಿ, ಹಾಗೂ ಸಿಬ್ಬಂದಿಗಳು , ಗಣ್ಯರು ಹಾಜರಿದ್ದರು.



# ಬೇಸಿಗೆಯ ರಾಜ ಕರಬೂಜದ ಘಮ







**ಹೊನ್ನಾಳಿ:** ಬೇಸಿಗೆ ಬಂತೆಂದರೆ ಕರಬೂಜ ಹಣ್ಣುಗಳ ಸುಗ್ಗಿ ಆರಂಭವಾಯಿತು ಎಂದೇ ಅರ್ಥ. ಬಂಗಾರದ ಬಣ್ಣ ಹಾಗೂ ಸುವಾಸನೆಯಮೂಲಕ ಗಮನ ಸೆಳೆಯುವ ಈ ಹಣ್ಣುಗಳು ಪಟ್ಟಣಕ್ಕೆ ಲಗ್ಗೆಯಿಟ್ಟಿವೆ. ಎಲ್ಲೆಲ್ಲೂ ಇವುಗಳ ಘಮಮೂಗಿಗೆ ಬಡಿಯುತ್ತಿದೆ.

ಇದರಿಂದ ತಯಾರಿಸುವ ಜ್ಯೂಸ್, ಸೀಕರಣೆ ಜನಪ್ರಿಯ. ದೇಹವನ್ನು ತಂಪಾಗಿರಿಸಿ ಆರೋಗ್ಯ ವೃದ್ಧಿಸುತ್ತವೆ. ಎಲ್ಲಾ ವಯೋಮಾನದವರೂ ಇಷ್ಟಪಡುವ ಈ ಹಣ್ಣುಗಳು ಮೂತ್ರಪಿಂಡ ಸ್ವಚ್ಛ ಮಾಡುವ ಕೆಲಸಮಾಡುತ್ತವೆ ಎನ್ನುತ್ತಾರೆ ವೈದ್ಯರು.

ತಾಲ್ಲೂಕಿನಹೊಳೆಮಾದಾಪುರ, ಬೇಲಿಮಲ್ಲೂರು, ಹರಳಹಳ್ಳಿಯಲ್ಲಿ ನೂರಾರು ಎಕರೆ ಪ್ರದೇ ಶದಲ್ಲಿ ಕರಬೂಜ ಬೆಳೆಯಲಾಗುತ್ತದೆ. ಪ್ರತಿದಿನ ಬೆಳಗ್ಗಿನ ಜಾವ 4 ಗಂಟೆಗೆ ಸೇತುವೆ ಪಕ್ಕದಮಾರುಕಟ್ಟೆಗೆ ಹಣ್ಣು ಲಗ್ಗೆಯಿಡುತ್ತವೆ. ಭದ್ರಾವತಿ, ಶಿವಮೊಗ್ಗ, ಶಿಕಾರಿಪುರ, ದಾವಣಗೆರೆ, ಚಿತ್ರದುರ್ಗ, ಹಾವೇರಿ, ರಾಣೆಬೆನ್ನೂರು, ಸವಣೂರು, ಶಿರಾಳಕೊಪ್ಪ, ಬಂಕಾಪುರ, ಕಡೂರು, ಬೀರೂರು, ತರಿಕೇರಿ ಭಾಗಗಳ ವ್ಯಾಪಾರಿಗಳು ಇಲ್ಲಿಗೆ ಬಂದು ಖರೀದಿಮಾಡುತ್ತಾರೆ. 8 ಗಂಟೆ ಹೊತ್ತಿಗೆ ವಹಿವಾಟು ಮುಗಿದಿರುತ್ತದೆ.

3 ತಿಂಗಳಲ್ಲಿ ವಹಿವಾಟು: ಸಾಮಾನ್ಯವಾಗಿ ಪ್ರತಿವರ್ಷದ ಜನವರಿ ಕೊನೆ ಅಥವಾ ಫೆಬ್ರುವರಿ ಮೊದಲ ವಾರದಲ್ಲಿ ಕರಬೂಜ ಹಣ್ಣುಗಳು ಮಾರುಕಟ್ಟೆಗೆ ಲಗ್ಗೆಯಿಡುತ್ತವೆ. ಮಾರ್ಚ್‌ವರೆಗೂ ಮಾರುಕಟ್ಟೆಯಲ್ಲಿ ಮೇಲುಗೈ ಸಾಧಿಸುತ್ತವೆ. ರೈತರಿಗೆ ಉತ್ತಮ ಆದಾಯವನ್ನೂ ತಂದುಕೊಡುತ್ತವೆ.ಮೂರು ತಿಂಗಳ ಅವಧಿಯಲ್ಲಿ 80 ಲಕ್ಷದಿಂದ 1 ಕೋಟಿವರೆಗೂ ವಹಿವಾಟು ನಡೆಯುತ್ತದೆ ಎನ್ನುತ್ತಾರೆ ವ್ಯಾಪಾರಿ ಅಲ್ಲಾಭಕ್ಷಿ ಮುಲ್ಲಾಣಿ. ಕನಿಷ್ಠ 80ಕ್ಕೆ ಒಂದರಂತೆ ಕರಬೂಜ ಮಾರಾಟ ಮಾಡಲಾಗುತ್ತಿದೆ. ಹಣ್ಣುಗಳ ಗಾತ್ರದ ಮೇಲೆ ದರ ನಿಗದಿ ಮಾಡಲಾಗುತ್ತದೆ ಎನ್ನುತ್ತಾರೆ ವ್ಯಾಪಾರಿ ನಾಗರಾಜ್.

ಅಲ್ಪಾವಧಿ ಬೆಳೆ ಅಧಿಕ ಲಾಭ ಡಿಸೆಂಬರ್‌ನಲ್ಲಿ ಬಿತ್ತನೆ ಪ್ರಕ್ರಿಯೆ ಶುರುವಾಗುತ್ತದೆ. ಭೂಮಿ ಹದಮಾಡಿ ಗುಣಿ ತೆಗೆದು ಅದರಲ್ಲಿ ಸಗಣಿ ಗೊಬ್ಬರ ಹಾಕಲಾಗುತ್ತದೆ. 20 ದಿನ ಬಿಟ್ಟು ನೆನೆಸಲು ಇಟ್ಟಿದ್ದ ಬೀಜಗಳನ್ನು ಅರಳೆಲೆಯಲ್ಲಿ ಬಟ್ಟೆಸುತ್ತಿ ಕಟ್ಟಲಾಗುತ್ತದೆ. 2 ದಿನಕ್ಕೆ ಬೀಜ ಮೊಳಕೆ ಬರುತ್ತದೆ. ಮಡಿಗಳಲ್ಲಿ ಎಂಟು ದಿನ ಪೋಷಿಸಿದ ಬಳಿಕ ಸಸಿ ನಾಟಿ ಮಾಡಲಾಗುತ್ತದೆ. 3 ತಿಂಗಳಿಗೆ ಈ ಬೆಳೆ ಫಲಕ್ಕೆ ಬರುತ್ತದೆ ಎಂದು ರೈತರಾದ ರಾಜಪ್ಪ ಶಿವಾನಂದಪ್ಪ ವಿವರಿಸುತ್ತಾರೆ. ಶೀತ ಹವಾಗುಣ ಹಾಗೂ ನದಿ ದಡದಲ್ಲಿ ಈ ಹಣ್ಣುಗಳನ್ನು ಬೆಳೆಯುತ್ತಾರೆ. ಅಧಿಕ ನೀರು ಅಗತ್ಯವಿಲ್ಲ. ಕೇವಲ ಸಗಣಿ ಗೊಬ್ಬರ ಬಳಸಿದರೆ ಸಾಕು. ಕರಬೂಜಕ್ಕೂ ರೋ ಗಬಾಧೆ ತಪ್ಪಿದ್ದಲ್ಲ. ಬುಡ ಕೊಳೆರೋಗ ಕಡಕ್ ರೋಗ ಬುಟ್ರಿ ರೋಗ ತಗುಲಿದರೆ ಬೆಳೆನಾಶವಾಗುವ ಸಂಭವವೂ ಇದೆ. ರೋಗಮುಕ್ತವಾಗಿದ್ದರೆ ಅಲ್ಪಾವಧಿಯಲ್ಲಿಯೇ ಒಳ್ಳೆಯ ಲಾಭ ಗಳಿಸಬಹುದು ಎನ್ನುತ್ತಾರೆ ವ್ಯಾಪಾರಿ ಪರ್ವೇಜ್.

## ದಾಖಲಾತಿ ಕೊರತೆಯಿಂದ ಸರ್ಕಾರಿ ಶಾಲೆಗಳು ಮುಚ್ಚುತ್ತಿರುವುದು ದುರದೃಷ್ಟಕರ

**ಕೊಪ್ಪ:** ದಾಖಲಾತಿ ಕೊರತೆಯಿಂದ ಸರ್ಕಾರಿ ಶಾಲೆಗಳು ಮುಚ್ಚುತ್ತಿರುವುದು ದುರದೃಷ್ಟಕರ ಎಂದು ಶಾಸಕ ಟಿ.ಡಿ.ರಾಜೇಗೌಡ ಹೇಳಿದರು. ತಾಲ್ಲೂಕಿನ ಗಡಿಕಲ್‌ನಲ್ಲಿ ರಾಷ್ಟ್ರಕವಿ ಕುವೆಂಪು ವೇದಿಕೆ, ಆಲೆಮನೆ ಸಣ್ಣಸಿದ್ದಪ್ಪ ನಾಯಕ್ ಸ್ಮಾರಕ ಮಂಟಪದಲ್ಲಿ ಆಯೋಜಿಸಿದ್ದ ಆಲೆಮನೆ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ ಶತಮಾನೋತ್ಸವ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು. ಮಾಹಿತಿ ತಂತ್ರಜ್ಞಾನ ನಾಗಾಲೋಟದಲ್ಲಿ ಬೆಳೆಯುತ್ತಿರುವುದರಿಂದ ಶಿಕ್ಷಣ ಅಗತ್ಯ. ಶಾಲಾಭಿವೃದ್ಧಿ ಸಮಿತಿ ಸಲ್ಲಿಸಿದ ಬೇಡಿಕೆಗಳಾದ ರಂಗ ಮಂದಿರ, ಕ್ರೀಡಾಂಗಣ ನಿರ್ಮಾಣಕ್ಕೆ ಆದ್ಯತೆ ನೀಡಲಾಗುವುದು ಎಂದರು.ಭದ್ರಾ ಕಾಡಾ ಅಧ್ಯಕ್ಷ ಡಾ.ಕೆ.ಪಿ.ಅಂಶುಮಂತ್ ಸ್ಮರಣ ಸಂಚಿಕೆ ಬಿಡುಗಡೆಗೊಳಿಸಿ, ಮಕ್ಕಳ ಪ್ರತಿಭೆ ಗುರುತಿಸುವ ಕೆಲಸವಾಗಬೇಕು. ಪೋಷಕರು, ಶಿಕ್ಷಕರು ಸೇರಿ ನಡೆದಾಗ ಮಾತ್ರ ಮಕ್ಕಳ ಭವಿಷ್ಯಕ್ಕೆ ದಾರಿಯಾಗುತ್ತದೆ. ಮಕ್ಕಳ ಪ್ರತಿಯನ್ನು ಗುರುತಿಸುವ ಕೆಲಸ ಶಿಕ್ಷಣದಿಂದ ಆಗಬೇಕು ಎಂದರು. ರಾಮಸ್ವಾಮಿ, ಕುವೆಂಪು ಪ್ರತಿಷ್ಠಾನದ ಸಹ ಕಾರ್ಯದರ್ಶಿ ಕಡಿದಾಳ್ ಪ್ರಕಾಶ್ ಮಾತನಾಡಿದರು. ಎ.ಓ.ಸುರೇಶ್ ಅಧ್ಯಕ್ಷತೆ ವಹಿಸಿದ್ದರು.1936–37ನೇ ಸಾಲಿನ ವಿದ್ಯಾರ್ಥಿಗಳಾದ ಮಾನಪ್ಪ ಗೌಡ, ಶಂಕರಪ್ಪ ಗೌಡ, ಗೋಪಮ್ಮ, ನಿವೃತ್ತ ಶಿಕ್ಷಕರಾದ ರತ್ನಮ್ಮ, ಅನಸೂಯ, ರಾಜಾಚಾರ್, ನಾಗರಾಜ್, ವಿನೋದಮ್ಮ ಮತ್ತಿತರ ನಿವೃತ್ತ ಶಿಕ್ಷಕರು, ಅನೇಕ ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿರುವ ದೈಹಿಕ ಶಿಕ್ಷಣ ಶಿಕ್ಷಕಿ ಶೈಲಾ ಅವರನ್ನು ಸನ್ಮಾನಿಸಲಾಯಿತು.ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷ ಗುರುಮೂರ್ತಿ ಅಧ್ಯಕ್ಷತೆಯಲ್ಲಿ ಸಮಾರೋಪ ನಡೆಯಿತು. ಕ್ಷೇತ್ರ ಶಿಕ್ಷಣ ಸಮನ್ವಯಾಧಿಕಾರಿ ಯಶೋಧ ಸಮಾರೋಪ ಭಾಷಣ ಮಾಡಿದರು. ಹಳೆ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ ಎಚ್.ಎಂ.ರವಿಕಾಂತ್ ಬಹುಮಾನ ವಿತರಿಸಿದರು. ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ, ಗಾಯಕಿ ದಿಯಾ ಹೆಗಡೆ, ಸು–ರೇಖಾ ಹೆಗಡೆ, ಶಶಿಕಿರಣ್ ಭಟ್, ಪ್ರೀತಂ ಅವರಿಂದ ಸಂಗೀತ ಸಂಜೆ ಕಾರ್ಯಕ್ರಮ ನಡೆಯಿತು.ಹಿರೇಕೊಡಿಗಿ ಗ್ರಾ.ಪಂ. ಅಧ್ಯಕ್ಷೆ ಜಯಲಕ್ಷ್ಮಿ, ಶತಮಾನೋತ್ಸವ ಆಚರಣೆ ಸಮಿತಿ ಕಾರ್ಯದರ್ಶಿ ಎಚ್.ಎಸ್.ರಮೇಶ್, ಖಜಾಂಚಿ ಶಂಕರನಾರಾಯಣ ಉಡುಪ, ಸಹ ಕಾರ್ಯದರ್ಶಿ ಕೆ.ಡಿ.ಮಂಜುನಾಥ್, ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷ ಗುರುಮೂರ್ತಿ, ಉಪಾಧ್ಯಕ್ಷೆ ಅಂಬಿಕಾ, ಶಿಕ್ಷಣ ಇಲಾಖೆಯ ಶೇಖರಪ್ಪ, ಆರ್.ಡಿ.ರವೀಂದ್ರ, ಪಿಡಿಓ ಪದ್ಮಲತಾ ಇನ್ನಿತರರಿದ್ದರು.

## ಪ್ರತಿ ಬಾಲ್ಯ ವಿವಾಹ ಪ್ರಕರಣ 'ಹಾಟ್‌ಸ್ಪಾಟ್' ಎಂದು ಪರಿಗಣಿಸಿ

**ಶಿವಮೊಗ್ಗ:** ಜಿಲ್ಲೆಯಲ್ಲಿ ಎಲ್ಲೇ ಬಾಲ್ಯ ವಿವಾಹ ಪ್ರಕರಣ ನಡೆದರೂ ಅದನ್ನು 'ಹಾಟ್‌ಸ್ಪಾಟ್' ಎಂದು ಪರಿಗಣಿಸಿ ಅಗತ್ಯ ಕ್ರಮ ಕೈಗೊಳ್ಳಬೇಕು. ಸಮುದಾಯ ವನ್ನೊಳಗೊಂಡ ಪರಿಣಾಮಕಾರಿ ಕ್ರಮ ಕೈಗೊಂಡು ಶಾಶ್ವತ ಪರಿಹಾರಕ್ಕೆ ಒತ್ತು ನೀಡಬೇಕೆಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅಧಿಕಾರಿಗಳಿಗೆ ಸೂಚನೆ ನೀಡಿ–ದರು.ಜಿಲ್ಲಾಡಳಿತ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವಿವಿಧ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.ಪ್ರತಿ ಒಂದು ಬಾಲ್ಯ ವಿವಾಹ ಪ್ರಕರಣವನ್ನು ಹಾಟ್‌ಸ್ಪಾಟ್ ಎಂದು ಪರಿಗಣನೆಗೆ ತೆಗೆದುಕೊಂಡು ಚಟುವಟಿಕೆ ಕೈಗೊಳ್ಳಬೇಕು. ಶಾಶ್ವತ ಪರಿಹಾರ ಒದಗುವಂತಹ ಕ್ರಮ ಕೈಗೊಳ್ಳಬೇಕು. ಸ್ಥಳೀಯ ಮುಖಂಡರು, ಧಾರ್ಮಿಕ ಮುಖಂಡರು, ಜನ ಪ್ರತಿನಿಧಿಗಳು ಮತ್ತು ಪ್ರಭಾವಿ ವ್ಯಕ್ತಿಗಳ ಸಹಾಯ ತೆಗೆದುಕೊಂಡು ಸಮುದಾ ಯದಲ್ಲಿ ಮತ್ತು ಪೋಷಕರಲ್ಲಿ ಅರಿವು ಮೂಡಿಸುವಂತಾಗಬೇಕು. ಬಾಲ್ಯ ವಿವಾಹ ತಡೆಯುವಲ್ಲಿ ಶ್ರಮಿಸಿದ ಮುಖಂಡರು, ಪ್ರೇರಕರನ್ನು ಗೌರವಿಸಬೇಕು. ಸ್ಥಳೀಯವಾಗಿ ಕಾರ್ಯವೆಸಗುವ ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆ ಯರನ್ನು ಸದ್ಬಳಕೆ ಮಾಡಿಕೊಂಡು ಅವರನ್ನೂ ಗೌರವಿಸಬೇಕು.ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ಬಾಲ್ಯ ವಿವಾಹ ತಡೆ ಕಾರ್ಯ ದೊಂದಿಗೆ ಸಮುದಾಯಗಳಲ್ಲಿ ಶಾಶ್ವತವಾಗಿ ಬಾಲ್ಯ ವಿವಾಹ ತಡೆಯುವ ಚಟುವಟಿಕೆಗಳನ್ನು ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದರು.ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಂಜುನಾಥ್, ಜಿಲ್ಲೆಯಲ್ಲಿ 2024ರ ಏಪ್ರಿಲ್ ನಿಂದ ಡಿಸೆಂಬರ್ ಅಂತ್ಯದವರೆಗೆ ಬಾಲ್ಯ ವಿವಾಹದ ಬಗ್ಗೆ ಒಟ್ಟು 89 ದೂರು ಗಳನ್ನು ಸ್ವೀಕರಿಸಲಾಗಿದ್ದು ಒಟ್ಟು 26 ಬಾಲ್ಯ ವಿವಾಹ ತಡೆಯಲಾಗಿದೆ. 63 ಬಾಲ್ಯ ವಿವಾಹ ನಡೆದಿವೆ ಎಂದು ಹೇಳಿದರು.ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಕೃಷ್ಣಪ್ಪ ಮಾತ ನಾಡಿ, ಲೈಂಗಿಕ ಕಾರ್ಯಕರ್ತರು/ ಲೈಂಗಿಕ ಶೋಷಣೆಗೊಳಗಾದವರ ಪುನರ್ವ ಸತಿಗಾಗಿ ಚೇತನ ಯೋಜನೆಯಡಿ ಪ್ರತಿ ಫಲಾನುಭವಿಗೆ ನೇರವಾಗಿ ರೂ. 30,000 ಪ್ರೋತ್ಸಾಹ ನೀಡಲಾಗುತ್ತಿದೆ. ಅದರಂತೆ ಜಿಲ್ಲೆಯಲ್ಲಿ ಈವರೆಗೆ ರೂ.3 ಲಕ್ಷ ಬಿಡುಗ–ಡೆಯಾಗಿದೆ. ಇತರರಿಗೆ ರೂ. 1,50,000, ಎಸ್‌ಸಿ ರೂ. 90 ಸಾವಿರ, ಎಸ್‌ಟಿ ರೂ. 60 ಸಾವಿರ, ಪ್ರೋತ್ಸಾಹ ಧನ ನೀಡಲಾಗಿದೆ. 2024–25ನೇ ಸಾಲಿನ ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆಯಡಿ 87 ಪ್ರಕರಣಗಳು ಬಾಕಿ ಇದ್ದು, ಇದರಲ್ಲಿ ಸಂರಕ್ಷಣಾಧಿಕಾರಿಗಳ ಬಳಿ 40 ಹಾಗೂ ನ್ಯಾಯಾಲಯದಲ್ಲಿ 47 ಪ್ರಕರಣಗಳು ಬಾಕಿ ಇವೆ ಎಂದರು.ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಶಶಿರೇಖಾ ಮಾತನಾಡಿ, ರಾಜ್ಯ ಮಹಿಳಾ ನಿಲಯದಲ್ಲಿ 81 ಮಾನಸಿಕ ಅಸ್ವಸ್ಥರು ನಿವಾಸಿಯಾಗಿರುತ್ತಾರೆ. ಪ್ರಸ್ತುತ ಸಂಸ್ಥೆಯ ದುರಸ್ತಿ ಕಾಮಗಾರಿ ಪ್ರಗತಿಯಲ್ಲಿದೆ ಎಂದರು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಸುಜಾತಾ, ಡಿಹೆಚ್‌ಓ ಡಾ.ನಟರಾಜ್, ನಿರೂಪಣಾಧಿಕಾರಿ ಡಾ.ಸಂತೋಷ್ ಕುಮಾರ್, ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷ ತಾಜುದ್ದೀನ್ ಖಾನ್, ತಾಲ್ಲೂಕುಗಳ

## ಗೋಣಿಬೀಡಿನಲ್ಲಿ ನೂತನ ನಾಡಕಚೇರಿ ಉದ್ಘಾಟನೆ

ಮೂಡಿಗೆರೆ: ಗ್ಯಾರೆಂಟಿ ಯೋಜನೆಯಿಂದ ಮಹಿಳೆಯರು ಸ್ವಾವಲಂಬಿಗಳಾಗಿದ್ದಾರೆ. ಎಲ್ಲೆಡೆ ವ್ಯಾಪಾರ ವಹಿವಾಟು ಅಧಿಕಗೊಂಡಿದೆ. ಅಭಿವೃದ್ಧಿ ಕಿಂಚಿತ್ತೂ ಕುಂಠಿತವಾಗಿಲ್ಲವೆಂದು ಶಾಸಕಿ ನಯನಾ ಮೋಟಮ್ಮ ಹೇಳಿದರು.ಗೋಣಿಬೀಡಿನಲ್ಲಿ 18.84 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಿರುವ ನೂತನ ನಾಡ ಕಚೇರಿ ಉದ್ಘಾಟಿಸಿ ಮಾತನಾಡಿದ ಅವರು, ತಾನು ಶಾಸಕರಾದ ಬಳಿಕ 100 ಕೋಟಿಗೂ ಅಧಿಕ ಅನುದಾನ ಬಳಸಿ ಕ್ಷೇತ್ರದಲ್ಲಿ ರಸ್ತೆ, ಶಾಲೆ, ಅಂಗನವಾಡಿ ಸೇರಿದಂತೆ ಅನೇಕ ಕಾಮಗಾರಿಗಳು ನಡೆಸಲಾಗಿದೆ ಎಂದರು. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರೊಂದಿಗೆ ಚರ್ಚಿಸಿ 50 ಕೋಟಿ ರೂ. ಅನುದಾನ ತಂದಿದ್ದೇನೆ. ಅದರಲ್ಲಿ 27 ಕೋಟಿ ರೂ. ವೆಚ್ಚದಲ್ಲಿ ಕಗ್ಗನಹಳ್ಳ ಸೇತುವೆ ನಿರ್ಮಾಣ ಕಾಮಗಾರಿ ನಡೆಯುತ್ತಿದೆ. ಉಳಿದಂತೆ ಕಳಸ, ಆಲ್ದೂರು, ಅಂಬಳೆ, ದೇವವೃಂದ ಗ್ರಾಮಗಳಲ್ಲಿ ಸೇತುವೆ ನಿರ್ಮಾಣ ಕಾಮಗಾರಿ ನಡೆಯುತ್ತಿದೆ ಎಂದರು.10 ಕೋಟಿ ರೂ. ವೆಚ್ಚದಲ್ಲಿ ಗೋಣಿಬೀಡು ಹೋಬಳಿಯ ವಿವಿಧ ಗ್ರಾಮಗಳಲ್ಲಿ ಕಾಂಕ್ರೀಟ್ ರಸ್ತೆ ನಿರ್ಮಿಸಲಾಗಿದೆ. 25 ಕೋಟಿ ರೂ. ಅನುದಾನ ಬಳಸಿ ಕ್ಷೇತ್ರದಲ್ಲಿ 126 ರಸ್ತೆಗಳನ್ನು ಅಭಿವೃದ್ಧಿಪಡಿಸಲು 17 ಕೋಟಿ ಬಳಸಲಾಗಿದೆ. ಉಳಿದ ಅನುದಾನದಲ್ಲಿ ಲೋಕೋಪಯೋಗಿ ಇಲಾಖೆಗೆ ಸೇರಿದ ರಸ್ತೆಗಳ ಅಭಿವೃದ್ಧಿ ಕಾಮಗಾರಿ ನಡೆಯುತ್ತಿದೆ ಎಂದರು. ಗೋಣಿಬೀಡು ಗ್ರಾಪಂ ಅಧ್ಯಕ್ಷ ಜಿ.ಎಸ್.ದಿನೇಶ್, ಉಪಾಧ್ಯಕ್ಷೆ ಸುಜಾತ, ಸದಸ್ಯರಾದ ರಾಧಾ ಮಿತ್ರೇಶ್, ಜುಬೇದ, ಸುಮಿತ್ರಾ, ಆನಂದ, ಸುಧಾಮಣಿ, ಕೃಷ್ಣಪ್ಪ, ತಹಸೀಲ್ದಾರ್ ರಾಜಶೇಖರ್ ಮೂರ್ತಿ, ಉಪತಹಸಿಲ್ದಾರ್ ವೀಣಾಂಭ ಮತ್ತಿತರರಿದ್ದರು.


ಕರ್ನಾಟಕ ಸರ್ಕಾರ
(ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ)
ಗ್ರಾಮ ಪಂಚಾಯಿತಿ ಕಾರ್ಯಾಲಯ, ಕೆರೆಬಿಳಚಿ
ಚನ್ನಗಿರಿ (ತಾ) ದಾವಣಗೆರೆ (ಜಿ) tpchnker@yahoo.in

ನಂ:ಪಿಡಿಓ/ಗ್ರಾಪಂಕೆರೆ/2024–25 ದಿನಾಂಕ:15.02.2025

ಟೆಂಡರ್ ಪ್ರಕಟಣೆ

ವಿಷಯ:– 2024–25ನೇ 15ನೇ ಹಣಕಾಸು ಯೋಜನೆಯಡಿಯಲ್ಲಿ ಕಾಮಗಾರಿಗಳಿಗೆ ಅನುಮೋದಿತ ಕ್ರಿಯಾ ಯೋಜನೆಯ ಕಾಮಗಾರಿಗಳಿಗೆ ಕರೆಯಲಾದ ಅಲ್ಪಾವಧಿ ಇ–ಟೆಂಡರ್ ಕರೆದಿರುವ ಬಗ್ಗೆ.
ಉಲ್ಲೇಖ:– ಕರ್ನಾಟಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 & ನಿಯಮವಳಿಗಳು 2000

ಈ ಮೇಲ್ಕಂಡ ವಿಷಯಕ್ಕೆ ಸಂಬಂದಿಸಿದಂತೆ ಟೆಂಡರ್ ನಲ್ಲಿನ ಷರತ್ತುಗಳ ಪ್ರಕಾರ 2024–25ನೇ ಸಾಲಿನ ಕೆರೆಬಿಳಚಿ ಗ್ರಾಮ ಪಂಚಾಯಿತಿಯ 15ನೇ ಹಣಕಸು ಯೋಜನೆಯಡಿ ಅನುಮೋದನೆಯಾಗಿರುವ ಕಾಮಗಾರಿಗಳಾದ ಕೆರೆಬಿಳಚಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಹಳ್ಳಿಗಳ ಕುಡಿಯುವ ನೀರಿನ ಬೋರ್ ವೆಲ್ ಒಟ್ಟು 30 ಬೋರ್ ವೆಲ್ ಗಳ ದುರಸ್ತಿ ವಾರ್ಷಿಕ ನಿರ್ವಹಣೆಗಾಗಿ ಕಾಯ್ದಿರಿಸಿದಿ ಮೊತ್ತ (25%ಎಸ್ ಸಿ ಎಸ್ ಟಿ ಸೇರಿದಂತೆ) ಕೆರೆಬಿಳಚಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಹಳ್ಳಿಗಳ ಬೀದಿ ದೀಪ ಖರಿದಿಸಲು ಕಾಯ್ದಿರಿಸಿದಿ ಮೊತ್ತ (25%ಎಸ್ ಸಿ ಎಸ್ ಟಿ ಸೇರಿದಂತೆ) ಕೆರೆಬಿಳಚಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಹಳ್ಳಿಗಳನ ಕುಡಿಯುವ ನೀರಿನ ಬೋರ್ ವೆಲ್ ಸಾಮಾಗ್ರಿ ಖರೀದಿ ಮತ್ತು ಪೈಪ್ ಲೈನ್ ಸಾಮಾಗ್ರಿ ಖರೀದಿ, ಬೋರ್ ವೆಲ್ ಸ್ಟಾಟರ್ಸ್ ಕೇಬಲ್ ಮೋಟಾರಗಳ ಖರೀದಿಗಾಗಿ ಕಾಯ್ದಿರಿಸಿದ ಮೊತ್ತ (25%ಎಸ್ ಸಿ ಎಸ್ ಟಿ ಸೇರಿದಂತೆ) ಸಾಮಾಗ್ರಿ ಖರೀದಿ ಸಂಬಂದ ಕೆ.ಟಿ.ಟಿ.ಪಿ ನಿಯಾಮಾನುಸಾರ ಇ–ಪ್ರಕ್ಯೂರ್ ಮೆಂಟ್ ಮೂಲಕ ಟೆಂಡರಗಾಗಿ ಅರ್ಹ ಟೆಂಡರ್ ದಾರರು/ಸಂಸ್ಥೆಗಳು ಭರ್ತಿ ಮಾಡಿ ಟೆಂಡರ್ ಗಳನ್ನು ಕರ್ನಾಟಕ ಸರ್ಕಾರದ e-procurement portal ಪದ್ಧತಿಯಂತೆ http:/kppp.karnataka.gov.in ಮುಖಾಂತರ ಮಾತ್ರ ಸಲ್ಲಿಸತಕ್ಕದ್ದು

ವಾಸಾಇ/ದಾವಣಗೆರೆ/761/ ಕೆಎಸ್‌ಎಂಸಿಎ/2024–25

ಸಹಿ/– ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯಿತಿ, ಕೆರೆಬಿಳಚಿ.


## ಸೌಹಾರ್ದಯುತರಾಗಿ ಸಂಘಟಿತರಾಗಲು ಬಿದರಿ ಕರೆ



ಸೊರಬ: ವೀರಶೈವ ಲಿಂಗಾಯತ ಎರಡು ಒಂದೇ, ಸಮಾಜ ಬಾಂಧ ವರು ಉಪಜಾತಿ ಮರೆತು ಒಂದಾಗಬೇಕು. ಪರಸ್ಪರ ವೈಮನಸ್ಸು ಹಾಗೂ ಅಸೂಯೆಯಿಂದ ಹೊರಬಂದು ಸೌಹಾರ್ದಯುತವಾಗಿ ಸಂಘಟಿತರಾ ಗಬೇಕು ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ರಾಜ್ಯ ಘಟಕದ ಅಧ್ಯಕ್ಷ ಶಂಕರ ಬಿದರಿ ಕರೆ ನೀಡಿದರು.


ಪಟ್ಟಣದ ಮುರುಘಾ ಮಠದಲ್ಲಿ ಮಂಗಳವಾರ ಅಖಿಲ ಭಾರತ ವೀರ ಶೈವ ಲಿಂಗಾಯತ ಮಹಾಸಭಾ ಸೊರಬ ತಾಲ್ಲೂಕು ಘಟಕದ ವತಿ ಯಿಂದ ಹಮ್ಮಿಕೊಂಡಿದ್ದ ಅಭಿನಂದನಾ ಕಾರ್ಯಕ್ರಮದಲ್ಲಿ ಮಾತನಾ ಡಿದರು.

ಬೆಳೆಯುವವರನ್ನು ಕಾಲು ಎಳೆಯುವ ಕೆಲಸ ಮಾಡಬಾರದು. ವೀರಶೈವ ಲಿಂಗಾಯತರ ಎಲ್ಲಾ ಪಂಗಡಗಳು ಒಂದಾಗಬೇಕು. ಎಲ್ಲಾ ಸಮಗ್ರ ಮಾಹಿತಿಯನ್ನು ರಾಜ್ಯ ಮಹಾಸಭಾ ಕ್ರೋಢೀಕರಣ ಮಾಡಿಕೊಂಡು ಸಮಾಜದ ಒಗ್ಗಟ್ಟಿನ ಅಸ್ತ್ರವನ್ನು ಪ್ರಯೋಗಿಸಿ ನಮ್ಮ ಹಕ್ಕು ಬೇಡಿಕೆ ಮಂಡಿಸಿ ಮೀಸಲಾತಿ, ಹಕ್ಕು ಸೌಲಭ್ಯಗಳನ್ನು ನೀಡಲು ಸರ್ಕಾರ ಮನೆ ಬಾಗಿಲಿಗೆ ಬರುವಂತೆ ಮಾಡಲು ಸಾಧ್ಯವಿದ್ದು, ಅದು ಒಗ್ಗಟ್ಟಿನಿಂದ ಮಾತ್ರ ಸಾಧ್ಯ ಎಂದರು.

ತಾಲೂಕು ಸಂಘಟನೆಯ ಮೂಲಕ ಸಮಾಜದ ಪ್ರತಿ ಕುಟುಂಬದ ಜನ ಗಣತಿ, ಆರ್ಥಿಕ, ಶೈಕ್ಷಣಿಕ ಸಮಾಜಿಕ ಮಾಹಿತಿಯನ್ನು ಗಣಕೀಕೃತ ಮಾಡಲು ಉದ್ದೇಶಿಸಿದ್ದು, ಶೀಘ್ರದಲ್ಲೇ ರಾಜ್ಯದ ಎಲ್ಲಾ ತಾಲೂಕು ಘಟಕ ಗಳಿಗೆ ಕಂಪ್ಯೂಟರ್ ನೀಡಿ ಮಾಹಿತಿಯನ್ನು ಕಲೆ ಹಾಕಲಾಗುವುದು. ಕುಟುಂಬದ ಮುಖ್ಯಸ್ಥರು ಮಕ್ಕಳ ಹಾಗು ಸಮಾಜದ ಭವಿಷ್ಯದ ಹಿತದೃಷ್ಟಿ ಯಿಂದ ಮಾಹಿತಿ ಒದಗಿಸಬೇಕು ಎಂದರು.ತಾಲೂಕು ವೀರಶೈವ ಸಮಾಜದ ಅಧ್ಯಕ್ಷ ಗುರುಕುಮಾರ್ ಎಸ್.ಪಾಟೀಲ್ ಪ್ರಾಸ್ತಾವಿಕವಾಗಿ ಮಾತನಾಡಿ, ಈಗಾಗಲೇ 3000 ಸದಸ್ಯತ್ವ ಮಾಡಲಾ ಗಿದ್ದು, ಮುಂದಿನ ದಿನಗಳಲ್ಲಿ 10 ಸಾವಿರಕ್ಕೂ ಹೆಚ್ಚಿನ ಸದಸ್ಯತ್ವನ್ನು ಮಾಡುವ ಗುರಿ ಹೊಂದಲಾಗಿದೆ. ಈ ನಿಟ್ಟಿನಲ್ಲಿ ಜಿಲ್ಲಾ, ರಾಜ್ಯ ಘಟಕ ದೊಂದಿಗೆ ಸತತ ಸಂಪರ್ಕವನ್ನಿಟ್ಟುಕೊಂಡು ಆ ನಿಟ್ಟಿನಲ್ಲಿ ಎಲ್ಲರ ಸಹಕಾರ ಪಡೆದು ಮುನ್ನಡೆಯಲಾಗುವುದು ಎಂದರು. ರಾಜ್ಯ ಕಾರ್ಯದರ್ಶಿ, ಜಿಲ್ಲಾ ಉಸ್ತುವಾರಿ ಶಶಿಕಲಾ ಮಾತನಾಡಿ, ನಾವು ನಮ್ಮಲ್ಲಿರುವ ಸ್ವಾರ್ಥವನ್ನು ಬಿಟ್ಟು ಸಮಾಜದ ಅಭಿವೃದ್ಧಿಗೆ ಮುಂದಾ ಗ ಬೇಕು ಎಂದು ಹೇಳಿದರು.ಜಿಲ್ಲಾಧ್ಯಕ್ಷ ಶಿವರಾಜ ಸಜ್ಜನ್, ಕಾರ್ಯದರ್ಶಿ ಸಂತೋಷ ಬಳ್ಳೇಕೆರೆ, ಪ್ರಮುಖರಾದ ಕೆ.ವಿ.ಗೌಡ, ಸಿ.ಪಿ. ಈರೇಶಗೌಡ, ದಯಾನಂದಗೌಡ, ಡಾ.ಪ್ರಭು ಕೆ ಸಾಹುಕಾರ್, ಸಚಿನ್, ಪ್ರಕಾಶ್ ಅಗಸನಹಳ್ಳಿ, ಮಲ್ಲಿಕಾ ರ್ಜುನ ವೃತ್ತಿಕೊಪ್ಪ, ಹೆಚ್.ಕೆ ಜಯಶೀಲಗೌಡ, ಮಲ್ಲಿಕಾರ್ಜುನ ವೃತ್ತಿಕೊಪ್ಪ, ಡಿ. ಶಿವಯೋಗಿ, ಜಯಮಾಲ ಅಣ್ಣಾಜಿಗೌಡ, ಡಿ ಶಿವ ಯೋಗಿ ಮತ್ತಿತರರು ಇದ್ದರು.

## ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ಅಧ್ಯಕ್ಷರಿಗೆ ಅಧಿಕೃತ ಅಹ್ವಾನ

**ತರೀಕೆರೆ:** ಮಾ.7, 8ರಂದು ಪಟ್ಟಣದ ಬಯಲು ರಂಗಮಂದಿರದಲ್ಲಿ ನಡೆಯುತ್ತಿರುವ 20ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಸಮ್ಮೇಳನ ಅಧ್ಯಕ್ಷರಿಗೆ ಜಿಲ್ಲಾ ಕಸಾಪ ಕಾರ್ಯಕಾರಿ ಮಂಡಳಿಯಿಂದ ಸಮ್ಮೇಳನ ಅಧ್ಯಕ್ಷ ಎಚ್.ಎಮ್.ಮರಳುಸಿದ್ದಯ್ಯ ಪಟೇಲ ಅವರಿಗೆ ಜಿಲ್ಲಾಧ್ಯಕ್ಷ ಸೂರಿ ಶ್ರೀನಿವಾಸ್ ನೇತೃತ್ವದ ತಂಡ ಅವರ ಸ್ವಗ್ರಾಮ ತಾಲ್ಲೂಕಿನ ರಂಗೇನಹಳ್ಳಿಯ ನಿವಾಸದಲ್ಲಿ ಅಹ್ವಾನ ನೀಡಿದರು. ಈ ನೆಲದ ಅಪ್ಪಟ ಗ್ರಾಮೀಣ ಪ್ರತಿಭೆಯಾದ ಪಟೇಲ್ ಸಾಕಷ್ಟು ಸಂಶೋಧನಾ ಗ್ರಂಥಗಳನ್ನು ರಚಿಸಿ, ಹಲವು ದೇಶಗಳನ್ನು ಸುತ್ತಿ ಪ್ರಶಸ್ತಿ ಪಡೆದಿರುವುದು ಈ ಗ್ರಾಮದ ಹೆಮ್ಮೆಯ ಸಂಗತಿ. ಇವರು ಈ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ. ಜಿಲ್ಲೆಯ ಇತಿಹಾಸದಲ್ಲಿ ಎಲ್ಲಾ ಭಾಗದ ಜನರು ಸೇರಿ ಸಮ್ಮೇಳನ ಅಧ್ಯಕ್ಷರಿಗೆ ಅಹ್ವಾನದಿಂದ ಸಮ್ಮೇಳನ ಯಶಸ್ವಿಯಾದಂತೆಯೇ ಸರಿ ಎಂದು ಜಿಲ್ಲಾಧ್ಯಕ್ಷ ಸೂರಿ ಶ್ರೀನಿವಾಸ್ ಹೇಳಿದರು. ಸಮ್ಮೇಳನದ ಸ್ವಾಗತ ಸಮಿತಿಯ ಗೌರವಾಧ್ಯಕ್ಷ, ಉಪವಿಭಾಗಾಧಿಕಾರಿ ಕೆ.ಜೆ.ಕಾಂತರಾಜ್ ಸಮಾರಂಭವನ್ನು ಕುರಿತು ಮಾತನಾಡಿ, ಜಿಲ್ಲಾ ಸಾಹಿತ್ಯ ಸಮ್ಮೇಳನ ನಮ್ಮ ಭಾಗದಲ್ಲಿ ನಡೆಯುತ್ತಿದ್ದು, ಇದೇ ಗ್ರಾಮದವರಾದ



ಮರಳುಸಿದ್ದಯ್ಯ ಪಟೇಲರು ಸಂಶೋಧಕರು ಸಮ್ಮೇಳನಾಧ್ಯಕ್ಷರಾಗಿರುವುದು ನಮಗೆಲ್ಲ ಹೆಮ್ಮೆಯ ಸಂಗತಿ ಎಂದರು.ಸಮಾರಂಭದಲ್ಲಿ ಜಿಪಂ ಮಾಜಿ ಅಧ್ಯಕ್ಷ ಹೆಚ್.ವಿಶ್ವನಾಥ್ ಮಾತನಾಡಿದರು.ತಾಲೂಕು ಅಧ್ಯಕ್ಷ ರವಿ ದಳವಾಯಿ, ಇಮ್ರಾನ್ ಅಹಮದ್ ಬೇಗ್, ಜಿಲ್ಲಾ ಕಾರ್ಯದರ್ಶಿ ಪವನ್ ಕುಮಾರ್, ತ.ಮ.ದೇವಾನಂದ, ಕೆ.ಜಯಸ್ವಾಮಿ, ಅರ್ಚನಾ, ರಶ್ಮಿ, ಸುನಿತಾ ಕಿರಣ್, ಉಮಾ ಪ್ರಕಾಶ್, ವಿಶಾಲಾಕ್ಷಮ್ಮ, ಗಾಯಿತ್ರಮ್ಮ, ಕೆ.ಎಸ್.ಶಿವಣ್ಣ, ಮಾವಿನಕಾಯಿ ದಯಾನಂದ್, ಸೋಮಶೇಖರ್ ಇನ್ನಿತರರಿದ್ದರು.

## ಕಪಿಲೇಶ್ವರ ದೇಗುಲದಲ್ಲಿ ಡಿಕೆಶಿ ವಿಶೇಷ ಪೂಜೆ: ಬೆಳಗಾವಿಯಲ್ಲೇ ಇದ್ದರೂ ನಾಯಕನ ಭೇಟಿಯಾಗದ ಜಾರಕಿಹೊಳಿ

**ಬೆಳಗಾವಿ:** ಕೆಪಿಸಿಸಿ ಅಧ್ಯಕ್ಷ ಹಾಗೂ ಉಪ ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಅವರು ಬೆಳಗಾಳಿಯಲ್ಲೇ ವಾಸ್ತವ್ಯ ಹೂಡಿದ್ದರೂ ಸಚಿವ ಸತೀಶ್ ಜಾರಕಿಹೊಳಿಯವರು ಭೇಟಿ ಮಾಡದಿರುವುದು ಹಲವರ ಹುಬ್ಬೇರುವಂತೆ ಮಾಡಿದೆ.ಕಾಮಗಾರಿಗಳ ಉದ್ಘಾಟನೆ ನೆಪ ಹೇಳಿಕೊಂಡು ಸತೀಶ್ ಅವರು ಡಿಕೆ.ಶಿವಕುಮಾರ್ ಅವರ ಭೇಟಿಯನ್ನು ನಿಯಂತ್ರಿಸುತ್ತಿದ್ದು, ಈ ಮೂಲಕ ಮುನಿಸು ಹೊರಹಾಕುತ್ತಿದ್ದಾರೆಂಬ ಮಾತುಗಳು ಕೇಳಿ ಬರುತ್ತಿವೆ.ಈ ನಡುವೆ ಸತೀಶ್ ಜಾರಕಿಹೊಳಿ ಆಪ್ತ ವಲಯದಲ್ಲಿ ಕಾಣಿಸಿಕೊಂಡ ಶಾಸಕರು ದುಬೈ ಪ್ರವಾಸಕ್ಕೆ ಯೋಜನೆ ರೂಪಿಸಿದ್ದು, 4–5 ದಿನಗಳ ಕಾಲ ವಿದೇಶಕ್ಕೆ ಹಾರಲು ಸಜ್ಜಾಗಿದ್ದಾರೆ.ಈ ಬಗ್ಗೆ ಮಾಹಿತಿ ತಿಳಿದ ಡಿಕೆ ಶಿವಕುಮಾರ್ ಅವರು, ಭಾನುವಾರ ಸತೀಶ್ ಆಪ್ತ ಆಸೀಫ್ ಸೇಠ್ ನಿವಾಸಕ್ಕೆ ಭೇಟಿ ಕೊಟ್ಟಿದ್ದು, ಯಾರೆಲ್ಲಾ ಪ್ರವಾಸಕ್ಕೆ ಹೋಗುತ್ತಿದ್ದಾರೆಂಬುದರ ಕುರಿತು ಪ್ರಶ್ನೆ ಮಾಡಿದ್ದಾರೆಂದು ವರದಿಗಳು ತಿಳಿಸಿವೆ. ಇದಕ್ಕೆ ಪ್ರತಿಕ್ರಿಯಿಸಿರುವ ಸೇಠ್, ಯೋಜನೆ ರೂಪಿಸಲಾಗಿದೆ. ನಿಮಗೆ ಹೇಳದೇ ಹೋಗಲ್ಲ ಎಂದು ಉತ್ತರಿಸಿದ್ದಾರೆ. ಬಳಿಕ ಡಿಕೆ ಶಿವಕುಮಾರ್ ಅವರು, ಪಕ್ಷದಲ್ಲಿದ್ದಾಗ ಶಿಸ್ತಿನಿಂದ ಇರುವಂತೆ ಪಾಠ ಮಾಡಿದ್ದಾರೆಂದು ಮೂಲಗಳು ತಿಳಿಸಿವೆ. ಇನ್ನು ಬೆಳಗಾವಿಗೆ ಭೇಟಿ ನೀಡಿರುವ ಡಿಕೆ.ಶಿವಕುಮಾರ್, ಭಾನುವಾರ ತಾವು ವಾಸ್ತವ್ಯ ಹೂಡಿದ್ದ ಸರ್ಕಾರಿ ಪ್ರವಾಸಿ ಮಂದಿರದಿಂದ ನೇರವಾಗಿ ಶಹಾಪುರದ ಕಪಿಲೇಶ್ವರ ದೇವಸ್ಥಾನಕ್ಕೆ ತೆರಳಿ, ವಿವಿಧ ಧಾರ್ಮಿಕ ವಿಧಿವಿಧಾನ ಕೈಗೊಂಡರು. 101 ಲೀಟರ್ ಹಾಲು ಬಳಸಿ, ಶಿವಲಿಂಗಕ್ಕೆ ಅಭಿಷೇಕ ಮಾಡಿದರು.ಬಳಿಕ ಮಾತನಾಡಿದ ಅವರು, ನಾನೊಬ್ಬ ದೈವ ಭಕ್ತ. ಪೂಜೆ ಮಾಡಿ, ದೈವಶಕ್ತಿ ನೆನಪಿಸಿಕೊಂಡೇ ಮನೆಯಿಂದ ಹೊರ ಬರುತ್ತೇನೆ. ಹಾಗಾಗಿ ದೇವಸ್ಥಾನಕ್ಕೆ ಬಂದಿದ್ದೇನೆ. ನಿಮ್ಮಿಂದ ರಕ್ಷಣೆ ಬೇಕಪ್ಪ' ಎಂದು ಹೇಳುವ ಮೂಲಕ, ಪರೋಕ್ಷವಾಗಿ ಬೆಳಗಾವಿ ನಾಯಕರಿಂದ ರಕ್ಷಣೆ ಬೇಕು ಎಂದು ಹೇಳಿದರು.ಮಹಾ ಕುಂಭಮೇಳ ಕುರಿತು ಮಾತನಾಡಿ, ನಾನು ಕೂಡ ಈ ಬಾರಿ ಕುಂಭಮೇಳಕ್ಕೆ ಹೋಗುತ್ತಿದ್ದೇನೆ. ಉತ್ತರಪ್ರದೇಶ ಸರ್ಕಾರದ ಹಿರಿಯ ಸಚಿವರು ನನಗೆ ಆಹ್ವಾನಿಸಿದ್ದಾರೆ. ಯಾವುದೇ ಧರ್ಮದವರು ಆಗಲಿ, ಎಲ್ಲರಿಗೂ ಒಂದೊಂದು ನಂಬಿಕೆ ಇರುತ್ತದೆ. ನಾನು ನನ್ನ ಕುಟುಂಬದೊಂದಿಗೆ ಕುಂಭಮೇಳಕ್ಕೆ ಭೇಟಿ ನೀಡಲಿದ್ದೇನೆ. ಆದರೆ, ಭೇಟಿಯ ನಿಖರವಾದ ದಿನಾಂಕವನ್ನು ಇನ್ನೂ ಅಂತಿಮಗೊಳಿಸಲಾಗಿಲ್ಲ ಎಂದು ಹೇಳಿದರು.

## ಪಕ್ಷ ಮತ್ತೊಮ್ಮೆ ಅವಕಾಶ ನೀಡಲಿದೆ: ಬಿವೈ ವಿಜಯೇಂದ್ರ ವಿಶ್ವಾಸ

**ರಾಯಚೂರು:** ಬಿಜೆಪಿ ಆಂತರಿಕ ಪ್ರಜಾಪ್ರಭುತ್ವ ಹೊಂದಿರುವ ರಾಜಕೀಯ ಪಕ್ಷವಾಗಿದ್ದು, ಕಳೆದೊಂದು ವರ್ಷದಲ್ಲಿ ಪಕ್ಷದ ಹಿರಿಯ ನಾಯಕರು ನೀಡಿದ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿಭಾಯಿಸಿದ್ದೇನೆ. ಪಕ್ಷ ಮುನ್ನಡೆಸಲು ಮತ್ತೊಮ್ಮೆ ಅವಕಾಶ ನೀಡುವ ವಿಶ್ವಾಸವಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಭಾನುವಾರ ಹೇಳಿದರು.ರಾಯಚೂರು ಜಿಲ್ಲೆಯ ಮಾನ್ವಿ ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನ ಬದಲಾವಣೆ ಕುರಿತು ಶಾಸಕ ಬಸನಗೌಡ ಯತ್ನಾಳ ಹೇಳಿಕೆಗೆ ಪ್ರತಿಕ್ರಿಯಿಸಿದರು.ಬಿಜೆಪಿ ಹೈಕಮಾಂಡ್ ಮತ್ತೊಮ್ಮೆ ನನಗೆ ಅವಕಾಶ ಕೊಡುವ ಸಂಪೂರ್ಣ ವಿಶ್ವಾಸವಿದೆ. ಪಕ್ಷವನ್ನು ಮುನ್ನಡೆಸಲು ಮತ್ತು ಎಲ್ಲರೊಂದಿಗೂ ಕೆಲಸ ಮಾಡಲು ಮತ್ತೊಮ್ಮೆ ಅವಕಾಶ ಸಿಗುತ್ತದೆ ಎಂಬ ವಿಶ್ವಾಸವಿದೆ ಎಂದು ಹೇಳಿದರು.ಬಳಿಕ ಮಾನ್ವಿ ಪಟ್ಟಣದಲ್ಲಿ ಮಾಜಿ ಸಚಿವ ಕೆ.ಶಿವನಗೌಡ ನಾಯಕ್ ನೇತೃತ್ವದಲ್ಲಿ ಕೆಎಸ್ ಎನ್ ಸಮಾಜ ಸೇವಾ ಸಮಿತಿ ವತಿಯಿಂದ ಆಯೋಜಿಸಿದ್ದ ಸಾಮೂಹಿಕ ವಿವಾಹ ಕಾರ್ಯಕ್ರಮವನ್ನು ವಿಜಯೇಂದ್ರ ಅವರು ಉದ್ಘಾಟಿಸಿದರು.ಈ ಸಂದರ್ಭದಲ್ಲಿ ಮಾತನಾಡಿದ ಅವರು, ಕೇಂದ್ರ ಪಕ್ಷದ ನಾಯಕರೊಂದಿಗೆ ಚರ್ಚಿಸಿ ರಾಯಚೂರು ಜಿಲ್ಲೆಯಲ್ಲಿ ಏಮ್ಸ್ ಅನುಮೋದನೆ ಪಡೆಯಲು ಪ್ರಯತ್ನಿಸುತ್ತೇನೆಂದು ಭರವಸೆ ನೀಡಿದರು.



# ಶಿಲೆಗೆ ಮಾರು ಹೋಗುವಾಕೆ; ಯಾರೀಕೆ?

ಪೆಂಗ್ವಿನ್ ಎಂಬ ಪದ ಕಿವಿಗೆ ಬಿದ್ದಾಕ್ಷಣ ಮಕ್ಕಳಿಂದ ಹಿಡಿದು ವಯೋ ವೃದ್ಧರವರೆಗೂ ಎಲ್ಲರ ಮುಖದಲ್ಲಿ ಮಂದಹಾಸ ಮೂಡುತ್ತದೆ. ಹಕ್ಕಿಯಾದರೂ ಹಾರಲು ಬರುವುದಿಲ್ಲ, ಗಂಡುಹಕ್ಕಿಯುಹೆಣ್ಣುಹಕ್ಕಿ ಇಟ್ಟ ಮೊಟ್ಟೆಗೆ ಕಾವು ಕೊಟ್ಟು ಮರಿಮಾಡುತ್ತದೆ, ಜೀವನಪೂರ್ತಿ ಒಂದೇ ಸಂಗಾತಿಯೊಂದಿಗೆ ಇರುತ್ತದೆ ಎಂಬುದು ಅಚ್ಚರಿ ಹುಟ್ಟಿಸಿದರೆ, ಈಗಾಗಲೇ ಈ ಹಕ್ಕಿಗಳ 40 ಪ್ರಭೇದಗಳು ಶಾಶ್ವತವಾಗಿ ಅಳಿದು ಬರೀ 17 ಉಳಿದುಕೊಂಡಿವೆ ಎನ್ನುವ ವಿಚಾರ ಕಣ್ಣನ್ನು ತೇವಗೊಳಿಸುತ್ತದೆ.

ಬಿಳಿ, ಕಪ್ಪು ಬಣ್ಣದ ಆಕರ್ಷಕ ದೇಹದೊಂದಿಗೆ ಹಿಮಹಾಸುಗಳ ಮೇಲೆ ಪುಟಪುಟನೆ ಹೆಜ್ಜೆ ಇಡುತ್ತ, ಮೈನಸ್ 50 ಡಿಗ್ರಿ ಸೆಂಟಿಗ್ರೇಡ್ ಉಷ್ಣಾಂಶದ ವಾತಾವರಣದಲ್ಲಿ ಜೀವಿಸುವ ಪೆಂಗ್ವಿನ್ಗಳು ವಾಯುಗುಣ ಬದಲಾವಣೆಯ ವೈಪರೀತ್ಯಗಳಿಗೆ ತುತ್ತಾಗಿ ಅಳಿವಿನಂಚಿಗೆ ಸರಿಯುತ್ತಿವೆ.

ಥೇಟ್ ಮನುಷ್ಯರಂತೆಯೇ ಪ್ರೀತಿಯ ಸಂಗಾತಿಯನ್ನು ಆರಿಸಿಕೊಂಡು, ಸಮಾನ ಜವಾಬ್ದಾರಿಯಿಂದ ಕುಟುಂ ಬವನ್ನು ಬೆಳೆಸುವ ಪೆಂಗ್ವಿನ್ಗಳು ಜೀವಿಲೋಕದ ಅಚ್ಚರಿಯೇ ಸರಿ. ದಕ್ಷಿಣ ಅಮೆರಿಕದ ತುದಿ, ದಕ್ಷಿಣ ಧ್ರುವ ಪ್ರದೇಶದ ದ್ವೀಪಗಳು, ಚಿಲಿ, ಪೆರು ಮತ್ತು ಅಂಟಾರ್ಕ್ಟಿಕಾದ ಭಾಗಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಆವಾಸಹೊಂದಿರುವ ಪೆಂಗ್ವಿನ್ಗಳು ಆಹಾರ ಹುಡುಕಿಕೊಂಡು ದಿನಕ್ಕೆ 60 ಕಿಲೊಮೀಟರ್ ದೂರದವರೆಗೂ ಈಜಬಲ್ಲವು.

ಹೆಣ್ಣು ಸಂಗಾತಿಯನ್ನು ಒಲಿಸಿಕೊಳ್ಳಲು ಗಂಡು ಪೆಂಗ್ವಿನ್ ಪಡುವ ಶ್ರಮ ನಾಗರಿಕ ಸಮಾಜದಯಾವ ಪ್ರೇಮ ನಿವೇದನೆಗೂ ಕಡಿಮೆ ಇಲ್ಲ. ಸಮುದ್ರ ತೀರದ ಬಂಡೆಕಲ್ಲುಗಳ ಕೊರಕಲುಗಳಲ್ಲಿ ಇಳಿದು, ಸಂದಿಗೊಂದಿಗಳಲ್ಲಿ ತಡಕಾಡಿ, ಸಮುದ್ರದಲೆಗಳಹೊಡೆತಕ್ಕೆ ಸಿಲುಕಿ, ಸುಂದರವಾಗಿ ಹಾಗೂ ನುಣುಪಾಗಿ ರೂಪುಗೊಂಡಿರುವ ವರ್ಣ ಮಯ ಶಿಲೆಯೊಂದನ್ನು ನಾಜೂಕಾಗಿ ಆರಿಸಿಕೊಂಡು ತಂದು, ತಾನೇ ನಿರ್ಮಿಸಿದ ಗೂಡಿನೊಳಕ್ಕೆ ಇಡುತ್ತದೆ. ಇದನ್ನೇ ಗಮನಿಸುತ್ತಿರುವ ಹೆಣ್ಣುಹಕ್ಕಿಯೊಂದು ಗೂಡಿನ ಬಳಿ ಸಾರಿ, ಶಿಲೆಯ ಅಂ ದವನ್ನು ಪರೀ ಕ್ಷಿಸಿ, ತನಗೆ ಹಿಡಿಸಿದರೆ ಗಂಡುಹಕ್ಕಿಯ ಪ್ರೀತಿಗೆ ಹಸಿರು ನಿಶಾನೆ ತೋರಿಸುತ್ತದೆ. ಸಂಗಾತಿಯೊಂದಿಗೆ ಜೀವನಪೂರ್ತಿ ಕಳೆಯುವ ಗಂಡುಹಕ್ಕಿಯುಏಕಪತ್ನೀ ವ್ರತಸ್ಥನಂತೆ ಬದುಕುತ್ತದೆ. ಹೆಣ್ಣು ಪೆಂಗ್ವಿನ್ ಒಂದಕ್ಕಿಂತ ಹೆಚ್ಚು ಸಂಗಾತಿಗಳನ್ನು ಹೊಂದಿರುವ ಸಾಧ್ಯತೆಗಳಿವೆ ಎನ್ನುತ್ತಾರೆ ತಜ್ಞರು.


ಪೆಂಗ್ವಿನ್ಗಳಲ್ಲಿ ಎಂಪರರ್, ಹಂಬೋಲ್ಟ್, ರಾಕ್ ಹಾಪರ್,ಮಾಕರೋನಿ, ಚಿನ್ಸ್ಟ್ರಾಪ್, ಅಡೆಲಿ, ಗೆಂಟೂ, ಕ್ರಸ್ಟೆಡ್ ಎಂಬ ಹಲವು ಬಗೆ ಇವೆ. ಟೆಂಪರರ್ ಪೆಂಗ್ವಿನ್ಗಳು ಅಂಟಾರ್ಕ್ಟಿಕಾದ ಹಿಮದಲ್ಲಿ ವಂಶಾಭಿವೃದ್ಧಿ ಮಾಡುತ್ತವೆ. ಹಂಬೋಲ್ಟ್ ಪೆಂಗ್ವಿನ್ಗಳು ಇತರ ಪೆಂಗ್ವಿನ್ ಮತ್ತು ಸೀಗಲ್ಗಳು ವಿಸರ್ಜಿಸಿದ ಸಗಣಿಯ ರಾಶಿಯ ಕೆಳಗೆ ಬಿಲ ಕೊರೆದು ಅಲ್ಲಿ ಮಿಲನ ಕ್ರಿಯೆಯಲ್ಲಿ ತೊಡಗುತ್ತವೆ. ನ್ಯೂಜಿಲೆಂಡ್ನ ಮಳೆಕಾಡುಗಳಲ್ಲಿ ವಾಸಿಸುವ ಪಿರ್ಟ್ ಲ್ಯಾಂಡ್ ಪ್ರಭೇದದ ಪೆಂಗ್ವಿನ್ಗಳು ಶಿಲೆಗಳ ಸಂದಿಗಳಲ್ಲಿ ಕಡ್ಡಿ ಮತ್ತು ಹುಲ್ಲಿನಿಂದ ನಿರ್ಮಿಸಿಕೊಂಡ ಗೂಡುಗಳಲ್ಲಿ ವಂಶಾಭಿವೃದ್ಧಿ ಮಾಡಿಕೊಳ್ಳುತ್ತವೆ. ಮಾಕರೋನಿಪೆಂಗ್ವಿನ್ಗಳು ಸಮತಲವಾದ ಬಂಡೆಯ ಮೇಲೆ ಮೊಟ್ಟೆಗಳನ್ನು ಇರಿಸಿ, ಕಾವಲು ಕಾಯ್ದು ಸಂಸಾರ ಬೆಳೆಸುತ್ತವೆ.

ಮೊಟ್ಟೆ ಇಟ್ಟ ತಕ್ಷಣ ಮರಿಮಾಡುವಹೊಣೆಯನ್ನು ಗಂಡುಹಕ್ಕಿಗೆ ಒಪ್ಪಿಸುವ ಹೆಣ್ಣು ಪೆಂಗ್ವಿನ್, ಎರಡು ತಿಂಗಳು ಆಹಾರ ಹುಡುಕಿಕೊಂ ಡುಹೊರಡುತ್ತದೆ. ಗಂಡು ಪೆಂಗ್ವಿನ್ಗಳು ಮೊಟ್ಟೆಗಳನ್ನು ತಮ್ಮ ಪಾದದ ಮೇಲಿರಿಸಿಕೊಂಡು, ರೆಕ್ಕೆಯ ತುಪ್ಪಳದಿಂದ ಮುಚ್ಚಿಕೊಂಡು, ಸುಮಾರು 9 ವಾರಗಳ ಕಾಲ ಕಾವು ಕೊಡುತ್ತವೆ. ಅಷ್ಟು ದಿನ ಗಂಡುಹಕ್ಕಿಯುನಿಂತ ಜಾಗದಿಂದ ಕದಲುವುದಿಲ್ಲ. ಆಹಾರ ಸೇವಿಸುವುದಿಲ್ಲ. ಮರಿಗಳಾದ ತಕ್ಷಣ ತನ್ನ ಗಂಟಲಿನ ಪೋಷಕಾಂಶಯುಕ್ತ ದ್ರವವನ್ನು ಮರಿಗಳಿಗೆ ತಿನ್ನಿಸಿ ಶಕ್ತಿ ತುಂಬುತ್ತದೆ. ಬೇಕಾಗುವಷ್ಟು ಆಹಾರ ಸಂಪಾದಿಸಿಕೊಂಡು ಗೂಡಿಗೆ ಮರಳುವ ಹೆಣ್ಣುಹಕ್ಕಿಯುಗಂಡುಹಕ್ಕಿಯನ್ನು ಸೇವೆಯಿಂದ ಬಿಡುಗಡೆಮಾಡಿ ಮುಂದಿನ ಪೋಷಣೆಯ ಜವಾಬ್ದಾರಿಹೊರುತ್ತದೆ. ಗಂಡು ಆಹಾರ ಹುಡುಕಿಕೊಂಡು ಹೊರಡುತ್ತದೆ.

ಪೆಂಗ್ವಿನ್ಗಳು ವಂಶಾಭಿವೃದ್ಧಿ ಮಾಡಿಕೊಳ್ಳಲು ಬಳಸುವ ಇತರ ಹಕ್ಕಿಗಳ ಸಗಣಿಯುಉತ್ತಮ ಗೊಬ್ಬರವಾಗಿರುವುದರಿಂದ ಮನುಷ್ಯ ಅದನ್ನು ದೋಚುತ್ತಿದ್ದಾನೆ. ಗೂಡು ಕಟ್ಟಲು ಬೇಕಾದ ಪದಾರ್ಥ ವು ಮನುಷ್ಯರ ಪಾಲಾಗುವುದರಿಂದ ಪೆಂಗ್ವಿನ್ಗಳಿಗೆ ಗೂಡು ಕಟ್ಟಲು ಸರಿಯಾದ ಜಾಗ ಸಿಗದೆ ಅವುಗಳ ಸಂಖ್ಯೆ ವೃದ್ಧಿಯಾಗುತ್ತಿಲ್ಲ. ಬರೀ ಎರಡು ಲಕ್ಷದಷ್ಟಿರುವ ಕ್ರಸ್ಟೆಡ್ ಪೆಂಗ್ವಿನ್ಗಳು ಐಯುಸಿಎನ್ (ದಿ ಇಂಟರ್ನ್ಯಾಷನಲ್ಯೂನಿಯನ್ ಫಾರ್ ಕನ್ಸರ್ವೇಶನ್ ಆಫ್ ನೇಚರ್) ಕೆಂಪು ಪಟ್ಟಿ ಸೇರಿವೆ. ಹಳದಿ ಕಣ್ಣಿನ ಪೆಂಗ್ವಿನ್ಗಳು ಬರೀ ನ್ಯೂಜಿಲೆಂಡ್ ಪ್ರದೇಶಕ್ಕೆ ಸೀಮಿತವಾಗಿದ್ದು, ಅಳಿವಿನಂಚಿಗೆ ಸರಿದಿವೆ.

ವಿಶ್ವದಲ್ಲಿ ಈಗಮೂರು ಕೋಟಿ ಪೆಂಗ್ವಿನ್ಗಳು ಇವೆ. ನೋಡಲು ಗಂಡು ಮತ್ತು ಹೆಣ್ಣು ಪೆಂಗ್ವಿನ್ಗಳಲ್ಲಿ ವ್ಯತ್ಯಾಸ ಗೋಚರಿಸುವುದಿಲ್ಲ. ಪೆಂಗ್ವಿನ್ಗಳು 20ರಿಂದ 40 ವರ್ಷಗಳವರೆಗೂ ಬದುಕಬಲ್ಲವು. ಸಣ್ಣ ಮೀನುಗಳೇ ಪೆಂಗ್ವಿನ್ಗಳ ಮುಖ್ಯ ಆಹಾರ.

ಅತಿಯಾದ ಮೀನು ಶಿಕಾರಿ, ಬೃಹತ್ ಹಡಗುಗಳಲ್ಲಿ ತೈಲ ಸೋರಿಕೆ, ಸಾಗರ ಸೇರುತ್ತಿರುವ ಪ್ಲಾಸ್ಟಿಕ್ ತ್ಯಾಜ್ಯ, ನದಿಗಳುಹೊತ್ತು ತರುವಮಾಲಿನ್ಯವು ಪೆಂಗ್ವಿನ್ಗಳ ಸದೃಢ ನೆಲೆಯನ್ನು ಛಿದ್ರಗೊಳಿಸುತ್ತಿವೆ. ವಾತಾವರಣದ ಉಷ್ಣಾಂಶದಲ್ಲಿ ಎರಡು ಡಿಗ್ರಿ ಸೆಂಟಿಗ್ರೇಡ್ ಏರಿಕೆಯಾದರೂ ಪೆಂಗ್ವಿನ್ಗಳು ದೊಡ್ಡ ಸಮಸ್ಯೆ ಎದುರಿಸುತ್ತವೆ. ಮಾಲಿನ್ಯ ಕಡಿತಗೊಳಿಸಿ ಪೆಂಗ್ವಿನ್ಗಳನ್ನು ಉಳಿಸಿಕೊಳ್ಳಬೇಕಾದ ಅಗತ್ಯವನ್ನು ಪೆಂಗ್ವಿನ್ ಜಾಗೃತಿ ದಿನದ (ಜ. 20) ಈ ಸಂದರ್ಭದಲ್ಲಾದರೂ ನಾವು ಅರಿಯಬೇಕಿದೆ.





# ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಯೇ ನನ್ನ ದ್ಯೇಯ : ಹೆಚ್.ಡಿ ತಮ್ಮಯ್ಯ



**ಚಿಕ್ಕಮಗಳೂರು:** ರಾಜ್ಯದಲ್ಲಿ ಅಭಿವೃದ್ಧಿಯ ಪರ್ವ ಪ್ರಾರಂಭವಾಗಿದೆ. ಕ್ಷೇತ್ರದಲ್ಲಿ ವಿವಿಧ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡು ಸಾರ್ವಜನಿಕರ ಅಗತ್ಯತೆಗಳನ್ನು ಪೂರೈಸುವುದೇ ನನ್ನ ಗುರಿ ಎಂದು ಶಾಸಕ ಹೆಚ್.ಡಿ ತಮ್ಮಯ್ಯ ಹೇಳಿದರು.

ತಾಲ್ಲೂಕಿನ ಹುಲಿಕೆರೆ, ಪಿಳ್ಳೇನಹಳ್ಳಿ, ಮತ್ತು ಎಸ್ ಬಿದರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ರಸ್ತೆ, ದೇವಸ್ಥಾನ, ಸಮುದಾಯ ಭವನ ಸೇರಿದಂತೆ ವಿವಿಧ ಕಾಮಗಾರಿಗಳಿಗೆ ಗುದ್ದಲಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಪಿಳ್ಳೇನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ 1 ಕೋಟಿ 23 ಲಕ್ಷ, ಎಸ್ ಬಿದರೆ ಗ್ರಾಮ ಪಂಚಾಯಿತಿಗೆ 73 ಲಕ್ಷ ಹಾಗೂ ಹುಲಿಕೆರೆ ಗ್ರಾಮ ಪಂಚಾಯಿತಿಗೆ 1 ಕೋಟಿ 80 ಲಕ್ಷ ಅನುದಾನವನ್ನು ನೀಡಿ ರಸ್ತೆ, ದೇವಾಲಯ, ಸಮುದಾಯ ಭವನ ಹಾಗೂ ಇನ್ನಿತರ ಅಭಿವೃದ್ಧಿ ಕಾರ್ಯಗಳಿಗೆ ಯೋಜನೆ ರೂಪಿಸಿ ಕಾಮಗಾರಿಗಳಿಗೆ ಚಾಲನೆ ನೀಡಿದ್ದು ಅಧಿಕಾರಿಗಳಿಗೆ ಗುಣ ಮಟ್ಟದ ಕಾಮಗಾರಿ ನಿರ್ವಹಿಸಲು ಸೂಚಿಸಲಾಗಿದೆ ಎಂದರು.

ಸರ್ಕಾರ ಅಭಿವೃದ್ಧಿ ಕಾರ್ಯಗಳಿಗೆ ಹಂತ–ಹಂತವಾಗಿ ಅನುದಾನ ಬಿಡುಗಡೆ ಮಾಡುತ್ತಿದೆ. ಈ ಅನುದಾನದಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಕ್ಷೇತ್ರದ ಅಭಿವೃದ್ಧಿ ಕಾರ್ಯಗಳಲ್ಲಿ ಮುನ್ನಡೆ ಸಾಧಿಸುತ್ತೇವೆ. ಸಖರಾಯಪಟ್ಟಣದ ಬರಗಾಲ ಪೀಡಿತ ಪ್ರದೇಶಗಳಲ್ಲಿ ಚೆಕ್ ಡ್ಯಾಮ್ಗಳನ್ನು ನಿರ್ಮಿಸಿ ನೀರನ್ನು ಇಂಗಿಸಿ ಕೊಳವೆ ಬಾವಿಗಳು ಮರು ಪೂರಣ ಹೊಂದಲು ಸಹಕಾರಿಯಾಗುವ ಉದ್ದೇಶದಿಂದ ಸಣ್ಣ ನೀರಾವರಿ ಇಲಾಖೆಯಿಂದ ಸುಮಾರು 6 ಕೋಟಿಗೂ ಹೆಚ್ಚು ಅನುದಾನ ಮೀಸಲಿಡಲಾಗಿದೆ. ಅಯ್ಯನಕೆರೆಯಿಂದ ಕೋಡಿ ಬಿದ್ದ ನೀರನ್ನು ಹುಲಿಕೆರೆಯ ಬೆರಟಿಕೆರೆಗೆ ತಲುಪಿಸುವ ಯೋಜನೆಯ ಕಾಮಗಾರಿಯೂ ಸುಮಾರು 9 ಕೋಟಿ ವೆಚ್ಚದಲ್ಲಿ ಈಗಾಗಲೇ ಪ್ರಾರಂಭಗೊಂಡು ಕಾಮಗಾರಿ ಪ್ರಗತಿಯಲ್ಲಿದೆ.

ಮುಖ್ಯಮಂತ್ರಿಗಳು ಜಿಲ್ಲೆಯ ಗ್ರಾಮಾಂತರ ಭಾಗಗಳಿಗೆ 10 ಕೋಟಿ ವಿಶೇಷ ಅನುದಾನವನ್ನು ನೀಡುತ್ತಿದ್ದಾರೆ, ಅದರ ಕ್ರಿಯಾ ಯೋಜನೆಯು ನಿರ್ವಹಿಸಲಾಗುತ್ತಿದೆ. ರಾಜ್ಯದ ಗ್ಯಾರಂಟಿ ಯೋಜನೆಗಳನ್ನು ಮಾದರಿಯಾಗಿರಿಸಿಕೊಂಡು ದೇಶದ ವಿವಿಧ ರಾಜ್ಯಗಳು ಚುನಾವಣೆಯನ್ನು ಎದುರಿಸುವ ಕಾರ್ಯವನ್ನು ಮಾಡುತ್ತಿವೆ, ಇದು ನಮ್ಮ ರಾಜ್ಯದ ಗ್ಯಾರಂಟಿ ಯೋಜನೆಗಳ ಯಶಸ್ಸನ್ನು ಸೂಚಿಸುತ್ತದೆ.

ಕಾರ್ಯಕ್ರಮದಲ್ಲಿ ಹುಲಿಕೆರೆ ಗ್ರಾ.ಪಂ ಅಧ್ಯಕ್ಷೆ ರತ್ನಮ್ಮ, ಪಿಳ್ಳೇನಹಳ್ಳಿ ಗ್ರಾ.ಪಂ ಅಧ್ಯಕ್ಷ ಮಹೇಂದ್ರ ಆಚಾರ್, ಎಸ್.ಬಿದರೆ ಗ್ರಾ.ಪಂ ಅಧ್ಯಕ್ಷ ಸತೀಶ್, ಪಿಳ್ಳೇನಹಳ್ಳಿ ರಮೇಶ್, ಲೋಕೇಶ್, ಸೇರಿದಂತೆ ವಿವಿಧ ಇಲಾಖೆಗಳ ತಾಲ್ಲೂಕು ಮಟ್ಟದ ಅಧಿಕಾರಿಗಳು ಹಾಗೂ ಮೂರು ಗ್ರಾಮ ಪಂಚಾಯಿತಿಗಳ ಉಪಾಧ್ಯಕ್ಷರು, ಸದಸ್ಯರು ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.

# ಮಾ. 1 ರಿಂದ ದ್ವಿತೀಯ ಪಿಯುಸಿ ಪರೀಕ್ಷೆ : ಸಕಲ ಸಿದ್ದತೆಗೆ ಸೂಚನೆ



**ಶಿವಮೊಗ್ಗ :** ಜಿಲ್ಲೆಯಲ್ಲಿ ಮಾರ್ಚ್ 1 ರಿಂದ 20 ರವರೆಗೆ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ ನಡೆಯಲಿದ್ದು ಪರೀಕ್ಷೆಗಳು ಶಾಂತಿಯುತವಾಗಿ ಮತ್ತು ಸುವ್ಯವಸ್ಥಿತವಾಗಿ ನಡೆಯಲು ಅವಶ್ಯಕವಾದ ಎಲ್ಲ ಸಿದ್ದತೆಗಳನ್ನು ಮಾಡಿಕೊಳ್ಳುವಂತೆ ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಚಂದ್ರಪ್ಪ ಎಸ್ ಗುಂಡಪಲ್ಲಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಡಳಿತ ಕಚೇರಿ ಸಭಾಂಗಣದಲ್ಲಿ ಮಂಗಳವಾರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ ಸಿದ್ದತೆ ಕುರಿತು ಏರ್ಪಡಿಸಲಾಗಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಒಟ್ಟು 39 ಪರೀಕ್ಷಾ ಕೇಂದ್ರಗಳಲ್ಲಿ ಒಟ್ಟು 18218 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ.

ಶಿವಮೊಗ್ಗದಲ್ಲಿ 16 ಭದ್ರಾವತಿ 06, ತೀರ್ಥಹಳ್ಳಿ 03, ಸಾಗರ 05, ಹೊಸನಗರ 03, ಶಿಕಾರಿಪುರ 04, ಸೊರಬ 02 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ.

ಪರೀಕ್ಷೆಗಳು ಬೆಳಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆವರೆಗೆ ರವರೆಗೆ ನಡೆಯಲಿದ್ದು, 17193 ರೆಗ್ಯುಲರ್ ವಿದ್ಯಾರ್ಥಿಗಳು, 526 ರಿಪೀಟರ್ ಹಾಗೂ 496 ಖಾಸಗಿ ವಿದ್ಯಾರ್ಥಿಗಳು ಪರೀಕ್ಷೆ ಬರೆಯುವರು.

ಪ್ರಶ್ನೆ ಪತ್ರಿಕೆ ಸಾಗಾಟ ಮಾಡಲು ತ್ರಿಸದಸ್ಯ ಸಮಿತಿ ನೇಮಿಸಲಾಗಿದೆ. ಮುಖ್ಯ ಅಧೀಕ್ಷಕರು, ಉತ್ತರ ಪತ್ರಿಕೆ ಪಾಲಕರ ನೇಮಕವಾಗಿದೆ. ಹಾಗೂ ಪ್ರತಿ ಪರೀಕ್ಷಾ ಕೇಂದ್ರಕ್ಕೆ ಒಬ್ಬರಂತೆ ಸಹ ಮುಖ್ಯ ಅಧೀಕ್ಷಕರು ಮತ್ತು ಜಾಗೃತ ದಳದ ಸದಸ್ಯರನ್ನು ನೇಮಿಸಲಾಗಿದೆ.

ಪರೀಕ್ಷಾ ಕೇಂದ್ರಗಳ ಸುತ್ತಮುತ್ತ 200 ಮೀ ವ್ಯಾಪ್ತಿಯಲ್ಲಿ 144 ಸೆಕ್ಷನ್ ಜಾರಿಗೊಳಿಸಿ ಆದೇಶಿಸಲಾಗಿದೆ.

ಪೊಲೀಸ್ ಇಲಾಖೆಯಿಂದ ಪರೀಕ್ಷಾ ಕೇಂದ್ರಗಳಿಗೆ ಸೂಕ್ತ ಬಂದೋಬಸ್ತ್ ಒದಗಿಸಲಾಗುವುದು. ಪರೀಕ್ಷಾ ಕೇಂದ್ರಗಳ ಅಧೀಕ್ಷಕರಿಗೆ ಈಗಾಗಲೇ ತರಬೇತಿ ನೀಡಲಾಗಿದ್ದು, ಅವರು ತಮ್ಮ ಕೇಂದ್ರದಲ್ಲಿ ಕರ್ತವ್ಯ ನಿರ್ವಹಿಸುವ ಪರೀಕ್ಷಾ ಸಿಬ್ಬಂದಿಗೆ ತರಬೇತಿ ನೀಡುವಂತೆ ತಿಳಿಸಿದರು.

ಸಿಸಿ ಕ್ಯಾಮೆರಾ ಕಡ್ಡಾಯ : ಈ ಬಾರಿ ಪರೀಕ್ಷೆ ನಡೆಯುವುದನ್ನು ವೆಬ್ ಕ್ಯಾಸ್ಟಿಂಗ್ ಮೂಲಕ ವೀಕ್ಷಿಸಲಾಗುವುದು. ಆದ್ದರಿಂದ ಪ್ರತಿ ಪರೀಕ್ಷಾ ಕೇಂದ್ರದಲ್ಲಿ ಸಿ.ಸಿ. ಕ್ಯಾಮರಾ ಅಳವಡಿಕೆ ಕಡ್ಡಾಯವಾಗಿದೆ. ಯಾವ ಕೇಂದ್ರದಲ್ಲಿ ಇಲ್ಲವೋ ಮಾಹಿತಿ ನೀಡಿ ಈಗಲೇ ಸಿಸಿ ಕ್ಯಾಮೆರಾ ಅಳವಡಿಸಬೇಕು. ಪರೀಕ್ಷಾ ಕೇಂದ್ರಗಳ ಅಧೀಕ್ಷಕರು ಈ ಬಗ್ಗೆ ಪರಿಶೀಲಿಸಿ ಖಾತ್ರಿಪಡಿಸಿಕೊಳ್ಳಬೇಕು ಎಂದರು.

ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷಾರ್ಥಿಗಳಿಗೆ ಕುಡಿಯುವ ನೀರು, ಸೂಕ್ತ ಆಸನಗಳ ವ್ಯವಸ್ಥೆ ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಒದಗಿಸುವಂತೆ ಸೂಚನೆ ನೀಡಿದರು.

ಪರೀಕ್ಷೆಗೆ ನಿಯೋಜನೆಗೊಂಡ ಅಧಿಕಾರಿಗಳು ಅನುಸರಿಸಬೇಕಾದ ಮಾರ್ಗಸೂಚಿಗಳ ಬಗ್ಗೆ ತಿಳಿಸಿದ ಅವರು ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಅಚ್ಚುಕಟ್ಟಾಗಿ ಕರ್ತವ್ಯ ನಿರ್ವಹಿಸುವ ಮೂಲಕ ಪರೀಕ್ಷೆಯನ್ನು ಯಶಸ್ವಿಗೊಳಿಸಬೇಕೆಂದು ತಿಳಿಸಿದರು.

ಸಭೆಯಲ್ಲಿ ಡಿಡಿಪಿಐ ಮಂಜುನಾಥ್, ಬಿಇಓ ರಮೇಶ್, ಪರೀಕ್ಷೆಗೆ ನಿಯೋಜನೆಗೊಂಡ ಅಧಿಕಾರಿಗಳು ಹಾಜರಿದ್ದರು.

# ಅಗಸ್ತ್ಯ ಫೌಂಡೇಶನ್ : ವಿಜ್ಞಾನ ಶಿಕ್ಷಕರ ಮಾದರಿ ತಯಾರಿಕಾ ತರಬೇತಿ ಕಾರ್ಯಾಗಾರ



**ಶಿವಮೊಗ್ಗ :** ಸಮೀಪದ ಆಯನೂರಿನಲ್ಲಿರುವ ಅಗಸ್ತ್ಯ ಫೌಂಡೇಶನ್ ನ ವಿಜ್ಞಾನ ಕೇಂದ್ರದಲ್ಲಿ ಎರಡು ದಿನಗಳ ಕಾಲ ಆಯನೂರಿನಲ್ಲಿ ವಿಜ್ಞಾನ ಶಿಕ್ಷಕರ ಮಾದರಿ ತಯಾರಿಕಾ ತರಬೇತಿ ಕಾರ್ಯಾಗಾರ ಯಶಸ್ವಿಯಾಗಿ ಜರುಗಿತು. ಕಾರ್ಯಾಗಾರದ ಉದ್ಘಾಟನೆಯನ್ನು ಡಯಟ್ ನ ಉಪಪ್ರಾಂಶುಪಾಲರಾದ ರೇಣುಕಾ, ಹಿರಿಯ ಉಪನ್ಯಾಸಕಿಯರಾದ ಸುವರ್ಣಾ, ಶಶಿಕಲಾ , ಆಯನೂರು ಕ್ಲಸ್ಟರ್ ನ ಸಿ ಆರ್ ಪಿ ಗಳಾದ ಮಾಧವ್ ಹಾಗೂ ಡಯಟ್ ನ ಇನ್ನಿತರೇ ಉಪನ್ಯಾಸಕರು ಉದ್ಘಾಟಿಸಿದರು.ಮಾದರಿ ತಯಾರಿಕಾ ತರಬೇತಿ ಕಾರ್ಯಾಗಾರಗಳು ನವೀನ ಆಲೋಚನೆಗಳು ಮತ್ತು ಕ್ರಿಯಾ ಶೀಲ ಮನೋಭಾವನೆಯನ್ನು ಹುಟ್ಟು ಹಾಕುತ್ತವೆ ಹಾಗೂ ವಿದ್ಯಾರ್ಥಿಗಳಿಗೆ ಈ ರೀತಿಯ ಕಲಿಕೆಯಲ್ಲಿ ತೊಡಗಿಸಿಕೊಂಡಾಗ ಹೆಚ್ಚು ಅರ್ಥಪೂರ್ಣ ಜ್ಞಾನ ಪಡೆದುಕೊಳ್ಳುವಲ್ಲಿ ಯಶಸ್ವಿಯಾಗುತ್ತಾರೆ, ಈ ರೀತಿಯಲ್ಲಿ ಜಿಲ್ಲೆಯ ಶೈಕ್ಷಣಿಕ ಹಾಗೂ ಮಕ್ಕಳ ಕಲಿಕೆಯಲ್ಲಿ ಆಸಕ್ತಿ ಹೆಚ್ಚಿಸುವ ದಿಶೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಗಸ್ತ್ಯ ಫೌಂಡೇಶನ್ ನಮ್ಮ ಜಿಲ್ಲೆಯ ಆಯನೂರಿನಲ್ಲಿರುವದು ಒಂದು ಖುಷಿಯ ವಿಚಾರ ಎಂದು ಡಯಟ್ ನ ಉಪಪ್ರಾಂಶುಪಾಲರಾದ ರೇಣುಕಾ ಅವರು ಮಾತನಾಡಿದರು.ವಿಜ್ಞಾನ ಕೇಂದ್ರದ ಮುಖ್ಯಸ್ಥ ಶಿವರಾಜ್ ಗೊರನಾಳ ಮಾತನಾಡಿ ನಮ್ಮ ಜೀವನದ ಉದ್ದೇಶವೇ ನಮ್ಮನ್ನು ನಾವು ಅರಿಯುವುದು ಹಾಗೂ ಜ್ಞಾನವನ್ನು ಸಂಪಾದಿಸುವದೇ ಆಗಿದೆ ಹಾಗೆ ಕಲಿತ ಜ್ಞಾನವನ್ನು ನವಪೀಳಿಗೆಗಳಿಗೆ ತಿಳಿಸುತ್ತಾ ಒಂದು ಉತ್ತಮ ರಾಷ್ಟ್ರ ನಿರ್ಮಾಣ ಮಾಡುವುದು ನಮ್ಮ ಕರ್ತವ್ಯವಾಗಿದೆ, ಈ ದೆಸೆಯಲ್ಲಿ ಈ ತರಬೇತಿ ಕಾರ್ಯಾಗಾರದಲ್ಲಿ ತಿಳಿಸಲ್ಪಡುವ ಚಟುವಟಿಕೆಗಳನ್ನು ಮಕ್ಕಳಿಗೆ ಹೇಳಿಕೊಡುವದರೊಂದಿಗೆ ಅವರನ್ನು ಸದಾ ಕ್ರಿಯಾಶೀಲರಾಗಿ ನಾವೆಲ್ಲರೂ ಕೈ ಜೋಡಿಸೋಣ ಎಂದರು.ಎರಡು ದಿನಗಳ ಕಾಲ ನಡೆದ ಈ ಕಾರ್ಯಕ್ರಮದಲ್ಲಿ 9 ಕ್ಲಸ್ಟರ್ ನ ಸುಮಾರು 50 ವಿಜ್ಞಾನ ಶಿಕ್ಷಕರು ಇದರ ಸದುಪಯೋಗ ಪಡೆದುಕೊಂಡರು. ತರಬೇತಿ ಕಾರ್ಯಾಗಾರವನ್ನು ವಿಜ್ಞಾನ ಕೇಂದ್ರದ ಮಾರ್ಗದರ್ಶಕರಾದ ಶ್ವೇತಾ ಕೆ ಯಶಸ್ವಿಯಾಗಿ ನಡೆಸಿಕೊಟ್ಟರು. ಹಾಗೂ ಈ ಕಾರ್ಯಾಗಾರಕ್ಕೆ ಅತಿಥಿಗಳಾಗಿ ಆಗಮಿಸಿದ್ದ ಜಿಲ್ಲಾ ಉಪಯೋಜನಾ ಸಮನ್ವಯಾಧಿಕಾರಿಗಳಾದ ನಾಗರತ್ನಮ್ಮ ಅವರನ್ನು ಸನ್ಮಾನಿಸಿ ಗೌರವಿಸುವದರೊಂದಿಗೆ ಅವರ ಮುಂದಿನ ನಿವೃತ್ತಿ ಜೀವನಕ್ಕೆ ಶುಭ ಹಾರೈಸಲಾಯಿತು.


# ಅಸಗೋಡು ಗ್ರಾಪಂ ಅಧ್ಯಕ್ಷೆಯಾಗಿ ರಾಧಮ್ಮ ಕುಬೇರಪ್ಪ ಅವಿರೋಧ ಆಯ್ಕೆ



**ಜಗಳೂರು:** ತಾಲ್ಲೂಕಿನ ಅಸಗೋಡು ಗ್ರಾಮಪಂಚಾಯಿತಿ ನೂತನ ಅಧ್ಯಕ್ಷರಾಗಿ ರಾಧಮ್ಮ ಕುಬೇರಪ್ಪ ಅವಿರೋಧವಾಗಿ ಆಯ್ಕೆಯಾದರು.

ಎಸ್ ಟಿ ಮೀಸಲು ಅಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ತುಪ್ಪದಹಳ್ಳಿ ಗ್ರಾಮದ ರಾಧಮ್ಮ ಕುಬೇರಪ್ಪ ಅವರು ಒಬ್ಬರೇ ನಾಮಪತ್ರ ಸಲ್ಲಿಸಿದ್ದು, ನಾಮಪತ್ರ ಊರ್ಜಿತವಾಯಿತು. ಸರ್ವಸದಸ್ಯರ ಸರ್ವಾನುಮತದಿಂದ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣೆ ಅಧಿಕಾರಿಯಾಗಿ ಕಾರ್ಯನಿರ್ವಹಿಸಿದ ಲೋಕೋಪಯೋಗಿ ಇಲಾಖೆ ಎಇಇ ನಾಗರಾಜ್ ಎಚ್. ತಿಳಿಸಿದ್ದಾರೆ.ಈ ಸಂದರ್ಭದಲ್ಲಿ ಮಾಜಿ ಅಧ್ಯಕ್ಷೆ ನಾಗಮ್ಮ ಚನ್ನಬಸಪ್ಪ, ಗ್ರಾ.ಪಂ.ಉಪಾಧ್ಯಕ್ಷೆ ಶಕುಂತಲಾ ತಿಮ್ಮೇಶ್, ಸದಸ್ಯರಾದ ಜೆ.ಎಂ. ರವಿಕುಮಾರ್, ವೀರಮ್ಮ, ಶಿಲ್ಪ ಜೆ.ಎನ್. , ರೇಣುಕಮ್ಮ, ನಾಗರಾಜ್, ಸರೋಜಮ್ಮ, ಲಲಿತಮ್ಮ, ಎಚ್.ಆರ್. ಬಸವರಾಜಪ್ಪ, ಬಸವರಾಜ್ ಎಂ, ಶಂಕ್ರಪ್ಪ, ರೇಷ್ಮಾ, ನಸ್ರುಲ್ಲಾ, ಶಂಭುಲಿಂಗಪ್ಪ, ಮಂಜಮ್ಮ, ಪಿಡಿಓ ಮರುಳಸಿದ್ದಪ್ಪ, ಮುಖಂಡರಾದ ತುಪ್ಪದಹಳ್ಳಿ ಸಿದ್ದಪ್ಪ, ಶಂಭುಲಿಂಗಪ್ಪ ಇನ್ನಿತರರು ಉಪಸ್ಥಿತರಿದ್ದರು.

## ಲೋಕಸಭಾ ಸದಸ್ಯರಾದ ಬಸವರಾಜ ಬೊಮ್ಮಾಯಿ ಅವರ ಪ್ರವಾಸ ಕಾರ್ಯಕ್ರಮ



**ಗದಗ (ಕರ್ನಾಟಕ ವಾರ್ತೆ)** ; ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಲೋಕಸಭಾ ಸದಸ್ಯರಾದ ಬಸವರಾಜ ಬೊಮ್ಮಾಯಿ ಅವರು ಫೆಬ್ರುವರಿ 21 ರಂದು ಗದಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು ವಿವರ ಈ ಕೆಳಗಿನಂತಿದೆ.

ಫೆಬ್ರುವರಿ 21 ರಂದು ಬೆಳಿಗ್ಗೆ 9.30 ಗಂಟೆಗೆ ಹುಬ್ಬಳ್ಳಿಯಿಂದ ರಸ್ತೆ ಮೂಲಕ ಹೊರಟು ಬೆಳಿಗ್ಗೆ 10.30 ಗಂಟೆಗೆ ಗದಗಿಗೆ ಆಗಮಿಸಿ ಗದಗ ತೋಂಟದಾರ್ಯ ಮಠದಲ್ಲಿ ಪೂಜ್ಯ ಲಿಂ. ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳವರ 76 ನೇ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಬೆ 11.30 ಗಂಟೆಗೆ ಗದಗ ಉಪವಿಭಾಗಾದಿಕಾರಿಗಳ ಕಾರ್ಯಾಲಯದ ಆವರಣದಲ್ಲಿ ಲೋಕಸಭಾ ಸದಸ್ಯರ ಜನಸಂಫರ್ಕ ಕಾರ್ಯಾಲಯದ ಉದ್ಘಾಟನೆ ಮಾಡುವರು. ಮಧ್ಯಾಹ್ನ 12 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆ/ ಜಿಲ್ಲಾ ಮಟ್ಟದ ಬ್ಯಾಂಕುಗಳ ಸಲಹಾ ಸಮಿತಿ ಸಭೆಯಲ್ಲಿ ಭಾಗವಹಿಸುವರು. ಮಧ್ಯಾಹ್ನ 3 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಕೇಂದ್ರ ಸರ್ಕಾರದ ಯೋಜನೆಗಳ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿಯ ದಿಶಾ ಸಭೆಯಲ್ಲಿ ಭಾಗವಹಿಸುವರು. ಸಂಜೆ 6.30 ಗಂಟೆಗೆ ಪಕ್ಷದ ಕಾರ್ಯಾಲಯದ ಕಾರ್ಯಕ್ರಮದಲ್ಲಿ ಭಾಗವಹಿಸುವರು. ರಾತ್ರಿ 8 ಗಂಟೆಗೆ ಗದುಗಿನಿಂದ ರಸ್ತೆ ಮೂಲಕ ಬೆಳಗಾವಿಗೆ ಪ್ರಯಾಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

## ಫೆ.28 ರಂದು ವ್ಯಕ್ತಿ ವಿಕಾಸನ ಶಿಬಿರ

**ಹಾಸನ :** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ 2024–25 ನೇ ಸಾಲಿನಲ್ಲಿ "ಯುವ ಸಂಪರ್ಕ ಸಭೆ" ಯುವಕರಿಗೆ ವ್ಯಕ್ತಿವಿಕಾಸನ ಶಿಬಿರವನ್ನು ಫೆ.28 ರಂದು ಬೆ.10 ಗಂಟೆಗೆ ಕಲಾಭವನದಲ್ಲಿ ಹಮ್ಮಿಕೊಂಡಿದ್ದು, ಹೆಚ್ಚಿನ ಯುವಕ/ಯುವತಿಯರು ವ್ಯಕ್ತಿತ್ವ ವಿಕಾಸನ ಶಿಬಿರದಲ್ಲಿ ಭಾಗವಹಿಸಿ ಶಿಬಿರ ಯಶಸ್ವಿಗೊಳಿಸುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಕೋರಿದ್ದಾರೆ.ಶಿಬಿರಕ್ಕೆ ಭಾಗವಹಿಸಲು ಇಚ್ಚಿಸುವ ಯುವಕ/ಯುವತಿಯರು ಫೆ.27 ರೊಳಗೆ ಕಚೇರಿಯ ದೂರವಾಣಿ ಸಂಖ್ಯೆ:08172–296256ಗೆ ಕರೆ ಮಾಡಿ ನೊಂದಾಯಿಸಿಕೊಳ್ಳಲು ತಿಳಿಸಿದ್ದಾರೆ.

## ಯುವನಿಧಿ ಯೋಜನೆಯ ಸ್ವಯಂ–ಘೋಷಣೆ

**ಹಾಸನ :** ರಾಜ್ಯ ಸರ್ಕಾರದ ಪಂಚ ಗ್ಯಾರಂಟಿಗಳಲ್ಲಿ ಒಂದಾದ ಯುವನಿಧಿ ಯೋಜನೆಯಲ್ಲಿ ನೋಂದಣಿಯಾದ ಅಭ್ಯರ್ಥಿಗಳು ಕಡ್ಡಾಯವಾಗಿ ಆಧಾರ ಸೀಡೆಡ್ ಬ್ಯಾಂಕ್ ಖಾತೆ ಹೊಂದಿರಬೇಕು. ವೆಬ್ ಸೈಟ್ https://sevasindhugs.karnataka.gov.in ನಲ್ಲಿ ತಮ್ಮ ಅರ್ಜಿಯು ಯಾವ ಹಂತದಲ್ಲಿದೆ ಎಂಬುದನ್ನು ಪರಿಶೀಲಿಸಿಕೊಂಡು, ಹಾಗೂ ಪರಿಶೀಲನೆಗೆ ಬಾಕಿ ಉಳಿದಿರುವ ಅಭ್ಯರ್ಥಿಗಳು ಮಾತ್ರ ಸೂಚಿಸಲ್ಪಟ್ಟ ಇಲಾಖೆಯ ಕಚೇರಿಗಳಿಗೆ ತಮ್ಮ ಎಲ್ಲ ಮೂಲ ಅಂಕಪಟ್ಟಿ ಹಾಗೂ ಇತರೆ ಪ್ರಮಾಣ ಪತ್ರಗಳೊಂದಿಗೆ ಖುದ್ದಾಗಿ ಭೇಟಿ ನೀಡಿ, ಪರಿಶೀಲಿಸಿ ಶೀಘ್ರವಾಗಿ ದೃಢೀಕರಿಸಿಕೊಳ್ಳುವಂತೆ ಸೂಚಿಸಲಾಗಿದೆ.

ಈಗಾಗಲೇ ನೋಂದಾಯಿಸಿಕೊಂಡು ಹಣ ಪಡೆಯುತ್ತಿರುವ ಫಲಾನುಭವಿಗಳು ಪ್ರತಿ ತಿಂಗಳು 25ನೇ ದಿನಾಂಕದೊಳಗೆ ಸ್ವಯಂ–ಘೋಷಣೆಯನ್ನು ಮಾಡಿಕೊಳ್ಳಬೇಕಾಗಿ ಈ ಮೂಲಕ ತಿಳಿಸಲಾಗಿದೆ. ಹಾಗೂ ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ: 08172–296374, ನ್ನು ಸಂಪರ್ಕಿಸುವಂತೆ ಹಾಸನ ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

## ಮರಳು ಬ್ಲಾಕ್ಗಳ ವಿಲೇವಾರಿಗೆ ಲಾಟರಿ ಮೂಲಕ ಮೀಸಲಾತಿ ನಿಗಧಿ : ಗುರುದತ್ತಹೆಗಡೆ

**ಶಿವಮೊಗ್ಗ :** ಜಿಲ್ಲೆಯಲ್ಲಿ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ವ್ಯಾಪ್ತಿಗೊಳಪಡುವ ವಿವಿಧ ತಾಲೂಕುಗಳಲ್ಲಿನ ಮರಳು ಬ್ಲಾಕ್ಗಳನ್ನು ಸ್ಥಳೀಯ ಜನಪ್ರತಿನಿಧಿಗಳು ಹಾಗೂ ವಿವಿಧ ಕಾರ್ಯಾನುಷ್ಠಾನ ಇಲಾಖೆಗಳಿಂದ ಸರ್ಕಾರದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಮೀಸಲಿರಿಸುವಂತೆ ಕೋರಿರುವ ಹಿನ್ನೆಲೆಯಲ್ಲಿ ಸರ್ಕಾರದ ನಿಬಂಧನೆಗಳಿಗೊಳಪಟ್ಟು ಕಾಯ್ದಿರಿಸಲು ಜಿಲ್ಲಾ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಹಿರಿಯ ಭೂವಿಜ್ಞಾನಿಗಳಿಗೆ ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅವರು ತಿಳಿಸಿದರು.

ಅವರು ಇಂದು ತಮ್ಮ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಜಿಲ್ಲಾ ಮರಳು ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು. ಮರಳು ಬ್ಲಾಕ್ಗಳನ್ನು ನಿರ್ವಹಿಸುವ ಕಾರ್ಯಾನುಷ್ಠಾನ ಇಲಾಖೆಯ ಜವಾಬ್ದಾರಿಯುತ ಹಿರಿಯ ಅಧಿಕಾರಿಗಳು ತಮ್ಮ ವಶಕ್ಕೆ ಪಡೆದುಕೊಳ್ಳುವ ಬ್ಲಾಕ್ಗಳನ್ನು ಯಾವುದೇ ಲೋಪಗಳಿಗೆ ಅವಕಾಶವಿಲ್ಲದಂತೆ ಹಾಗೂ ದೂರುಗಳು ಬಾರದಂತೆ ವ್ಯವಸ್ಥಿತವಾಗಿ ನಿರ್ವಹಿಸಬೇಕಲ್ಲದೇ, ಸ್ಥಳದಲ್ಲಿ ಅಗತ್ಯ ಸಿಬ್ಬಂಧಿಯನ್ನು ನಿಯೋಜಿಸಿಕೊಳ್ಳುವಂತೆ ಸೂಚಿಸಿದರು.

ಪ್ರತಿ ಮರಳು ಬ್ಲಾಕ್ಗಳಲ್ಲಿ ನಿಯಮಾನುಸಾರ ವೇಬ್ರಿಡ್ಜ್, ಕಣ್ಗಾವಲಿಗಾಗಿ ಸಿ.ಸಿ.ಕ್ಯಾಮರಾ ಅಳವಡಿಸಿಕೊಳ್ಳುವಂತೆ ಸೂಚಿಸಿದ ಅವರು, ಮರಳು ಬ್ಲಾಕ್ಗಳನ್ನು ವಶಕ್ಕೆ ಪಡೆದವರು ಕಟ್ಟುನಿಟ್ಟಾಗಿ ನಿಯಮವನ್ನು ಪಾಲಿಸಿರುವ ಬಗ್ಗೆ ಜಿಲ್ಲಾ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಗಳು ಖುದ್ದು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನಾ ವರದಿ ನೀಡಿದ ನಂತರ ಬ್ಲಾಕ್ಗಳ ಹಸ್ತಾಂತರಕ್ಕೆ ಕ್ರಮ ವಹಿಸಲಾಗುವುದು. ಈ ನಿಯಮ ಅನುಸರಣೆಯಲ್ಲಿ ಸಾರ್ವಜನಿಕರಿಂದ ಯಾವುದೇ ಆಕ್ಷೇಪಣೆಗಳು, ದೂರುಗಳು ಬಂದಲ್ಲಿ ತಮ್ಮನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದರು.

ಇದೇ ಸಂದರ್ಭದಲ್ಲಿ ಸರ್ಕಾರಿ ಕಾಮಗಾರಿಗಳಿಗೆ ಕಾಯ್ದಿರಿಸಿದ ಮರಳು ಬ್ಲಾಕ್ಗಳನ್ನು ಹೊರತುಪಡಿಸಿ, ಉಳಿದ ಬ್ಲಾಕ್ಗಳನ್ನು ಮೀಸಲಾತಿಯನ್ವಯ ವಿಲೇಮಾಡಲು ಸೂಚಿಸಿದ ಅವರು, ಸರ್ಕಾರದ ಮಾರ್ಗಸೂಚಿಯಂತೆ ಉಪಸ್ಥಿತ ಸಮಿತಿ ಸದಸ್ಯರ ಸಮ್ಮುಖದಲ್ಲಿ 25ಮರಳು ಬ್ಲಾಕ್ಗಳಿಗೆ ಲಾಟರಿ ಮೂಲಕ ಮೀಸಲಾತಿ ನಿಗಧಿಪಡಿಸಿ ಘೋಷಿಸಿದರು.

ಉಪಖನಿಜ ಕಾಯ್ದೆಗಳ ನಿಯಮಾನುಸಾರ ಈ ಹಿಂದೆ ಜಿಲ್ಲಾ ವ್ಯಾಪ್ತಿಯಲ್ಲಿ ಈಗಾಗಲೇ ಗುರುತಿಸಲಾಗಿದ್ದ ಮರಳು ಬ್ಲಾಕ್ಗಳನ್ನು ವಿಲೇಪಡಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿತ್ತು ಎಂದು ತಿಳಿಸಿದ ಅವರು, ಮೀಸಲಿರಿಸಿದ ಮರಳು ಬ್ಲಾಕ್ಗಳನ್ನು ಹೊರತುಪಡಿಸಿ, ಉಳಿದವುಗಳಿಗೆ ಮೀಸಲಾತಿ ಪ್ರಕಟಿಸಿರುವುದಾಗಿ ತಿಳಿಸಿದರು.ಹುಣಸವಳ್ಳಿ–01(ಪ.ಜಾ), ನಂಬಳ(ಇತರೆ), ಮಳಲೂರು–01(ಪ.ಪಂ.),ತೂದೂರು–01(ಇತರೆ), ಬೇಗುವಳ್ಳಿ–03(ಇತರೆ), ಬೇಗುವಳ್ಳಿ–01(ಇತರೆ), ದಬ್ಬಣಗದ್ದೆ–03(ಇತರೆ), ಸಿದ್ಲೀಪುರ–02(ವಿಕಲಚೇತನ), ಗುರುವಿನಕಟ್ಟೆ–(ಪ.ಜಾ.),,ದಬ್ಬಣಗದ್ದೆ–01(ಇತರೆ), ಕೂಡಲಿ–(ಇತರೆ), ಬಗ್ಗೋಡಿಗೆ–(ಇತರೆ), ದಬ್ಬಣಗದ್ದೆ–06(ಇತರೆ), ಸುತ್ತಾ–02(ಇತರೆ), ದಬ್ಬಣಗದ್ದೆ–07(ಪ.ಜಾ), ಬಗ್ಗೋಡಿಗೆ–02(ಇತರೆ), ಮಣಶೆಟ್ಟಿ–( ಇತರೆ), ಸನ್ಯಾಸಿಕೋಡಮಗ್ಗಿ–02(ಪ.ಪಂ.), ತೂದೂರು–03(ಇತರೆ), ಮಳಲೂರು–02(ಇತರೆ), ಅರೆಹಳ್ಳಿ–( ಇತರೆ), ಸೋನಲೆ–01(ಇತರೆ), ಕೂಡಲಿ–01(ವಿಕಲಚೇತನ ಪ.ಜಾ.) ಮರಳು ಬ್ಲಾಕ್ಗಳಿಗೆ ಮೀಸಲಾತಿ ನಿಗಧಿಪಡಿಸಿ ಪ್ರಕಟಿಸಿದರು. ಈ ಸಂದರ್ಭದಲ್ಲಿ ಹೆಚ್ಚುವರಿ ಜಿಲ್ಲಾ ರಕ್ಷಣಾಧಿಕಾರಿ ಅನಿಲ್ಕುಮಾರ್ಭೂಮರೆಡ್ಡಿ, ಹಿರಿಯ ಭೂವಿಜ್ಞಾನಿ ಪಿ.ಕೆ.ನಾಯ್ಕ್ ಸೇರಿದಂತೆ ಸಂಬಂಧಿತ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಮೆಕ್ಯಾನಿಕಲ್ ಇಂಜಿನಿಯರಿಂಗ್ ವಿಭಾಗಕ್ಕೆ ಎನ್‌ಬಿಎ ಮಾನ್ಯತೆ



**ಹಾಸನ :** ಹೊಳೆನರಸೀಪುರದಲ್ಲಿರುವ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯು 2008–09ರಲ್ಲಿ ಪ್ರಾರಂಭಗೊಂಡಿದ್ದು, ಇದು ಹೊಳೆನರಸೀಪುರ ತಾಲ್ಲೂಕಿನ ತಟ್ಟೆಕೆರೆ ಎಂಬ ಗ್ರಾಮ ಚನ್ನರಾಯಪಟ್ಟಣ ರಸ್ತೆಯ ಹಾದಿಯಲ್ಲಿದ್ದು, ಸುತ್ತಮುತ್ತಲಿನ ಗ್ರಾಮೀಣ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ತಾಂತ್ರಿಕ ಶಿಕ್ಷಣವನ್ನು ನೀಡುತ್ತಾ ಬರುತ್ತಿದೆ. ಈ ಸಂಸ್ಥೆಯು ?ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ? ಯಡಿಯಲ್ಲಿದ್ದು ಶೈಕ್ಷಣಿಕ ಸಾಲಿನಲ್ಲಿ ಎಲ್ಲಾ ವಿಭಾಗದಲ್ಲೂ ಉತ್ತಮ ಫಲಿತಾಂಶವನ್ನು ನೀಡುತ್ತಾ ಬರುತ್ತಿದೆ. ನಮ್ಮ ಸಂಸ್ಥೆಯು ತಾಂತ್ರಿಕ ಶಿಕ್ಷಣ ಇಲಾಖೆಯ ಮಾರ್ಗದರ್ಶನದೊಂದಿಗೆ ಸುಮಾರು 6 ತಿಂಗಳಿನ ಹಿಂದೆಯೇ ರಾಷ್ಟ್ರೀಯ ಮಾನ್ಯತಾ ಮಂಡಳಿಯಿಂದ ಮಾನ್ಯತೆಯನ್ನು ಪಡೆಯಲು ಅರ್ಜಿಯನ್ನು ಸಲ್ಲಿಸಿದ್ದೆವು.

ಅದರಂತೆಯೇ ಎನ್‌ಬಿಎ ಸಮಿತಿಯ ಸದಸ್ಯರುಗಳು ಪರಿಶೀಲನೆಗೆ ಆಗಮಿಸಿದ್ದರು. ಸದರಿಯವರುಗಳು ಜನವರಿ 10, 11 ಮತ್ತು 12, 2025 ರಂದು ನಮ್ಮ ಸಂಸ್ಥೆಗೆ ಭೇಟಿ ನೀಡಿ, ಶಿಕ್ಷಣದ ಗುಣಮಟ್ಟ, ಭೌತಿಕ ಸೌಕರ್ಯಗಳು, ಉಪನ್ಯಾಸಕರ ಉಪನ್ಯಾಸದ ಅನುಭವ ಹಾಗೂ ಪರಿಣಿತಿ ಮತ್ತು ಸಮಗ್ರ ಪಠ್ಯ ಮತ್ತು ಪಠ್ಯೇತರ ಚಟುವಟಿಕೆಗಳನ್ನು ಕೂಲಂಕುಶವಾಗಿ ಪರಿಶೀಲನೆ ನಡೆಸಿ, ಓಂ ಸಮಿತಿಗೆ ವರದಿಯನ್ನು ಸಲ್ಲಿಸಿದರು.

ಸದರಿ ವರದಿಯ ಪ್ರಕಾರ ಉತ್ತಮ ಫಲಿತಾಂಶ ಹೊರಹೊಮ್ಮಿದ್ದು ಸಂಸ್ಥೆಗೆ ರಾಷ್ಟ್ರೀಯ ಮಾನ್ಯತಾ ಮಂಡಳಿಯಿಂದ ಮಾನ್ಯತೆ ದೊರೆತಿದೆ. ಈ ಮಾನ್ಯತೆಯು ಸಂಸ್ಥೆಯ ವಿದ್ಯಾರ್ಥಿಗಳಿಗೆ ಅತ್ಯುತ್ತಮ ತಾಂತ್ರಿಕ ಶಿಕ್ಷಣ ನೀಡುವ ಸಂಸ್ಥೆಯೆಂದು ಈ ಮೂಲಕ ದೃಢಪಡಿಸಲಾಗಿದೆ. ಅಲ್ಲದೆ ವ್ಯಾಸಂಗ ಯಶಸ್ವಿಯಾಗಿ ಸಂಪೂರ್ಣಗೊಳಿಸಿದವರಿಗೆ ಉದ್ಯೋಗಾವಕಾಶಗಳನ್ನು ಹೆಚ್ಚಿಸಲು ಉತ್ತೇಜನ ನೀಡುವಂತಾಗಿಸುತ್ತದೆ.

ರಾಜ್ಯದಲ್ಲಿ ಒಟ್ಟು 110 ಸರ್ಕಾರಿ ಪಾಲಿಟೆಕ್ನಿಕ್‌ಗಳಿದ್ದು, ಇವುಗಳಲ್ಲಿ ಕೇವಲ 05 ಸರ್ಕಾರಿ ಪಾಲಿಟೆಕ್ನಿಕ್‌ಗಳಿಗೆ ಮಾತ್ರ ಅದರಲ್ಲೂ 04 ಸಂಸ್ಥೆಗಳು ಜಿಲ್ಲಾ ಕೇಂದ್ರಗಳಲ್ಲಿ ಗುರುತಿಸಿಕೊಂಡಿರುವ ಸಂಸ್ಥೆಗಳಿಗೆ ಮಾತ್ರ ರಾಷ್ಟ್ರೀಯ ಮಾನ್ಯತಾ ಮಂಡಳಿಯಿಂದ ಮಾನ್ಯತೆ ದೊರೆತಿದೆ. ಹಾಸನ ಜಿಲ್ಲೆಯ ಹೊಳೆನರಸೀಪುರ ತಾಲ್ಲೂಕಿನಿಂದ 3–4 ಕಿ.ಮೀ. ದೂರದಲ್ಲಿರುವ ತಟ್ಟೆಕೆರೆ ಎಂಬ ಗ್ರಾಮ, ಚನ್ನರಾಯಪಟ್ಟಣ ರಸ್ತೆಯ ಹಾದಿಯಲ್ಲಿದ್ದು, ಇಲ್ಲಿಗೆ ಬಹುತೇಕ ಸುತ್ತಮುತ್ತಲಿನ ಗ್ರಾಮೀಣ ಪ್ರದೇಶದಲ್ಲಿ ವ್ಯಾಸಂಗ ಮಾಡಿರುವ ವಿದ್ಯಾರ್ಥಿಗಳೇ ಪ್ರವೇಶವನ್ನು ಪಡೆದು, ಉತ್ತಮ ತಾಂತ್ರಿಕ ಶಿಕ್ಷಣವನ್ನು ಪಡೆಯುತ್ತಿರುತ್ತಾರೆ.

ಫೆಬ್ರವರಿ 12, 2025 ರಂದು ಸಂಸ್ಥೆಯ ಮೆಕ್ಯಾನಿಕಲ್ ಇಂಜಿನಿಯರಿಂಗ್ ವಿಭಾಗವು ರಾಷ್ಟ್ರೀಯ ಮಾನ್ಯತಾ ಮಂಡಳಿಯಿಂದ (National board of Accreditation) ಜೂನ್ 30, 2028 ರವರೆಗೆ ಮಾನ್ಯತೆ ಪಡೆದಿದೆ. ಗ್ರಾಮೀಣ ಪ್ರದೇಶದಲ್ಲಿನ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗೆ ರಾಜ್ಯದಲ್ಲೇ ಪ್ರಥಮ ಬಾರಿಗೆ ರಾಷ್ಟ್ರೀಯ ಮಾನ್ಯತೆ ದೊರೆತಿರುವ ಏಕೈಕ ಸಂಸ್ಥೆಯಾಗಿದೆ.

ಈ ಮಾನ್ಯತೆಯು ತಾಂತ್ರಿಕ ಶಿಕ್ಷಣದ ಗುಣಮಟ್ಟವನ್ನು ಮತ್ತಷ್ಟು ವೃದ್ಧಿಸಿ ವಿದ್ಯಾರ್ಥಿಗಳನ್ನು ಉದ್ಯೋಗ ಕೌಶಲ್ಯವನ್ನು ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿದೆ.ಈ ಮಹತ್ವದ ಸಾಧನೆಯ ಹಿನ್ನೆಲೆಯಲ್ಲಿ ಸಂಸ್ಥೆಯ, ಉಪನ್ಯಾಸಕರುಗಳು ಮತ್ತು ಸಿಬ್ಬಂದಿಗಳು ಎನ್‌ಬಿಎ ಗೆ ಕೃತಜ್ಞತೆಯನ್ನು ಸಲ್ಲಿಸಿ, ಯಶಸ್ಸನ್ನು ಸಾಧ್ಯಗೊಳಿಸಿದ ಪ್ರತಿಯೊಬ್ಬರಿಗೂ, ಹೃತ್ಪೂರ್ವಕವಾದ ಧನ್ಯವಾದಗಳನ್ನು ಪ್ರಾಂಶುಪಾಲರು ತಿಳಿಸಿದ್ದಾರೆ.

# ಇಂದು ಶ್ರೀ ಭವಾನಿ ಕಲ್ಯಾಣ ಮಂಟಪ ಉದ್ಘಾಟನೆ




**ದಾವಣಗೆರೆ:** ಕ್ಷತ್ರೀಯ ಮರಾಠ ವಿದ್ಯಾವರ್ಧಕ ಸಂಘದ ವತಿಯಿಂದ ಇಂದು ಬೆಳಗ್ಗೆ 11 ಗಂಟೆಗೆ ದೇವರಾಜ ಅರಸ್ ಬಡಾವಣೆ ಬಿ ಬ್ಲಾಕ್ ನಲ್ಲಿ ನಿರ್ಮಿಸಿರುವ ನೂತನ 'ಶ್ರೀ ಭವಾನಿ ಕಲ್ಯಾಣ ಮಂಟಪ' ದ ಉದ್ಘಾಟನೆ ಹಾಗೂ ಛತ್ರಪತಿ ಶಿವಾಜಿ ಮಹಾರಾಜರ 395 ನೇ ಜಯಂತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಗೌರವಾಧ್ಯಕ್ಷ ಯಶವಂತ ರಾವ್ ಜಾಧವ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಲ್ಯಾಣ ಮಂಟಪ ನಿರ್ಮಾಣಕ್ಕೆ ನಮ್ಮ ಸಮಾಜದವರು ಸೇರಿದಂತೆ ಎಲ್ಲ ಸಮಾಜದ ದಾನಿಗಳು, ರಾಜಕಾರಣಿಗಳು ಸಹಕಾರ ನೀಡಿದ್ದಾರೆ. ಕಾರ್ಯಕ್ರಮದಲ್ಲಿ ಎಲ್ಲರನ್ನೂ ಗುರ್ತಿಸಿ ಸನ್ಮಾನಿಸಿ ಗೌರವಿಸಲಾಗುವುದು. ಹಾಗೂ ನಮ್ಮ ಸಮಾಜದ ಐವರು ಪ್ರತಿಭಾನ್ವಿತರು ಎಂಬಿಬಿಎಸ್ ವ್ಯಾಸಂಗ ಮಾಡುತ್ತಿದ್ದು, ಅವರನ್ನು ಕೂಡ ಸನ್ಮಾನಿಸಲಾಗುವುದು. ಫೆ. 20ರಂದು ಹೋಮಹವನಾದಿ ಕಾರ್ಯಕ್ರಮಗಳು ಜರುಗಲಿದ್ದು, ಇಂದು ಕಲ್ಯಾಣ ಮಂಟಪ ಉದ್ಘಾಟನೆ ನೆರವೇರಲಿದೆ ಎಂದರು.

ಇಂದು ಬೆಳಗ್ಗೆ 11ಗಂಟೆಯ ಶುಭ ಮುಹೂರ್ತದಲ್ಲಿ ಮಂಟಪ ಉದ್ಘಾಟನೆ ನಡೆಯಲಿದೆ. ಬೆಂಗಳೂರು ಗವಿಪುರಂ, ಗೋಸಾಯಿಮಠ, ಶ್ರೀ ಭವಾನಿ ಪೀಠದ ಶ್ರೀ ಮಂಜುನಾಥ ಸ್ವಾಮೀಜಿಯವರು ಸಾನ್ನಿಧ್ಯ ವಹಿಸಲಿದ್ದು, ಸಂಘದ ಅಧ್ಯಕ್ಷ ಡಿ. ಮಾಲತೇಶ ರಾವ್ ಜಾಧವ್ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಶಾಸಕ ಡಾ. ಶಾಮನೂರು ಶಿವಶಂಕರಪ್ಪ, ಮಾಜಿ ಕೇಂದ್ರ ಸಚಿವ ಜಿ.ಎಂ. ಸಿದ್ದೇಶ್ವರ್, ಕಾರ್ಮಿಕ ಸಚಿವ ಸಂತೋಷ್ ಲಾಡ್, ಜಿಲ್ಲಾ ಉಸ್ತುವಾರಿ ಸಚಿವ ಎಸ್. ಎಸ್. ಮಲ್ಲಿಕಾರ್ಜುನ್, ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್, ಮಾಜಿ ಸಚಿವ ಪಿಜಿಆರ್ ಸಿಂಧ್ಯಾ, ಶಾಸಕ ಶ್ರೀನಿವಾಸ ಮಾನೆ, ವಿಧಾನ ಪರಿಷತ್ ಸದಸ್ಯ ಎಂ.ಜಿ. ಮೂಳೇ, ಮಾಜಿ ಸಚಿವ ಹೆಚ್. ಆಂಜನೇಯ, ನಿಗಮ ಮಂಡಳಿ ವ್ಯವಸ್ಥಾಪಕ ನಿರ್ದೇಶಕ ಡಾ. ಪ್ರಕಾಶ್ ಪಾಗೋಜಿ ಉಪಸ್ಥಿತರಿರುವರು ಎಂದು ಮಾಹಿತಿ ನೀಡಿದರು.


ಸುದ್ದಿಗೋಷ್ಠಿಯಲ್ಲಿ, ಸಂಘದ ಅಧ್ಯಕ್ಷ ಡಿ. ಮಾಲತೇಶ ರಾವ್ ಜಾಧವ್, ಸತೀಶ್ ಜಾಧವ್, ಗಣೇಶ್ ರಾವ್, ಜಿ. ಯಲ್ಲಪ್ಪ ಥಮಾಳೆ, ಯಲ್ಲಪ್ಪ ಜೊಳ್ಳಿ, ರಾಮಚಂದ್ರ ರಾವ್, ಇನ್ನಿತರರು ಉಪಸ್ಥಿತರಿದ್ದರು.

# ಎಲ್ಲ ಬಲ್ಲ ಸರ್ವಜ್ಞ ಸಮಾನತೆಯನ್ನು ಪ್ರತಿಪಾದಿಸಿದರು : ಚಂದ್ರಭೂಪಾಲ್

**ಶಿವಮೊಗ್ಗ :** ಎಲ್ಲವನ್ನು ಬಲ್ಲ ಜ್ಞಾನಿಯೇ ಸರ್ವಜ್ಞ. ಸರ್ವಜ್ಞರು ಮಹಾಜ್ಞಾನಿಯಾಗಿದ್ದು ತ್ರಿಪದಿ ವಚನಗಳ ಮೂಲಕ ಸಮಾಜದ ಅಂಕು ಡೊಂಕು ತಿದ್ದುತ್ತಾ ಸಮಾನತೆಯನ್ನು ಪ್ರತಿಪಾದಿಸಿದ್ದಾರೆ ಎಂದು ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಸಿ.ಎಸ್.ಚಂದ್ರಭೂಪಾಲ್ ಸರ್ವಜ್ಞರನ್ನು ಬಣ್ಣಿಸಿದರು.

ಜಿಲ್ಲಾಡಳಿತ, ಜಿ.ಪಂ, ಮಹಾನಗರ ಪಾಲಿಕೆ, ಕನ್ನಡ ಮತ್ತು ಸಂಸ್ಕೃತ ಇಲಾಖೆ ಹಾಗೂ ಜಿಲ್ಲಾ ಕುಂಬಾರರ ಸಂಘ ಇವರ ಸಂಯುಕ್ತಾಶ್ರಯದಲ್ಲಿ ಗುರುವಾರ ನಗರದ ಕುವೆಂಪು ರಂಗಮಂದಿರ ಆಯೋಜಿಸಿದ್ದ ಶ್ರೀ ಸರ್ವಜ್ಞ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿದ ಅವರು ಮಾತನಾಡಿದರು.

ಕೇವಲ ಮಡಿಕೆ ಮಾಡುವುದು ಕುಂಬಾರಿಕೆ ಅಲ್ಲ. ಇದೊಂದು ಶ್ರೇಷ್ಠವಾದ ಕಲೆ. ಸರ್ವ ಶ್ರೇಷ್ಠ ಗಣೇಶ ಮೂರ್ತಿ ರೂಪಿಸುವ ಈ ಸಮುದಾಯದಲ್ಲಿ ಜನಿಸಿದ ನೀವೇ ಧನ್ಯರು ಎಂದ ಅವರು ಸರ್ವಜ್ಞರ ತ್ರಿಪದಿಯನ್ನು ಪ್ರತಿನಿತ್ಯ ನಾವು ಬಳಸುತ್ತೇವೆ ಆ ಮೂಲಕ ಅವರು ನಮ್ಮ ಮನಸಿನಲ್ಲಿ ಚಿರಸ್ಥಾಯಿಯಾಗಿದ್ದಾರೆ ಎಂದರು.




ಸರ್ವಜ್ಞರು ಸಮಾಜದಲ್ಲಿ ಮೇಲು ಕೀಳು ಇರಬಾರದೆಂದು ಪ್ರತಿಪಾದಿಸಿದರು. ಅವರು ಬಸವಣ್ಣನವರ ಪ್ರತಿಪಾದಕರಾಗಿದ್ದರು. ಅವರ ವಚನಗಳಿಂದ ಪ್ರಭಾವಿತಗೊಂಡಿದ್ದರು. ಆದರೆ 12 ನೇ ಶತಮಾತನದ ವಚನಕಾರರಿಗೆ ಸಿಕ್ಕಷ್ಟು ಪ್ರೋತ್ಸಾಹ ಸರ್ವಜ್ಞರಿಗೆ ಸಿಗಲಿಲ್ಲ ಎಂದ ಅವರು ಕುಂಬಾರ ಸಮುದಾಯದಲ್ಲಿ ಜನಸಂಖ್ಯೆ ಕಡಿಮೆ ಇರಬಹುದು ಆದರೆ ಅವರ ಕಾಯಕ ನಿಷ್ಠೆ ಅಚಲವಾಗಿದೆ.

ಕುಂಬಾರ ಸಮಾಜ ಸಾಮಾಜಿಕ, ರಾಜಕೀಯ, ಆರ್ಥಿಕ ಹಿಂದುಳಿದಿದ್ದು, ಸರ್ವಾಂಗೀಣ ಅಭಿವೃದ್ಧಿ ಆಗಬೇಕಿದೆ. ಹಿಂದುಳಿದ ವರ್ಗಗಳು ಜಾಗೃತಗೊಂಡು, ಎಚ್ಚರ ಆಗಬೇಕು. ಸರ್ಕಾರ ಯೋಜನೆಗಳ ಸದ್ಬಳಕೆ ಮಾಡಿಕೊಳ್ಳಬೇಕು. ಗ್ಯಾರಂಟಿ ಯೋಜನೆಗಳ ಸದುಪಯೋಗ ಮಾಡಿಕೊಳ್ಳಬೇಕು ಎಂದರು.

ಸಾಗರ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇ–ರಿಯ ಶಿಕ್ಷಣ ಸಂಯೋಜಕ ಪಾಲಾಕ್ಷಪ್ಪ ಎಸ್ ಎನ್ ಮಾತನಾಡಿ, ಸರ್ವಜ್ಞರು ಸಮಾಜದಲ್ಲಿ ಜಾಗೃತಿ ಮೂಡಿಸಿದ ಮಹಾಜ್ಞಾನಿ. ತ್ರಿಪದಿ ಬ್ರಹ್ಮ ಎಂದು ಕರೆಯಿಸಿಕೊಳ್ಳುವ ಇವರು ಸಮಾಜದ ಅಂಕುಕೊಂಡು ತಿದ್ದಿದ ದಾರ್ಶನಿಕ. ಉತ್ತಂಗಿ ಚನ್ನಪ್ಪನವರು ಸರ್ವಜ್ಞ ತ್ರಿಪದಿಗಳನ್ನು ಸಂಗ್ರಹಿಸುವ ಮೂಲಕ ಹೊರಜಗತ್ತಿಗೆ ಪರಿಚಯಿಸಿದ್ದಾರೆ. ಸುಮಾರು 2 ಸಾವಿರಕ್ಕೂ ಹೆಚ್ಚು ವಚನಗಳನ್ನು ಅವರು ಸಂಗ್ರಹಿಸಿದ್ದಾರೆ.

ಸರ್ವಜ್ಞರು 16 ನೇ ಶತಮಾನದಲ್ಲಿ ತ್ರಿಪದಿ ಶೈಲಿಯಲ್ಲಿ ವಚನವನ್ನು ಪರಿಣಾಮಕಾರಿಯಾಗಿ ಬಳಸುತ್ತಾರೆ. ಕನಕದಾಸ, ಪುರಂದ ದಾಸರ ಪ್ರಭಾವಕ್ಕೆ ಒಳಗಾದ ಇವರ ವಚನಗಳು ವಚನ–ದಾಸ–ಜಾನಪದ ಸಾಹಿತ್ಯ ಎರಕ ಹೊಯ್ದಂತೆ ಇವೆ. ಇವರು ಸಮಾಜವನ್ನು ಎಚ್ಚರಿಸುವ ಕೆಲಸವನ್ನು ತ್ರಿಪದಿಗಳಿಂದ ಮಾಡಿದ್ದಾರೆ. ನಮ್ಮ ಸಮಾಜದ ಗತಿಬಿಂಬ ಇವರು. ಕನ್ನಡ ನಾಡಿನಲ್ಲಿ ಪ್ರತಿಯೊಬ್ಬರ ನಾಲಿಗೆಯಲ್ಲಿ ಸರ್ವಜ್ಞನಲಿಯುತ್ತಿದ್ದಾನೆ. ಆದರೆ ನಮ್ಮ ಮನೆಯ ಮಕ್ಕಳಿಗೆ ಅವರ ಬಗ್ಗೆ ತಿಳಿಸಬೇಕು. ಅವರ ವಚನಗಳನ್ನು ಕಲಿಸಬೇಕಿದೆ. ಕನ್ನಡ ಸಾಹಿತ್ಯದಲ್ಲಿ ಅಜರಾಮರ ಆಗಿರುವ ಇವರು ಆಶು ಕವಿಯಾಗಿದ್ದಾರೆ. ಜೀವನಾನುಭವವೇ ಇವರ ಸಾಹಿತ್ಯವಾಗಿದೆ. ಆಹಾರ, ಆರೋಗ್ಯ, ಹೆಣ್ಣು, ಗುರು–ಶಿಷ್ಯರ ಬಾಂಧವ್ಯ, ಭಕ್ತಿ, ವಿಜ್ಞಾನ ಹೀಗೆ ಆಡು ಮುಟ್ಟದ ಸೊಪ್ಪಿಲ್ಲವೆಂಬಂತೆ ಅವರು ಹೇಳದ ವಿಷಯಗಳಿಲ್ಲ. ಸರ್ವಜ್ಞನ ಜ್ಞಾನವನ್ನು ಆಸ್ವಾದಿಸಬೇಕು ಎಂದು ಬೇಂದ್ರೆ ಬಣ್ಣಿಸಿದ್ದಾರೆ ಎಂದ ಅವರು ವಿದ್ಯಾರ್ಥಿಗಳನ್ನು ಕೇವಲ ರೈಮ್ಸ್, ಸಿನಿಮಾ ಗೀತೆಗಳಿಗೆ ಸೀಮಿತಗೊಳಿಸದೇ, ಸರ್ವಜ್ಞರ ತ್ರಿಪದಿಗಳ ವಾಚನ, ಕಂಠಪಾಠ ಸ್ಪರ್ಧೆಗಳನ್ನು ಏರ್ಪಡಿಸಬೇಕು.

ಜಿಲ್ಲಾ ಕುಂಬಾರ ಸಂಘದ ಅಧ್ಯಕ್ಷ ಹೆಚ್. ಮಲ್ಲಿಕಾರ್ಜುನ ಮಾತನಾಡಿ, ಭಾರತದಾದ್ಯಂತ ಪಾದಯಾತ್ರೆಯ ಮೂಲಕ ತಿರುಗಾಡಿ ಸಮಾಜದ ಡೊಂಕನ್ನು ತಿದ್ದುವ ಕೆಲಸ ಮಾಡಿದ್ದಾರೆ ಎಂದ ಅವರು ಮುಂದಿನ ದಿನಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸೇರಿ ಜಯಂತಿ ಆಚರಣೆ ಮಾಡೋಣ ಎಂದ ಅವರು ಕುಂಬಾರ ಅಭಿವೃದ್ಧಿ ನಿಗಮದಲ್ಲಿ ಸಮಾಜದ ವ್ಯಕ್ತಿಗಳಿಗೆ ಹೆಚ್ಚಿನ ಪ್ರಾತಿನಿಧ್ಯ ಕೊಡಬೇಕು. ಸಮುದಾಯ ಭವನ ನಿರ್ಮಾಣ, ಸರ್ವಜ್ಞನ ಕಂಚಿನ ಪ್ರತಿಮೆ ಸ್ಥಾಪಿಸುವಂತೆ ಮನವಿ ಮಾಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಉಮೇಶ್ ಹೆಚ್. ಸಮಾಜದ ಭಾಗ್ಯಲಕ್ಷ್ಮಿ ?ಮ, ಗಣೇಶಪ್ಪ, ಸಮಾಜದ ಇತರೆ ಮುಖಂಡರು ಹಾಜರಿದ್ದರು.

# ರಾಷ್ಟ್ರದ ಅಭಿವೃದ್ಧಿಗೆ ಸಾಮಾಜಿಕ ನ್ಯಾಯ ಅವಶ್ಯಕ : ಹನುಮಂತಪ್ಪ

**ಚಿಕ್ಕಮಗಳೂರು: ಫೆ. 20:** ರಾಷ್ಟ್ರದ ಅಭಿವೃದ್ಧಿಗೆ ಸಾಮಾಜಿಕ ನ್ಯಾಯ ಅವಶ್ಯಕ. ಸಾಮಾಜಿಕ ನ್ಯಾಯವು ರಾಷ್ಟ್ರಗಳ ಒಳಗೆ ಶಾಂತಿಯುತ ಮತ್ತು ಸಮೃದ್ಧ ಸಹಬಾಳ್ವೆಗೆ ಆಧಾರವಾಗಿರುವ ತತ್ವವಾಗಿದೆ. ಎಂದು ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ವಿ. ಹನುಮಂತಪ್ಪ ಹೇಳಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಮತ್ತು ಸಮಾಜ ಕಲ್ಯಾಣ ಇಲಾಖೆ ಇವರುಗಳ ಸಂಯುಕ್ತ ಆಶ್ರಯದಲ್ಲಿ ಇಂದು ನಗರದ ಶಾಂತಿನಗರ(ಪುರಿಭಟ್ಟಿ), ಓಂ ಶಕ್ತಿ ಸಮುದಾಯ ಭವನದಲ್ಲಿ ವಿಶ್ವ ಸಾಮಾಜಿಕ ನ್ಯಾಯ ದಿನದ ಅಂಗವಾಗಿ ಕಾನೂನು ಸಾಕ್ಷರತಾ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿಶ್ವದಾದ್ಯಂತ ಲಿಂಗ, ವಯಸ್ಸು, ಜನಾಂಗೀಯ, ಧರ್ಮ, ಸಂಸ್ಕೃತಿ, ಬಡತನ, ನಿರುದ್ಯೋಗ, ಶಿಕ್ಷಣ, ವಲಸೆ, ಆರ್ಥಿಕ ಮುಂತಾದ ಸಾಮಾಜಿಕ ಸಮಸ್ಯೆಗಳು ಗಂಭೀರವಾಗಿವೆ. ಇಂಥ ಸಮಸ್ಯೆಗಳನ್ನು ತೊಡೆದು ಹಾಕುವ ಪ್ರಯತ್ನವಾಗಬೇಕಿದೆ. ಸಾಮಾಜಿಕ ಅಸಮಾನತೆಯ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಿ ಅದನ್ನು ಸಂಪೂರ್ಣವಾಗಿ ತೊಡೆದು ಹಾಕುವ ಸಲುವಾಗಿ ಪ್ರತಿ ವರ್ಷ ಸಾಮಾಜಿಕ ನ್ಯಾಯ ದಿನ ಆಚರಿಸಲಾಗುತ್ತದೆ ಎಂದು ಹೇಳಿದರು.



ನಗರಸಭೆ ಅಧ್ಯಕ್ಷೆ ಸುಜಾತ ಶಿವಕುಮಾರ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ ನಮ್ಮ ಜೀವನಕ್ಕೆ ಅವಶ್ಯವಾದ ಕಾನೂನುಗಳ ಅರಿವು ಪ್ರತಿಯೊಬ್ಬರಿಗೂ ಇರಬೇಕು ಎನ್ನುವ ಉದ್ದೇಶದಿಂದ ಕಾನೂನು ಅರಿವು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ವಿಶ್ವದಲ್ಲೇ ಶ್ರೇಷ್ಠವಾದ ಭಾರತ ಸಂವಿಧಾನದಲ್ಲಿ ಪ್ರತಿಯೊಬ್ಬರಿಗೂ ಸಮಾನ ಅವಕಾಶಗಳನ್ನು ಕಲ್ಪಿಸಲಾಗಿದ್ದು, ಪ್ರತಿಯೊಬ್ಬರೂ ಸಂವಿಧಾನವನ್ನು ಓದಿ ತಮಗಿರುವ ಹಕ್ಕುಗಳ ಬಗ್ಗೆ ತಿಳಿದುಕೊಳ್ಳಬೇಕು. ವಿದ್ಯಾರ್ಥಿಗಳು ಉತ್ತಮ ಆಲೋಚನೆಗಳೊಂದಿಗೆ ದೇಶದ ಮಹಾನ್ ನಾಯಕರ ಹಾದಿಯನ್ನು ಅನುಸರಿಸಬೇಕು ಹಾಗೂ ಸಂವಿಧಾನದಲ್ಲಿ ನೀಡಲಾಗಿರುವ ಸಾಮಾಜಿಕ ನ್ಯಾಯದಿಂದಾಗಿ ಸಮಾಜದಲ್ಲಿ ಸಮಾನತೆಯಿದೆ. ವಿದ್ಯಾರ್ಥಿಗಳು ಕಾನೂನುಗಳ ಬಗ್ಗೆ ಅರಿತು ಇತರರಿಗೂ ಅರಿವು ಮೂಡಿಸಬೇಕು ಎಂದು ಹೇಳಿದರು.

ವಕೀಲ ಆರ್ ರಮೇಶ್ ಕಾನೂನು ಸಾಕ್ಷರತ ಬಗ್ಗೆ ಉಪನ್ಯಾಸ ನೀಡಿ. ಜಗತ್ತಿನೆಲ್ಲೆಡೆ ಲಿಂಗ ತಾರತಮ್ಯ, ಜನಾಂಗೀಯ ಸಂಘರ್ಷ, ಧರ್ಮ, ಸಂಸ್ಕೃತಿ, ಬಡತನ, ನಿರುದ್ಯೋಗ, ಅನಕ್ಷರತೆ, ವಲಸೆಯಂತಹ ಸಾಮಾಜಿಕ ಸಮಸ್ಯೆಗಳು ಗಂಭೀರವಾಗಿವೆ. ಈ ಸಮಸ್ಯೆಗಳನ್ನು ತೊಡೆದು ಹಾಕುವ ಪ್ರಯತ್ನ ಮಾಡಬೇಕಿದೆ. ಸಾಮಾಜಿಕ ಅಸಮಾನತೆ ಬಗ್ಗೆ ಜನರಲ್ಲಿ ಅರಿವು ಮೂಡಿಸಬೇಕು' ಜೊತೆಗೆ ಸಾಮಾಜಿಕ ನ್ಯಾಯವೆಂದರೆ ಸಮಾಜದಲ್ಲಿನ ಅಸಮಾನತೆ ಹೋಗಲಾಡಿಸಿ ಹಿಂದುಳಿದವರು, ಬಡವರು, ದುರ್ಬಲರು, ಅಲ್ಪಸಂಖ್ಯಾತರು, ತುಳಿತಕ್ಕೆ ಮತ್ತು ಶೋಷಣೆಗೆ ಒಳಪಟ್ಟ ಅಸಹಾಯಕರನ್ನು ರಾಜಕೀಯವಾಗಿ ಆರ್ಥಿಕವಾಗಿ ಹಾಗೂ ಸಾಮಾಜಿಕವಾಗಿ ಅಭಿವೃದ್ಧಿಪಡಿಸುವುದಾಗಿದೆ ಎಂದ ಅವರು. 'ಲಿಂಗ, ವಯಸ್ಸು, ಜನಾಂಗ, ಜನಾಂಗೀಯತೆ, ಧರ್ಮ, ಸಂಸ್ಕೃತಿ ಅಥವಾ ಅಂಗವೈಕಲ್ಯ ಇತ್ಯಾದಿಗಳಿಗೆ ಜನರು ಎದುರಿಸುತ್ತಿದ್ದಾರೆ.

ಮೂಲಭೂತ ಅಡೆತಡೆಗಳನ್ನು ತೆಗೆದುಹಾಕಲು ಸಾಮಾಜಿಕ ನ್ಯಾಯದ ತತ್ವಗಳನ್ನು ಎತ್ತಿಹಿಡಿಯುವುದು ಅವಶ್ಯಕ. ಸಾಮಾಜಿಕ ಅಭಿವೃದ್ಧಿಗಳು ಸಾಮಾಜಿಕ ನ್ಯಾಯ, ಒಗ್ಗಟ್ಟು, ಸಾಮರಸ್ಯ ಮತ್ತು ದೇಶಗಳ ಒಳಗೆ ಮತ್ತು ದೇಶಗಳ ನಡುವೆ ಸಮಾನತೆಯನ್ನು ಗುರಿಯಾಗಿರಿಸಿಕೊಂಡಿವೆ. ಸಾಮಾಜಿಕ ನ್ಯಾಯ, ಸಮಾನತೆಯು ಎಲ್ಲಾ ಸಮಾಜಗಳ ಮೂಲಭೂತ ಮೌಲ್ಯಗಳನ್ನು ರೂಪಿಸುತ್ತದೆ. ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ವಕೀಲರ ಸಂಘದ ಕಾರ್ಯದರ್ಶಿ ಅನಿಲ್ ಕುಮಾರ್, ನಗರ ಸಭೆ ಉಪಾಧ್ಯಕ್ಷೆ ಅನುಮಧುಕರ್, ನಗರಸಭೆ ವ್ಯವಸ್ಥಾಪಕ ರವಿ, ನಗರಸಭೆ ನಾಮ ನಿರ್ದೇಶಿತ ಸದಸ್ಯ ತಬ್‌ರ್ಧೀಸ್ ಅಹಮ್ಮದ್ ಮುಂತಾದವರು ಉಪಸ್ಥಿತರಿದ್ದರು.

# ಕಟ್ಟಡ ಗುಣಮಟ್ಟದಿಂದ ಕೂಡಿಲ್ಲ: ಬಿಲ್ ಪಾಸ್ ಮಾಡಬೇಡಿ



**ಜಗಳೂರು :** ಸರಕಾರ ಬಡ ವಿದ್ಯಾರ್ಥಿಗಳಿಗಾಗಿ ಸಾಕಷ್ಟು ಅನುದಾನ ನೀಡುತ್ತಿದ್ದು ಸಮರ್ಪಕವಾಗಿ ಬಳಸಿಕೊಳ್ಳಬೇಕು ನೂತನವಾಗಿ ನಿರ್ಮಾಣ ಮಾಡಲಾಗಿರುವ ಕಟ್ಟಡ ಗುಣ ಮಟ್ಟದಿಂದ ಕೂಡಿಲ್ಲ ಅದ್ದರಿಂದ ಇವರಿಗೆ ಬಿಲ್ ಮಾಡಿಕೊಡಬೇಡಿ ಎಂದು ಶಾಸಕ.ಬಿ. ದೇವೆಂದ್ರಪ್ಪ ಬಿಸಿಎಂನ ಅಧಿಕಾರಿಗಳಿಗೆ ಸೂಚನೆ ನೀಡಿದರು. ಬುಧವಾರ ತಾಲೂಕಿನ ಪಲ್ಲಾಗಟ್ಟೆ ಗ್ರಾಮದ ಹೊರವಲಯದಲ್ಲಿ ಬಿಸಿ ಎ ಂ ಇಲಾಖೆಯ ವ್ಯಾಪ್ತಿಗೆ ಬರುವ ಸರಕಾರಿ ಮೇಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿ ನಿಲಯದ ನೂತನ ಕಟ್ಟದ ಲೊಕಾರ್ಪಣೆಗೆ ಆಗಮಿಸಿದ್ದ ಶಾಸಕರು ಅಧಿಕಾರಿಗಳ ಮೇಲೆ ಗರಂ ಆದರು.ಸುಮಾರು 3. ಕೋಟಿ 28 ಲಕ್ಷ ರೂವೆಚ್ಚದಲ್ಲಿ ನಿರ್ಮಿಸಲಾಗಿರುವ ಕಟ್ಟಡಕ್ಕೆ ಗುಣ ಮಟ್ಟದ ನೆಲ ಹಾಸು ಹಾಕಿಲ್ಲ ಸುತ್ತಲು ಕಂಪೌಂಡ್ ವೈವಸ್ಥೆ ಇಲ್ಲ, ವಿದ್ಯಾರ್ಥಿ ನಿಲಯಕ್ಕೆ ಸಮರ್ಪಕವಾಗಿ ರಸ್ತೆಯನ್ನು ಸಹ ಮಾಡಿಲ್ಲ ನಿರ್ಜನ ಪ್ರದೇಶದಲ್ಲಿ ನಿರ್ಮಿಸಲಾಗಿದ್ದು ವಿದ್ಯಾರ್ಥಿಗಳು ಹೇಗೆ ಬರುತ್ತಾರೆ ಜೊತೆಗೆ ರಾತ್ರಿ ಕಾವಲುಗಾರರು ಇರುವ ವೈವಸ್ಥೆ ಇರುತ್ತಾದೆಯ ಎಂದು ಬಿಸಿಎಂ ಇಲಾಖೆಯ ಜಿಲ್ಲಾ ಅಧಿಕಾರಿ ಗಾಯಿತ್ರಿಯನ್ನು ತರಾಟೆಗೆ ತೆಗೆದು ಕೊಂಡರು. ಕಟ್ಟಡವು ಗುಣ ಮಟ್ಟದಿಂದ ಇಲ್ಲದೇ ಇರುವುದರಿಂದ ಗುತ್ತಿಗೆ ದಾರರಿಗೆ ಬಿಲ್ ಮಾಡುವುದನ್ನು ತಡೆ ಹಿಡಿದು ಉಳಿದಿರುವ ಕೆಲಸಗಳನ್ನು ಸಮರ್ಪಕವಾಗಿ ಮಾಡುವವರೆಗೆ ಬಿಲ್ಲ ಪಾವತಿ ಮಾಡಬೇಡಿ ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ವೇಳೆ ಕಾರ್ಯಕ್ರಮವನ್ನು ಉದ್ಘಾಟಿಸಿ ನಂತರ ಮಾತನಾಡಿದ ಅವರು ಬಡ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಸರಕಾರ ಸಾವಿರಾರು ಕೋಟಿ ಅನುದಾನ ನೀಡುತ್ತಿದ್ದು ಅದು ಸಮರ್ಪಕವಾಗಿ ಬಳಕೆಯಾಗಬೇಕು ಸುಮಾರು 5 ವರ್ಷಗಳಿಂದ ಪ್ರಾರಂಭವಾಗ ಕಟ್ಟಡ ಕಾಮಗಾರಿ ಆಮೆ ಗತಿಯಲ್ಲಿ ನಡೆದಿದೆ ಅಂದು ಇದ್ದ ಶಾಸಕರು ಮತತು ಅಧಿಕಾರಿಗಳ ಶ್ರಮ ಇದೆ ಅವರನ್ನು ಕರೆಸಬೇಕಾಗಿತ್ತು ಎಂದು ಹೇಳಿದರು.ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ರೇಣುಕಮ್ಮ ಗುರು ಮೂರ್ತಿ , ಇ ಕೆಂಚಪ್ಪ, ಬಿಇಓ ಹಾಲಮೂರ್ತಿ, ಟಿಪಿಓ ಸುರೇಶ್ ರೆಡ್ಡಿ, ಹಿರಿಯ ನಿಲಯ ಮೇಲ್ವಿಚಾರಕ ದೇವೇಂದ್ರಪ್ಪ, ಬಿಜೆಪಿ ಮಾಜಿ ಮಂಡಲ ಅಧ್ಯಕ್ಷ ಪಲ್ಲಾಗಟ್ಟೆ ಮಹೇಶ್, ಮಾಜಿ ಜಿ.ಪಂ ಸದಸ್ಯೆ ಜಯ ಲಕ್ಷ್ಮೀ ಮಹೇಶ್, ಗೋಡೆ ಪ್ರಕಾಶ್ ಸೇರಿದಂತೆ ವಾರ್ಡ್ ನ್ ಗಳು ಸಿಬ್ಬಂದಿಗಳು ಹಾಜರಿದ್ದರು.

# ಕೊಳವೆಬಾವಿಯಲ್ಲಿ 50 ಅಡಿ ಚಿಮ್ಮಿದ ನೀರು

**ಚಿಕ್ಕಮಗಳೂರು:** ಆಲ್ದೂರಿನಲ್ಲಿ ಕೊರೆದ ಕೊಳವೆಬಾವಿಯಲ್ಲಿ 50 ಅಡಿ ಎತ್ತರಕ್ಕೆ ನೀರು ಚಿಮ್ಮುವ ಮೂಲಕ ಕೊಳವೆಬಾವಿ ಕೊರೆಸಿದವರ ಮೊಗದಲ್ಲಿ ಮಂದಹಾಸ ಮೂಡುವಂತೆ ಮಾಡಿದೆ. ಕೊಳವೆಬಾವಿಗೆ ಕೆಂಚರಾಯಸ್ವಾಮಿ ಪಾಯಿಂಟ್ ಮಾಡಿದ್ದರು.ಪುನೀತ್ ಎಂಬುವರ ಜಮೀನಿನಲ್ಲಿ ಕೊರೆಸಿದ ಬೋರ್‌ವೆಲ್‌ನಲ್ಲಿ 5 ಇಂಚುನೀರು ಸಿಕ್ಕಿದ್ದು, ಬಾನಂಗಳಕ್ಕೆ ನೀರು ಚಿಮ್ಮುವುದರೊಂದಿಗೆ ಕೊಳವೆಬಾವಿ ಕೊರೆಸಿದವರು ಮನದಲ್ಲಿ ಸಾರ್ಥಕತೆ ಮೂಡಿದೆ.ಸಕಲೇಶಪುರ ತಾಲೂಕಿನ ಮೋಗ್ಲಿ ಗ್ರಾಮದ ಕೆಂಚರಾಯಸ್ವಾಮಿ ಇತ್ತೀಚೆಗೆ ತೆಗೆದ 15 ಬೋರ್‌ಗಳಲ್ಲೂ ಸಮೃದ್ಧ ನೀರು ಲಭಿಸಿದೆ. ನೀರು ಚಿಮ್ಮಿದಾಕ್ಷಣ ಗಂಗೆಗೆ ನಮಿಸಿದರು.5 ಇಂಚು ನೀರು ಕಂಡು ಜಮೀನಿನ ಮಾಲೀಕ ಖುಷಿಪಟ್ಟಿದ್ದಾರೆ.



# ಮಾ. 1 ರಿಂದ ದ್ವಿತೀಯ ಪಿಯುಸಿ ಪರೀಕ್ಷೆ ಸಕಲ ಸಿದ್ದತೆಗೆ ಸೂಚನೆ

**ಶಿವಮೊಗ್ಗ:** ಜಿಲ್ಲೆಯಲ್ಲಿ ಮಾರ್ಚ್ 1 ರಿಂದ 20 ರವರೆಗೆ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ ನಡೆಯಲಿದ್ದು ಪರೀಕ್ಷೆಗಳು ಶಾಂತಿಯುತವಾಗಿ ಮತ್ತು ಸುವ್ಯವಸ್ಥಿತವಾಗಿ ನಡೆಯಲು ಅವಶ್ಯಕವಾದ ಎಲ್ಲ ಸಿದ್ದತೆಗಳನ್ನು ಮಾಡಿಕೊಳ್ಳುವಂತೆ ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಚಂದ್ರಪ್ಪ ಎಸ್ ಗುಂಡಪಲ್ಲಿ ಅಧಿಕಾರಿಗಳಿಗೆ ಸೂಚನೆ ನೀಡಿದರು.ಜಿಲ್ಲಾಡಳಿತ ಕಚೇರಿ ಸಭಾಂಗಣದಲ್ಲಿ ಮಂಗಳವಾರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ ಸಿದ್ದತೆ ಕುರಿತು ಏರ್ಪಡಿಸಲಾಗಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಜಿಲ್ಲೆಯ ಒಟ್ಟು 39 ಪರೀಕ್ಷಾ ಕೇಂದ್ರಗಳಲ್ಲಿ ಒಟ್ಟು 18218 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಶಿವಮೊಗ್ಗದಲ್ಲಿ 16 ಭದ್ರಾವತಿ 06, ತೀರ್ಥಹಳ್ಳಿ 03, ಸಾಗರ 05, ಹೊಸನಗರ 03, ಶಿಕಾರಿಪುರ 04, ಸೊರಬ 02 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ.ಪರೀಕ್ಷೆಗಳು ಬೆಳಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆವರೆಗೆ ರವರೆಗೆ ನಡೆಯಲಿದ್ದು, 17193 ರೆಗ್ಯುಲರ್ ವಿದ್ಯಾರ್ಥಿಗಳು, 526 ರಿಪೀಟರ್ ಹಾಗೂ 496 ಖಾಸಗಿ ವಿದ್ಯಾರ್ಥಿಗಳು ಪರೀಕ್ಷೆ ಬರೆಯುವರು.ಪ್ರಶ್ನೆ ಪತ್ರಿಕೆ ಸಾಗಾಟ ಮಾಡಲು ತ್ರಿಸದಸ್ಯ ಸಮಿತಿ ನೇಮಿಸಲಾಗಿದೆ. ಮುಖ್ಯ ಅಧೀಕ್ಷಕರು, ಉತ್ತರ ಪತ್ರಿಕೆ ಪಾಲಕರ ನೇಮಕವಾಗಿದೆ. ಹಾಗೂ ಪ್ರತಿ ಪರೀಕ್ಷಾ ಕೇಂದ್ರಕ್ಕೆ ಒಬ್ಬರಂತೆ ಸಹ ಮುಖ್ಯ ಅಧೀಕ್ಷಕರು ಮತ್ತು ಜಾಗೃತ ದಳದ ಸದಸ್ಯರನ್ನು ನೇಮಿಸಲಾಗಿದೆ. ಪರೀಕ್ಷಾ ಕೇಂದ್ರಗಳ ಸುತ್ತಮುತ್ತ 200 ಮೀ ವ್ಯಾಪ್ತಿಯಲ್ಲಿ 144 ಸೆಕ್ಷನ್ ಜಾರಿಗೊಳಿಸಿ ಆದೇಶಿಸಲಾಗಿದೆ.ಪೊಲೀಸ್ ಇಲಾಖೆಯಿಂದ ಪರೀಕ್ಷಾ ಕೇಂದ್ರಗಳಿಗೆ ಸೂಕ್ತ ಬಂದೋಬಸ್ತ್ ಒದಗಿಸಲಾಗುವುದು. ಪರೀಕ್ಷಾ ಕೇಂದ್ರಗಳ ಅಧೀಕ್ಷಕರಿಗೆ ಈಗಾಗಲೇ ತರಬೇತಿ ನೀಡಲಾಗಿದ್ದು, ಅವರು ತಮ್ಮ ಕೇಂದ್ರದಲ್ಲಿ ಕರ್ತವ್ಯ ನಿರ್ವಹಿಸುವ ಪರೀಕ್ಷಾ ಸಿಬ್ಬಂದಿಗೆ ತರಬೇತಿ ನೀಡುವಂತೆ ತಿಳಿಸಿದರು.ಸಿಸಿ ಕ್ಯಾಮೆರಾ ಕಡ್ಡಾಯ : ಈ ಬಾರಿ ಪರೀಕ್ಷೆ ನಡೆಯುವುದನ್ನು ವೆಬ್ ಕ್ಯಾಸ್ಟಿಂಗ್ ಮೂಲಕ ವೀಕ್ಷಿಸಲಾಗುವುದು. ಆದ್ದರಿಂದ ಪ್ರತಿ ಪರೀಕ್ಷಾ ಕೇಂದ್ರದಲ್ಲಿ ಸಿ.ಸಿ. ಕ್ಯಾಮರಾ ಅಳವಡಿಕೆ ಕಡ್ಡಾಯವಾಗಿದೆ. ಯಾವ ಕೇಂದ್ರದಲ್ಲಿ ಇಲ್ಲವೋ ಮಾಹಿತಿ ನೀಡಿ ಈಗಲೇ ಸಿಸಿ ಕ್ಯಾಮೆರಾ ಅಳವಡಿಸಬೇಕು. ಪರೀಕ್ಷಾ ಕೇಂದ್ರಗಳ ಅಧೀಕ್ಷಕರು ಈ ಬಗ್ಗೆ ಪರಿಶೀಲಿಸಿ ಖಾತ್ರಿಪಡಿಸಿಕೊಳ್ಳಬೇಕು ಎಂದರು.ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷಾರ್ಥಿಗಳಿಗೆ ಕುಡಿಯುವ ನೀರು, ಸೂಕ್ತ ಆಸನಗಳ ವ್ಯವಸ್ಥೆ ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಒದಗಿಸುವಂತೆ ಸೂಚನೆ ನೀಡಿದರು.

# ಮಳಲೂರು ಏತ ನೀರಾವರಿ ಯೋಜನೆ ಪೂರ್ಣ ಗೊಳಿಸುವಂತೆ ಮನವಿ

**ಚಿಕ್ಕಮಗಳೂರು:** ಮಳಲೂರು ಏತ ನೀರಾವರಿ ಯೋಜನೆಯ ಭೂ ಸ್ವಾಧೀನ ಪ್ರಕ್ರಿಯೆಗೆ ಸಹಕಾರ ನೀಡಿ ಶೀಘ್ರ ರೈತರ ಸಭೆ ಕರೆದು ಸಂತ್ರಸ್ಥ ರೈತರಿಗೆ ಪರಿಹಾರ ನೀಡಿ ಯೋಜನೆ ಪೂರ್ಣಗೊಳಿಸಬೇಕು ಎಂದು ಮಳಲೂರು ಭಾಗದ ಸಂತ್ರಸ್ತ ರೈತ ಸೋಮೇಗೌಡ ಆಗ್ರಹಿಸಿದರು.ಅವರು ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಮಳಲೂರು, ಕಂಬೀಹಳ್ಳಿ, ಬಿಗ್ಗನಹಳ್ಳಿ, ಕದ್ರಿಮಿದ್ರಿ ಹಾಗೂ ತಗಡೂರು ಗ್ರಾಮಗಳಿಗೆ ಅನುಕೂಲ ಕಲ್ಪಿಸುವ ಮಳಲೂರು ಏತ ನೀರಾವರಿ ಯೋಜನೆ ಸುಮಾರು 35 ವರ್ಷಗಳಿಂದ ನೆನಗುದಿಗೆ ಬಿದ್ದಿದೆ. ಇದನ್ನು ಗಮನಿಸಿದ ಜಿಲ್ಲಾಧಿಕಾರಿಗಳು 6 ತಿಂಗಳ ಒಳಗೆ ತುರ್ತು ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದಾರೆ ಎಂದರು.ತ್ವರಿತವಾಗಿ ಯೋಜನೆ ಪೂರ್ಣಗೊಳಿಸಲು ಯೋಜನೆಯ ಎಲ್ಲ ಕಾರ್ಯಗಳನ್ನು ಮುತುವರ್ಜಿ ವಹಿಸಿ ಭೂ ಸ್ವಾಧೀನಕ್ಕೆ ಸರಕಾರದಿಂದ ಎಲ್ಲ ಅನುಮತಿ ದೊರಕಿಸಿಕೊಟ್ಟಿದ್ದಾರೆ. ಹೀಗಾಗಿ ಜಿಲ್ಲಾಧಿಕಾರಿಗಳನ್ನು ಈ ಎಲ್ಲ ಗ್ರಾಮಗಳ ಗ್ರಾಮಸ್ಥರು ಅಭಿನಂದಿಸುತ್ತೇವೆ ಎಂದರು.ಫೆ.28 ರಂದು ಉಪ ವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ತಾಲ್ಲೂಕು ಕಚೇರಿಯಲ್ಲಿ ನಡೆಯಲಿರುವ ರೈತರ ಸಭೆಯಲ್ಲಿ ಏಕರೂಪದ ಪರಿಹಾರ ನಿಗದಿ ಮಾಡುವಂತೆ ಒತ್ತಾಯಿಸುತ್ತೇವೆ. ಇನ್ನೂ 100 ಜನರಿಗೆ ಪರಿಹಾರ ನೀಡಬೇಕು. ಅವರಿಗೂ ಸಹ ಶೀಘ್ರ ಪರಿಹಾರ ದೊರಕಿಸಿಕೊಡಬೇಕು ಎಂದು ಒತ್ತಾಯಿಸಿದರು.ಬಾಕಿ ಉಳಿದಿರುವ ಕಾಮಗಾರಿಗಳು ಮತ್ತು ಭೂ ಸ್ವಾಧೀನ ಪ್ರಕ್ರಿಯೆಗೆ ಇದೇ ರೀತಿಯ ಸಹಕಾರ ನೀಡಿ ತುರ್ತಾಗಿ ರೈತರ ಸಭೆ ಕರೆದು ಪರಿಹಾರ ಕೊಡಿಸಿ ಕೊಡಬೇಕು ಹಾಗೂ ಯೋಜನೆಯನ್ನು ಶೀಘ್ರ ಪೂರ್ಣ ಗೊಳಿಸಿಕೊಡಬೇಕು ಎಂದು ಮನವಿ ಮಾಡುತ್ತೇವೆ ಎಂದು ಹೇಳಿದರು. ಗೋಷ್ಠಿಯಲ್ಲಿ ಟಿ.ಎಲ್. ಗಣೇಶ್, ಕಲ್ಲೇಗೌಡ, ಅಶ್ವಥ್ ಮತ್ತಿತರರಿದ್ದರು.

# ಅಕ್ರಮ ಮರಳು ದಂಧೆಗೆ ಕಡಿವಾಣ ಹಾಕಿ

**ಶಿವಮೊಗ್ಗ:** ಭದ್ರಾವತಿ ನಗರದ ಭದ್ರಾ ನದಿ ತಟದಲ್ಲಿ ನಡೆಯುತ್ತಿದ್ದ ಅಕ್ರಮ ಮರಳು ದಂಧೆಗೆ ಕಡಿವಾಣ ಹಾಕಲು ಮುಂದಾದ ಮಹಿಳಾ ಅಧಿಕಾರಿಗೆ, ದಂಧೆಕೋರರು ಜೀವ ಬೆದರಿಕೆ ಹಾಕಿ ಅವಾಚ್ಯ ಶಬ್ದಗಳಿಂದ ನಿಂದಿಸಿದ ಪ್ರಕರಣ ರಾಜ್ಯಾದ್ಯಂತ ಸದ್ದು ಮಾಡಿತ್ತು.ಸದರಿ ಪ್ರಕರಣ ಇನ್ನೂ ಜನಮಾನಸದಲ್ಲಿ ಹಚ್ಚ ಹಸಿರಾಗಿದೆ. ಈ ನಡುವೆ ಭದ್ರಾವತಿ ನಗರದ ಪೇಪರ್ ಟೌನ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ, ಯುವಕರ ಎರಡು ಗುಂಪುಗಳು,, ಹಾಡಹಗಲೇ ಜನನಿಬಿಡ ರಸ್ತೆಯಲ್ಲಿಯೇ ಹೊಡೆದಾಡಿಕೊಂಡಿರುವ ವೀಡಿಯೋವೊಂದು ವೈರಲ್ ಆಗಿದೆ! ಆದರೆ ಈ ಕುರಿತಂತೆ ಪೊಲೀಸ್ ಠಾಣೆಯಲ್ಲಿ ಯಾವುದೇ ದೂರು ದಾಖಲಾಗಿಲ್ಲ ಎಂಬ ಮಾಹಿತಿ ಲಭ್ಯವಾಗಿದೆ!ಕಳೆದ ಫೆಬ್ರವರಿ 9 ರಂದು ಸದರಿ ಮಾರಾಮಾರಿ ಘಟನೆ ನಡೆದಿದೆ ಎನ್ನಲಾಗಿದೆ. ಭದ್ರಾವತಿ ಪಟ್ಟಣದ ಉಜ್ಜನಿಪುರ ಸರ್ಕಲ್ ನಲ್ಲಿ ಘಟನೆ ನಡೆದಿದೆ. ಲಾಂಗ್, ದೊಣ್ಣೆಗಳಿಂದ ಎರಡು ಗುಂಪುಗಳು ಹೊಡೆದಾಡಿಕೊಂಡಿವೆ. ಕಲ್ಲು ತೂರಾಟ ಕೂಡ ಮಾಡಿಕೊಂಡಿವೆ ಎಂದು ತಿಳಿದುಬಂದಿದೆ.ಓಸಿ ವ್ಯವಹಾರಕ್ಕೆ ಸಂಬಂಧಿಸಿದಂತೆ ಎರಡು ಗುಂಪುಗಳ ನಡುವೆ ಮಾರಾಮಾರಿ ಘಟನೆ ನಡೆದಿದೆ ಎಂದು ಹೇಳಲಾಗಿದೆ. ಈ ಹೊಡೆದಾಟವು ಸಮೀಪದ ಕಟ್ಟಡಗಳಲ್ಲಿ ಅಳವಡಿಸಿರುವ ಸಿಸಿ ಕ್ಯಾಮರಾಗಳಲ್ಲಿ ಸೆರೆಯಾಗಿದೆ. ಘಟನೆ ನಡೆದ ಹಲವು ದಿನಗಳ ನಂತರ ಸದರಿ ಮಾರಾಮಾರಿ ವೀಡಿಯೋ ವೈರಲ್ ಆಗಿದೆ.ಸಾರ್ವಜನಿಕ ಸ್ಥಳದಲ್ಲಿಯೇ ಇಷ್ಟೆಲ್ಲ ರಾದ್ಧಾಂತ ನಡೆದರೂ ಪೊಲೀಸ್ ಠಾಣೆಯಲ್ಲಿ ಯಾವುದೇ ದೂರು ದಾಖಲಾಗಿಲ್ಲ. ಪೊಲೀಸರು ಯಾರ ವಿರುದ್ಧವೂ ಕ್ರಮಕೈಗೊಳ್ಳದಿರುವುದು ಅಚ್ಚರಿಗೆ ಕಾರಣವಾಗಿದೆ.ಒಟ್ಟಾರೆ ಸದರಿ ಗ್ಯಾಂಗ್ ವಾರ್ ಪ್ರಕರಣದಿಂದ ಮತ್ತೊಮ್ಮೆ ಭದ್ರಾವತಿ ನಗರದ ಕಾನೂನು ಸುವ್ಯವಸ್ಥೆಯ ವಿಷಯವು

# ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣೆ ಕಾಯ್ದೆ: ಮಹಿಳೆಯರಿಗೆ ಅರಿವು ಮೂಡಿಸಿ: ನ್ಯಾ. ಸಹನ

**ಚಿತ್ರದುರ್ಗ :** "ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣೆ ಕಾಯ್ದೆ" ಕುರಿತು ಮಹಿಳೆಯರಿಗೆ ಹೆಚ್ಚಿನ ಅರಿವು ಮೂಡಿಸಬೇಕು ಎಂದು ಜಿಲ್ಲಾ ನ್ಯಾಯಾಲಯದ ಜೆಎಂಎಫ್‌ಸಿ 2ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರಾದ ಆರ್.ಸಹನ ಹೇಳಿದರು.

ನಗರದ ಜಿಲ್ಲಾ ಬಾಲಭವನ ಸಭಾಂಗಣದಲ್ಲಿ ಗುರುವಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದಲ್ಲಿ "ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣೆ ಕಾಯ್ದೆ ಅನುಷ್ಠಾನದಲ್ಲಿ ಭಾಗೀದಾರ ಇಲಾಖೆಗಳ ಪಾತ್ರದ ಕುರಿತು ಎರಡು ದಿನಗಳ ಓರಿಯಂಟೇಷನ್ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

"ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣೆ ಕಾಯ್ದೆ ಜಾರಿಗೆ ಬಂದಿದ್ದರೂ ಸಹ ಸಾಕಷ್ಟು ಪ್ರಕರಣಗಳು ವರದಿಯಾಗುವುದಿಲ್ಲ. ಕಾರಣ ಈ ಕಾಯ್ದೆ ಕುರಿತು ಮಹಿಳೆಯರಿಗೆ ಹೆಚ್ಚಿನ ಅರಿವು ಇರುವುದಿಲ್ಲ. ಹಾಗಾಗಿ ನಾವೆಲ್ಲರೂ ಸೇರಿ ಅರಿವು ಮೂಡಿಸಿದಾಗ ಮಾತ್ರ ಕಾಯ್ದೆಯನ್ನು ಸಮರ್ಪಕವಾಗಿ ಅನುಷ್ಠಾನ ಮಾಡಲು ಸಾಧ್ಯವಿದೆ ಎಂದು ಅಭಿಪ್ರಾಯಪಟ್ಟರು.

ಕೆಲಸದ ಸ್ಥಳದಲ್ಲಿ ಲೈಂಗಿಕ ಕಿರುಕುಳ ತಡೆ ಕಾಯ್ದೆ ಸಮಿತಿ ಅಧ್ಯಕ್ಷೆ ಹಾಗೂ ವಕೀಲೆ ಡಿ.ಕೆ. ಶೀಲಾ, "ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣೆ ಕಾಯ್ದೆ–2005 ಜಾರಿಗೆ ಬಂದಿದೆ. ಮಹಿಳೆ ಯಾವುದೇ ಧರ್ಮಕ್ಕೆ ಸೇರಿರಲಿ ಅಥವಾ ಯಾವುದೇ ಸಾಮಾಜಿಕ ಹಿನ್ನಲೆ ಹೊಂದಿರಲಿ 'ಕೌಟುಂಬಿಕ ಹಿಂಸೆಯಿಂದ ಮಹಿಳೆಯ ಸಂರಕ್ಷಣೆ ಕಾಯ್ದೆ ಆಕೆಗೆ ಅನ್ವಯವಾಗಲಿದೆ ಎಂದು ಹೇಳಿದರು.

ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣೆ ಕಾಯ್ದೆ ಅಡಿಯಲ್ಲಿ ಪ್ರಕರಣ ದಾಖಲಾದರೆ ಪ್ರಕರಣವನ್ನು 60 ದಿನದೊಳಗೆ ಮುಕ್ತಾಯಗೊಳಿಸಬೇಕು. ಮಹಿಳೆಯರ ಮೇಲಿನ ದೈಹಿಕ ಹಲ್ಲೆ, ನಿಂದನೆ, ಮಾನಸಿಕ, ಭಾವನಾತ್ಮಕ ಹಾಗೂ ಕೌಟುಂಬಿಕ ಹಿಂಸೆಗಳು ಈ ಕಾಯ್ದೆಯ ವ್ಯಾಪ್ತಿಗೆ ಬರುತ್ತವೆ ಎಂದು ತಿಳಿಸಿದ ಅವರು, ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣೆ ಕಾಯ್ದೆಯ ಬಲ ಇದ್ದರೂ ಹಿಂಸೆಯ ಪ್ರಕರಣಗಳು ಕಡಿಮೆಯಾಗಿಲ್ಲ ಎಂದು ಹೇಳಿದರು.



ಮಹಿಳೆಯರಿಗೆ ಮನೆಯ ಒಳಗೆಯೇ ಗೌರವ, ರಕ್ಷಣೆ ಇಲ್ಲದಿದ್ದರೆ ಮನೆಯ ಹೊರಗಡೆ ಹೋಗಿ ಯಾವ ರೀತಿಯಾಗಿ ದುಡಿಮೆ ಮಾಡಲು ಸಾಧ್ಯ. ಮಹಿಳೆಯರು ಸಮಾಜಕ್ಕೆ ಏನಾದರೂ ಕೊಡುಗೆ ನೀಡಲು ಮನೆಯಲ್ಲಿ ಉತ್ತಮ ವಾತಾವರಣ ಹಾಗೂ ಕುಟುಂಬದ ಸದಸ್ಯರು ಸಹಕಾರ ಅಗತ್ಯವಾಗಿದೆ. ಇದರಿಂದ ಮಹಿಳೆಯು ಏನಾದರೂ ಸಾಧನೆ ಮಾಡಲು ಸಾಧ್ಯ ಎಂದು ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್ ಮಾತನಾಡಿ, "ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣೆ ಕಾಯ್ದೆ" ಅನ್ವಯ ಜಿಲ್ಲೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ಹಾಗೂ ಎಲ್ಲ ತಾಲ್ಲೂಕಿನಲ್ಲಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಸಂರಕ್ಷಣಾಧಿಕಾರಿಗಳಾಗಿ ಕಾರ್ಯನಿರ್ವಹಿಸಲಿದ್ದು, ಮಹಿಳೆಯರಿಗೆ ನೆರವು ನೀಡಲು ಸಾಂತ್ವಾನ ಕೇಂದ್ರಗಳು, ಸ್ವ–ಆಧಾರ್ ಕೇಂದ್ರ ಈ ಕಾಯ್ದೆಯಡಿಯಲ್ಲಿ ರಕ್ಷಣಾ ಗೃಹಗಳೆಂದು ಅಧಿಸೂಚನೆ ಹೊರಡಿಸಲಾಗಿದೆ ಎಂದು ಹೇಳಿದರು.

ಸಂಪನ್ಮೂಲ ವ್ಯಕ್ತಿಗಳಾದ ವಕೀಲ ಹಾಗೂ ವರದಕ್ಷಣೆ ವಿರೋಧಿ ವೇದಿಕೆ ಪ್ರಧಾನ ಕಾರ್ಯದರ್ಶಿ ಸಾ.ಚಿ.ರಾಜ್ ಕುಮಾರ್ ಅವರು, ಕೌಟುಂಬಿಕ ದೌರ್ಜನ್ಯ ಕಾಯ್ದೆಯ ಸ್ವರೂಪ, ಕಾಯ್ದೆ ಅನುಷ್ಠಾನಕ್ಕಾಗಿ ಕೈಗೊಂಡಿರುವ ಕಾರ್ಯಕ್ರಮಗಳು, ಲಿಂಗತಾರತಮ್ಯ, ದೌರ್ಜನ್ಯ ಎದುರಿಸುತ್ತಿರುವ ಮಹಿಳೆಯರಿಗೆ ಸಮಾಲೋಚನೆ ಮತ್ತು ಪರಿಣಾಮಗಳು, ಕಾಯ್ದೆ ಜಾರಿ ಮಾಡುವಾಗ ಎದುರಿಸುವ ಸಮಸ್ಯೆಗಳು ಮತ್ತು ಸವಾಲುಗಳು ಮತ್ತು ಡಿ.ಐ.ಆರ್ ತಯಾರಿಸುವುದು ಕುರಿತು ಉಪನ್ಯಾಸ ನೀಡಿದರು.

ಮೊಳಕಾಲ್ಮುರು ಪೊಲೀಸ್ ಠಾಣೆ ವೃತ್ತ ನಿರೀಕ್ಷಕ ವಸಂತ್ ಅಸೂಡೆ ಅವರು ಕೌಟುಂಬಿಕ ದೌರ್ಜನ್ಯ ಕಾಯ್ದೆಯಡಿ ಕಾನೂನು ಹಾಗೂ ಕಾರ್ಯವಿಧಾನದ ವಿಷಯಗಳು–ಕಾನೂನಿನಡಿ ಮಹಿಳೆಯರಿಗೆ ಲಭ್ಯವಿರುವ ಪರಿಹಾರಗಳು, ಇ–ಕೋರ್ಟ್ ಫೋರ್ಟ್‌ಲ್ ಬಗ್ಗೆ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಅಭಿವನ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಿಲ್ಲಾ ನಿರೂಪಣಾಧಿಕಾರಿ ಎಸ್.ವಿಜಯ್ ಕುಮಾರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಎನ್.ಪವಿತ್ರ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸವಿತಾ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ. ವೈಶಾಲಿ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**